ಸಂಪುಟ: 05 ಸಂಚಿಕೆ: 165 ಪುಟಗಳು: 08 ಶುಕ್ರವಾರ 29 ಆಗಸ್ಟ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**

ವಿಕಾಸವೇ ಜೀವನ,
ಸಂಕೋಚವೇ ಮರಣ,
ಪ್ರೇಮವೆಲ್ಲಾ ವಿಕಾಸ,
ಸ್ವಾರ್ಥವೆಲ್ಲಾ ಸಂಕೋಚ,
ಆದುದರಿಂದ ಪ್ರೇಮವೇ
ಬದುಕಿನ ಧರ್ಮ

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ನಷ್ಟದಲ್ಲಿವೆ 14,670 ಸಹಕಾರ ಸಂಘಗಳು: ಸಿಎಂ ಸಿದ್ದರಾಮಯ್ಯ

• ಉದಯವಾಹಿನಿ, ಬೆಂಗಳೂರು

ಸಾಲ ವಸೂಲಾತಿ ಕೆಲಸ ಸಮರ್ಪಕವಾಗಿ ನಡೆಯದೇ 2,200 ಹಾಲು ಉತ್ಪಾದಕ ಸಂಘಗಳೂ ಸೇರಿ ರಾಜ್ಯದಲ್ಲಿ 14,670 ಸಹಕಾರ ಸಂಘಗಳು ನಷ್ಟದಲ್ಲಿವೆ. ಸಹಕಾರ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯನ್ನು ಗುರುವಾರ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಈ ಕುರಿತು ಮಾಹಿತಿ ನೀಡಿದರು. 28,516 ಸಹಕಾರ ಸಂಘಗಳು ಲಾಭದಲ್ಲಿವೆ. ಅವುಗಳ ಅರ್ಧದಷ್ಟು ಸಂಘಗಳು ನಷ್ಟದಲ್ಲಿವೆ. ಸಾಲ ವಸೂಲಾತಿಯಲ್ಲಿನ ಸಮಸ್ಯೆಗಳೇ ಈ ನಷ್ಟಕ್ಕೆ ಕಾರಣ. ವಸೂಲಾತಿಗೆ ಕೈಗೊಂಡ ಕ್ರಮಗಳ ಬಗ್ಗೆ ತ್ವರಿತವಾಗಿ ಪರಿಶೀಲನೆ ನಡೆಸಬೇಕು. ಹಾಲು ಉತ್ಪಾದಕ ಸಹಕಾರ ಸಂಘಗಳ ವೆಚ್ಚದ ಮೇಲೆ ನಿಗಾ ಇರಿಸಬೇಕು. ಹಾಲು ಉತ್ಪಾದನೆಯನ್ನು ಹೆಚ್ಚಿಸಲು ಸಂಘಗಳ ಕಾರ್ಯದರ್ಶಿಗಳು ಶ್ರಮಿಸಬೇಕು. ಪುನಶ್ಚತನಕ್ಕೆ ಕ್ರಮ ಕೈಗೊಳ್ಳಬೇಕು' ಎಂದು ಸೂಚಿಸಿದರು. ಸಹಕಾರ ಸಂಘಗಳ ನಿಬಂಧಕರ ಕಚೇರಿಯ ವ್ಯಾಪ್ತಿಯ ಸೇವೆಗಳನ್ನು ಗಣಕೀಕರಿಸುವ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು. ರಾಜ್ಯದಲ್ಲಿ ಸಹಕಾರಿ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಬೇಕು. ಕಾನೂನು ಪ್ರಕಾರ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

## ಶೀಘ್ರವೇ ಪೊಲೀಸ್ ಮಹಾನಿರ್ದೇಶಕರ ನೇಮಕ

• ಉದಯವಾಹಿನಿ, ಬೆಂಗಳೂರು

'ಕೇಂದ್ರ ಲೋಕಸೇವಾ ಆಯೋಗದ ಉನ್ನತಮಟ್ಟದ ಸಮಿತಿಗೆ ರಾಜ್ಯ ಪೊಲೀಸ್ ಮಹಾ ನಿರ್ದೇಶಕರನ್ನು ನೇಮಕ ಮಾಡುವ ಸಂಬಂಧ ನಿರ್ದಿಷ್ಟ ಹೆಸರುಗಳನ್ನು ಶಿಫಾರಸು ಮಾಡಲಾಗಿದ್ದು, ಅಲ್ಲಿಂದ ವರದಿ ಬಂದ ಒಂದು ವಾರದಲ್ಲಿ ಕಾಯಂ ನೇಮಕ ಮಾಡಲಾಗುವುದು' ಎಂದು ರಾಜ್ಯ ಸರ್ಕಾರ ಹೈಕೋರ್ಟ್‌ಗೆ ತಿಳಿಸಿದೆ. 'ರಾಜ್ಯ ಪ್ರಭಾರ ಪೊಲೀಸ್ ಮಹಾ ನಿರ್ದೇಶಕರಾಗಿ (ಡಿಜಿ–ಐಜಿಪಿ) ಐಪಿಎಸ್ ಅಧಿಕಾರಿ ಎಂ.ಎ.ಸಲೀಂ ಅವರನ್ನು ನೇಮಕ ಮಾಡಿ ಸರ್ಕಾರ ಹೊರಡಿಸಿರುವ ಆದೇಶ ರದ್ದುಪಡಿಸಬೇಕು' ಎಂದು ಕೋರಿ ಹೈಕೋರ್ಟ್ ವಕೀಲೆ ಸುಧಾ ಕಾಟ್ವ ಸಲ್ಲಿಸಿದ್ದ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ನೇತೃತ್ವದ ವಿಭಾಗೀಯ ನ್ಯಾಯಪೀಠ ಗುರುವಾರ ವಜಾಗೊಳಿಸಿತು. ರಾಜ್ಯ ಸರ್ಕಾರದ ಪರ ಹಾಜರಾಗಿದ್ದ ಅಡ್ವಕೇಟ್ ಜನರಲ್ ಕೆ.ಶಶಿಕಿರಣ್ ಶೆಟ್ಟಿ ಅವರು, 'ನಿರ್ದಿಷ್ಟ ಅಧಿಕಾರಿಗಳ ಹೆಸರುಗಳನ್ನು ಆಯೋಗಕ್ಕೆ ಶಿಫಾರಸು ಮಾಡಲಾಗಿದೆ. ಯುಪಿಎಸ್‌ಸಿ ಸಮಿತಿಯು ಇದೇ 26ರಂದು ಸಭೆಯನ್ನೂ ನಡೆಸಿದೆ.

## ಜಿಎಸ್‌ಟಿ ಸರಳೀಕರಣ ಮಹತ್ವದ ಹೆಜ್ಜೆ: ಬಸವರಾಜ ಬೊಮ್ಮಾಯಿ

• ಉದಯವಾಹಿನಿ, ಬೆಂಗಳೂರು


'ಜಿಎಸ್‌ಟಿ ಕಡಿತ ಮತ್ತು ಸರಳೀಕರಣದ ತೀರ್ಮಾನದಿಂದ ಭಾರತ ವಿಶ್ವದ ಮೂರನೇ ಆರ್ಥಿಕ ಶಕ್ತಿಯಾಗಲಿದೆ. ಇದು ಮುಂದಿನ ತಲೆಮಾರಿನ ಸುಧಾರಣೆಗೆ ಮಹತ್ವದ ಹೆಜ್ಜೆ' ಎಂದು ಬಿಜೆಪಿ ಸಂಸದ ಬಸವರಾಜ ಬೊಮ್ಮಾಯಿ ಬಣ್ಣಿಸಿದ್ದಾರೆ. 'ಜಿಎಸ್‌ಟಿ ಜಾರಿ, ತೆರಿಗೆ ಸಂಗ್ರಹ ಅತ್ಯಂತ ಸವಾಲಿನ ಕೆಲಸವಾಗಿತ್ತು. ಆರಂಭದಲ್ಲಿ ರಾಜ್ಯಗಳೂ ಕೂಡ ಹಿಂಜರಿಕೆಯಿಂದಲೇ ಇದ್ದವು. ನಂತರ ಇದು ಆರ್ಥಿಕ ಬೆಳವಣಿಗೆಯ ಬುನಾದಿ ಎಂಬುದನ್ನು ಅರಿತವು. ಜಿಎಸ್‌ಟಿ ಸರಳೀಕರಣದ ನಿರ್ಧಾರ ದೇಶದ ಒಕ್ಕೂಟ ವ್ಯವಸ್ಥೆಯನ್ನು ಬಲಗೊಳಿಸುವಲ್ಲಿ ನೆರವಾಗಲಿದೆ' ಎಂದು ಹೇಳಿದ್ದಾರೆ. 'ನಾನು ಮುಖ್ಯಮಂತ್ರಿಯಾಗಿದ್ದಾಗ ಜಿಎಸ್‌ಟಿ ಕೌನ್ಸಿಲ್ ತಂಡದ ನಾಯಕತ್ವ ವಹಿಸಿಕೊಳ್ಳಲು ಅವಕಾಶ ಸಿಕ್ಕಿದ್ದು, ತೆರಿಗೆ ಸುಧಾರಣೆಯಲ್ಲಿ ಸಾಕಷ್ಟು ಸಲಹೆಗಳನ್ನು ನೀಡಲಾಗಿತ್ತು. ಪ್ರಸ್ತುತ ನೀವು ವೈಯಕ್ತಿಕ ಮುತುವರ್ಜಿ ವಹಿಸಿ ತೆರಿಗೆ ಸುಧಾರಣೆ ಮತ್ತು ಸ್ಲಾಬ್ ಕಡಿತ ಮಾಡಲು ತೀರ್ಮಾನಿಸಿದ್ದು, ಇದನ್ನು ಇಡೀ ದೇಶ ಮುಕ್ತ ಮನಸ್ಸಿನಿಂದ ಸ್ವಾಗತಿಸಿದೆ.

## ಯುಜಿಸಿ ಪಠ್ಯಕ್ರಮಕ್ಕೆ ರಾಜ್ಯದ ವಿರೋಧ: ಪಠ್ಯಕ್ರಮ ಒಪ್ಪುವುದಿಲ್ಲ

• ಉದಯವಾಹಿನಿ, ಬೆಂಗಳೂರು

ವಿಶ್ವವಿದ್ಯಾಲಯ ಧನ ಸಹಾಯ ಆಯೋಗ ಬಿಡುಗಡೆ ಮಾಡಿರುವ 'ಕಲಿಕಾ ಪಠ್ಯಕ್ರಮ ಆಧಾರಿತ ಕಲಿಕಾ ಚೌಕಟ್ಟು' ಕರಡು ಪ್ರತಿಗೆ ರಾಜ್ಯ ಸರ್ಕಾರ ತೀವ್ರ ವಿರೋಧ ವ್ಯಕ್ತಪಡಿಸಿದೆ. ಈ ಬಗ್ಗೆ ಮಾತನಾಡಿದ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್, 'ಯುಜಿಸಿ ರೂಪಿಸಿದ ಪಠ್ಯಕ್ರಮವನ್ನು ಒಪ್ಪಿಕೊಳ್ಳುವ ಪ್ರಶ್ನೆಯೇ ಇಲ್ಲ' ಎಂದರು. ಯುಜಿಸಿ ಒಂದು ನಿಯಂತ್ರಣ ಸಂಸ್ಥೆ. ಅದು ಪಠ್ಯಕ್ರಮ ರೂಪಿಸಲು ಅಧಿಕಾರ ಹೊಂದಿಲ್ಲ. ಪಠ್ಯಕ್ರಮ ರೂಪಿಸುವ ಅಧಿಕಾರವು ಪ್ರತಿ ವಿಶ್ವವಿದ್ಯಾಲಯದ ಅಧ್ಯಯನ ಮಂಡಳಿಗೆ (ಬಿಒಎಸ್) ಇದೆ. ಯುಜಿಸಿ ಬಿಡುಗಡೆ ಮಾಡಿದ ಪಠ್ಯಕ್ರಮ ಕರಡನ್ನು ಅಧ್ಯಯನ ಮಾಡಲು ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಮಂಡಳಿ ತಜ್ಞರ ಸಮಿತಿಯನ್ನು ರಚಿಸಲಿದೆ' ಎಂದರು. ಯುಜಿಸಿ ಎಲ್ಲ ವಿಷಯಗಳಲ್ಲಿ ಹಸ್ತಕ್ಷೇಪ ಮಾಡುತ್ತಿರುವುದು ಏಕೆಂದು ನಮಗೂ ಅರ್ಥವಾಗುತ್ತಿಲ್ಲ. ಅದು ತನ್ನ ' ಮಿತಿಗಳನ್ನು ತಿಳಿದುಕೊಳ್ಳಬೇಕು. ಯುಜಿಸಿಗೆ ಪಠ್ಯದ ಚೌಕಟ್ಟು ರೂಪಿಸುವ ಹಕ್ಕಿದೆಯೇ ಹೊರತು ಪಠ್ಯಕ್ರಮ ಅಲ್ಲ' ಎಂದರು. ಕೇಂದ್ರ ಸರ್ಕಾರವು ಶಿಕ್ಷಣ ವ್ಯವಸ್ಥೆಯ ಮೇಲೆ ಹಿಡಿತ ಸಾಧಿಸಲು ಮತ್ತು ತನ್ನ ಸಿದ್ಧಾಂತಗಳನ್ನು ಮಕ್ಕಳ ಮೇಲೆ ಹೇರಲು ಪ್ರಯತ್ನಿಸುತ್ತಿದೆ

# ಬಂಡೆ ಭಂಡತನ ಸಹಿಸಲ್ಲ ಸಣ್ಣತನ



ಉಪಮುಖ್ಯಮಂತ್ರಿ ಮತ್ತು ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಓರ್ವ ಅಪ್ಪಟ ಹಿಂದೂವಾಗಿದ್ದು, ಅವರ ವಿರುದ್ಧ ಇಲ್ಲಸಲ್ಲದ ಆರೋಪ ಮಾಡುತ್ತಿರುವ ಬಿಜೆಪಿ ನಾಯಕರು, ತಮ್ಮ ಸಂಕುಚಿತ ಮನೋಭಾವನೆಯನ್ನು ಹೊರಹಾಕಿದ್ದಾರೆ. ದಸರಾ ವಿಚಾರವಾಗಿ ಯಾರು ರಾಜಕೀಯ ಮಾಡುತ್ತಿದ್ದಾರೆ ಎಂಬುದು ರಾಜ್ಯದ ಜನತೆಗೆ ಗೊತ್ತಿದೆ. ಬಿಜೆಪಿ ನಾಯಕರು ನಮ್ಮ ಮೇಲೆ ಗೂಬೆ ಕೂರಿಸುವ ಪ್ರಯತ್ನ ನಡೆಸುತ್ತಿದ್ದು, ಇದು ಯಶಸ್ವಿಯಾಗುವುದಿಲ್ಲ

-ದಿನೇಶ್ ಗುಂಡೂರಾವ್ ಸಚಿವ

• ಉದಯವಾಹಿನಿ, ಬೆಂಗಳೂರು

ರಾಜಕೀಯದವರು, ಮಾಧ್ಯಮಗಳು, ಪ್ರಮೋದಾ ದೇವಿ ಅವರು, ಸಂಸದ ಯದುವೀರ್ ಅವರು – ಹೀಗೇ ಎಲ್ಲರೂ ತಪ್ಪು ಹುಡುಕುವವರೇ. ಚಾಮುಂಡಿ ಬೆಟ್ಟ, ಚಾಮುಂಡಿ ದೇವರು ಎಲ್ಲಾ ಧರ್ಮದವರಿಗೂ ಇದೆ. ಹಿಂದೂಗಳ ಆಸ್ತಿ ಏನಲ್ಲ ಎಂದು ಡಿಕೆ ಶಿವಕುಮಾರ್ ಹೇಳಿಕೆ ನೀಡಿದ್ದರು. ಈ ಹೇಳಿಕೆ ವಿಪಕ್ಷದವರ ವ್ಯಾಪಕ ವಿರೋಧ ಕಾರಣವಾಗಿದೆ.

ಚಾಮುಂಡಿ ಬೆಟ್ಟವನ್ನು ಬಾನು ಮುಷ್ತಾಕ್ ಹತ್ತಬಾರದು, ತಾಯಿ ಭುವನೇಶ್ವರಿಗೆ ಅಪಮಾನ ಮಾಡಿದ ಬಾನು ಮುಷ್ತಾಕ್ ದಸರಾ ಉದ್ಘಾಟನೆಗೆ, ಚಾಮುಂಡಿ ತಾಯಿ ಪೂಜೆಯಲ್ಲಿ ಅವರು ಭಾಗವಹಿಸಬಾರದು ಎಂದು ಸಂಸದೆ ಶೋಭಾ ಕರಂದ್ಲಾಜೆ ಹೇಳಿಕೆಗೆ ಪ್ರತಿಕ್ರಿಯೆಯಾಗಿ ಡಿಕೆಶಿ ಮಾತನಾಡಿದ್ದರು. ಹಿಂದೂಗಳ ಆಸ್ತಿ ಏನಲ್ಲ ಎಂದು ಡಿಕೆಶಿಯ ಹೇಳಿಕೆಗೆ ವ್ಯಾಪಕ ವಿರೋಧ ವ್ಯಕ್ತವಾಗಿದೆ. ಈ ಕುರಿತು ಸದಾಶಿವನಗರದ ನಿವಾಸದ ಬಳಿ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು. ದಸರಾ ಉದ್ಘಾಟಕರ ಆಯ್ಕೆ ವಿಚಾರವಾಗಿ ಬಿಜೆಪಿ ಮುಖಂಡ ಬಿ.ಎಲ್. ಸಂತೋಷ್ ಅವರ ಸಾಮಾಜಿಕ ಜಾಲತಾಣದಲ್ಲಿನ ಪೋಸ್ಟ್ ಬಗ್ಗೆ ಕೇಳಿದಾಗ, ನಾನು ಸದನದಲ್ಲಿ ಸೇರಿದಂತೆ ಎಲ್ಲಿ ಏನೇ ಮಾತನಾಡಿದರು ಅದರಲ್ಲಿ ಕೇವಲ ತಪ್ಪು ಕಂಡು ಹಿಡಿಯುವುದೇ ಬೇರೆಯವರ ಕೆಲಸವಾಗಿದೆ. ರಾಜಕೀಯದವರು, ಮಾಧ್ಯಮಗಳು, ಪ್ರಮೋದಾ ದೇವಿ ಅವರು, ಸಂಸದ ಯದುವೀರ್ ಅವರು – ಹೀಗೇ ಎಲ್ಲರೂ ತಪ್ಪು ಹುಡುಕುವವರೇ. ಹೀಗಾಗಿ ನಾನು ಮಾತನಾಡದಿರುವುದೇ ಲೇಸು ಅನಿಸುತ್ತದೆ.

ಈ ವಿಚಾರಗಳ ಬಗ್ಗೆ ಪ್ರತಿಕ್ರಿಯೆಗೆ ಬೇರೆ ನಾಯಕರು ಹಾಗೂ ಪಕ್ಷದ ವಕ್ತಾರರಿದ್ದಾರೆ. ಅವರ ಬಳಿ ಮಾತನಾಡಿ ಎಂದು ಹೇಳಿದರು.

ಆ ಸಂದರ್ಭದಲ್ಲಿ ಬೇರೆ ಬೇರೆ ಧರ್ಮಗಳೇ ಇರಲಿಲ್ಲ. ಬೌದ್ಧ ಧರ್ಮ ಒಂದೇ ಆಗ ಇದ್ದಿದ್ದು. ನಮ್ಮ ಧರ್ಮದ ದುರ್ಬಳಕೆ ಮಾಡಿಕೊಳ್ಳಬಾರದು. ನಮ್ಮ ಧಾರ್ಮಿಕ ಕ್ಷೇತ್ರಗಳಿಗೆ ಎಲ್ಲರಿಗೂ ಪ್ರವೇಶ ಇದೆ. ಆದರೆ ಪ್ರವೇಶ ಇದೆ ಅನ್ನೋ ಕಾರಣಕ್ಕೆ ಅವರದ್ದು ಅನ್ನುವುದು ಸರಿಯಲ್ಲ. ಜಾತ್ಯಾತೀತ ಧರ್ಮದ ದೃಷ್ಟಿಯಿಂದ ನೋಡಬಹುದು ಅಷ್ಟೇ. ಇದು ಧಾರ್ಮಿಕ ಕೇಂದ್ರ, ಕೋಟ್ಯಾಂತರ ಜನರ ಭಾವನೆಗೆ ಇದರಿಂದ ಧಕ್ಕೆಯಾಗುತ್ತದೆ. ಈ ರೀತಿ ಬೇಜವಾಬ್ದಾರಿತನದ ಹೇಳಿಕೆ ನೀಡಬಾರದು. ಸರ್ಕಾರ ಬೆಟ್ಟವನ್ನು ನಿಯಂತ್ರಣಕ್ಕೆ ತೆಗೆದುಕೊಳ್ಳಲು ಮುಂದಾಗಿದೆ. ಬರೀ ಹಿಂದೂ ದೇವಾಲಯಗಳನ್ನು ಗುರಿಯಾಗಿಟ್ಟುಕೊಂಡು ಈ ರೀತಿ ಮಾಡುತ್ತಿದೆ ಎಂದು ವಿರೋಧಿಸಿದ್ದರು. ಚಾಮುಂಡಿ ಬೆಟ್ಟ ಬರೀ ಹಿಂದೂಗಳ ಆಸ್ತಿಯಲ್ಲ ಎನ್ನುವ ಹೇಳಿಕೆಗೆ ಸಂಸದ ಯದುವೀರ ಹಾಗೂ ಪ್ರತಿಪಕ್ಷಗಳ ಟೀಕೆಯ ಬಗ್ಗೆ ಕೇಳಿದಾಗ, ಚಾಮುಂಡೇಶ್ವರಿ ಎಲ್ಲಾ ಧರ್ಮದವರಿಗೂ ಆಶೀರ್ವಾದ ಮಾಡುವಂತಹ ದೇವರು. ರಾಜ ವಂಶಸ್ಥರು ಹಾಗೂ ನಂತರ ಬಂದ ಸರ್ಕಾರಗಳು ಚಾಮುಂಡಿ ತಾಯಿಯನ್ನು ನಾಡದೇವಿ ಎಂದು ಕರೆದಿವೆ. ಈ ದೇಗುಲ ಸಾರ್ವಜನಿಕರ ಆಸ್ತಿ. ನಾಡಧ್ವಜ, ನಾಡದೇವಿ, ರಾಷ್ಟ್ರಧ್ವಜ ಹಾಗೂ ದೇವರಿಗೆ ಜಾತಿ, ಧರ್ಮ ಬಣ್ಣದ ರಾಜಕೀಯ ಲೇಪನ ಮಾಡುವ ಅಗತ್ಯವಿಲ್ಲ ಎಂದೂ ಡಿಕೆಶಿ ಪ್ರತಿಕ್ರಿಯೆ ಕೊಟ್ಟಿದ್ದರು.

**1** ಕಾಂಗ್ರೆಸ್‌ನವರು ಹಿಂದೂ ವಿರೋಧಿಗಳು ಎಂದು ಬಿಂಬಿಸಲು ಬಿಜೆಪಿಯವರು ಪ್ರಯತ್ನ

**2** ದಸಾರಾ ಉದ್ಘಾಟನೆಗೆ ಸಂಬಂಧಿಸಿದಂತೆ ಯಾವುದೇ ರಾಜಕೀಯ ಸಲ್ಲ.


**3** ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಅವರನ್ನು ಆಯ್ಕೆ ಮಾಡಿರುವುದು ಖುಷಿ ತಂದಿದೆ



**ಸತ್ಯ ಹೇಳಿದರೆ ಕೆಲವರು ಸಹಿಸಲ್ಲ**


**ನಾನು ಮಾತನಾಡದಿರುವುದೇ ಉತ್ತಮ**

**ಚಾಮುಂಡಿ ಬೆಟ್ಟ ಹೇಳಿಕೆ ವಿವಾದ**



ಹಿಂದೂಗಳ ಆಸ್ತಿಯಲ್ಲ ಅಂದರೆ ಅದು ಯಾರ ಆಸ್ತಿ . ಮುಜರಾಯಿ ಇಲಾಖೆ, ವಕ್ಫ್ ಬೋರ್ಡ್, ಕ್ರಿಶ್ಚಿಯನ್ ಮಿಷನರಿ ಅಥವಾ ಮಸೀದಿಗಳ ಆಸ್ತಿಯಾಗುತ್ತದೆಯೇ ಎಂದು ಸವಾಲೆಸೆದಿದ್ದಾರೆ. ಹಿಂದೂಗಳ ಆಸ್ತಿ ಮಾತ್ರ ಎಲ್ಲರಿಗೂ ಸೇರಿದ್ದು ಎಂಬಂತೆ ಮಾತನಾಡುವ ಡಿ.ಕೆ. ಶಿವಕುಮಾರ್ ಅವರ ಹೇಳಿಕೆಯನ್ನು ಖಂಡಿಸಿ, ಇದು ಹಿಂದೂ ವಿರೋಧಿ ಹೇಳಿಕೆ

-ಆರ್. ಅಶೋಕ್, ವಿಪಕ್ಷ ನಾಯಕ



ಚಾಮುಂಡಿ ಬೆಟ್ಟ ಹಿಂದೂಗಳ ಆಸ್ತಿಯಲ್ಲ ಎಂಬ ಹೇಳಿಕೆಯನ್ನು ಉಪಮುಖ್ಯಮಂತ್ರಿ ಅವರು ತಕ್ಷಣ ವಾಪಸ್ ಪಡೆಯಬೇಕು. ಗಾಂಧಿ ಕುಟುಂಬವನ್ನು ಖುಷಿ ಪಡಿಸಿ, ಮುಖ್ಯಮಂತ್ರಿ ಗದ್ದುಗೆ ಏರಲು ಹಿಂದೂಗಳಿಗೆ ಅಪಮಾನ ಮಾಡುವುದನ್ನು ಹಿಂದೂ ಸಮಾಜ ಒಪ್ಪುವುದಿಲ್ಲ


-ಬಿವೈ ವಿಜಯೇಂದ್ರ, ಬಿಜೆಪಿ ಘಟಕದ ಅಧ್ಯಕ್ಷ



ಡಿಕೆ ಶಿವಕುಮಾರ್ ಅವರಂತವರಿಂದ ಇಂತಹ ಹೇಳಿಕೆಯನ್ನು ನಾನು ನಿರೀಕ್ಷಿಸಿರಲಿಲ್ಲ. ಒಂದು ಸಮುದಾವನ್ನು ಓಲೈಕೆ ಮಾಡಲು ಡಿಕೆ ಶಿವಕುಮಾರ್ ಅಂತಹ ಹೇಳಿಕೆಯನ್ನು ನೀಡಿದ್ದಾರೋ ಎನ್ನುವುದು ನನಗೆ ಗೊತ್ತಿಲ್ಲ. ತಾಯಿ ಚಾಮುಂಡಿ ಸುಲಭದ ಮಾತಲ್ಲ, ನಾನೋರ್ವ ಅವರ ಸ್ನೇಹಿತನಾಗಿ ಹೇಳುತ್ತಿದ್ದೇನೆ, ಆಡಿದ ಮಾತನ್ನು ಹಿಂದಕ್ಕೆ ಪಡೆಯಲಿ. ಕಾಂಗ್ರೆಸ್ ಪಾರ್ಟಿಯವರಿಗೆ ಕ್ರಾಂತಿಯ ಜೊತೆಗೆ ವಾಂತಿಯೂ ಆಗುತ್ತಿದೆ. ದಸರಾ, ಚಾಮುಂಡಿ ಬೆಟ್ಟದ ವಿಚಾರದಲ್ಲಿ ಮಾಡುತ್ತಿರುವ ಕೆಲಸಗಳನ್ನು ಮುಂದುವರಿಸಿಕೊಂಡು ಹೋದರೆ, ನಾಮಾವಶೇಷನೂ ಆಗುತ್ತಾರೆ. ಸರ್ಕಾರ ಬಹುಸಂಖ್ಯಾತರ ಭಾವನೆಯ ಜೊತೆ ಆಟವಾಡುವುದನ್ನು ಮೊದಲು ನಿಲ್ಲಿಸಲಿ

-ವಿ. ಸೋಮಣ್ಣ, ಕೇಂದ್ರ ಸಚಿವ

**ಏನೇ ಮಾತನಾಡಿದರು ಅದರಲ್ಲಿ ಕೇವಲ ತಪ್ಪು ಕಂಡು ಹಿಡಿಯುವುದೇ ಬೇರೆಯವರ ಕೆಲಸ**



ಚಾಮುಂಡೇಶ್ವರಿ ದೇವಸ್ಥಾನ ಹಿಂದೂಗಳಿಗೆ ಸೇರಿಲ್ಲ ಎಂಬಂತಹ ಸಂವೇದನಾರಹಿತ ಹೇಳಿಕೆ ಅನಗತ್ಯವಾಗಿತ್ತು. ಅದು ಹಿಂದೂ ದೇವಸ್ಥಾನ ಅಲ್ಲದಿದ್ದರೆ, ಅದನ್ನು ಎಂದಿಗೂ ಮುಜರಾಯಿ ಇಲಾಖೆಯ ವ್ಯಾಪ್ತಿಗೆ ತರುತ್ತಿರಲಿಲ್ಲ ಎಂದು ಪ್ರತಿಪಾದಿಸಿದ್ದಾರೆ.

ಸರ್ಕಾರದ ದಸರಾವು ಸಾಂಸ್ಕೃತಿಕ ಆಚರಣೆ ಎಂಬುದು ನಮ್ಮ ಪರಿಗಣಿತ ಅಭಿಪ್ರಾಯ. ರಾಜ್ಯವು ಅದರ ಸ್ವಭಾವತಃ, ಅಂತಹ ಉತ್ಸವವನ್ನು ನಡೆಸುವಲ್ಲಿ ಧಾರ್ಮಿಕ ಪಾವಿತ್ರ್ಯ ಸಂಪ್ರದಾಯ ಅಥವಾ ಪರಂಪರೆಯನ್ನು ಪಡೆಯಲು ಸಾಧ್ಯವಿಲ್ಲ.

-ಪ್ರಮೋದಾದೇವಿ ಒಡೆಯರ್, ರಾಜವಂಶಸ್ಥೆ



ಚಾಮುಂಡಿ ಬೆಟ್ಟ ಹಿಂದೂಗಳ ಆಸ್ತಿ, ಇದರಲ್ಲಿ ಎರಡು ಮಾತಿಲ್ಲ. ಇದೊಂದು ಆಘಾತಕಾರಿ ಹಾಗೂ ಹಾಸ್ಯಾಸ್ಪದ ಹೇಳಿಕೆ ಎಂದಿದ್ದರು. ಗೌರಿ ವಿನಾಯಕನ ಪೂಜೆಯ ಸಂದರ್ಭದಲ್ಲಿ ಈ ರೀತಿ ಹೇಳಿಕೆ ಖಂಡನೀಯ. ಮಾರ್ಕಂಡೇಯರು ತಪಸ್ಸು ಮಾಡಿರುವ ಇತಿಹಾಸವಿರುವ ಸ್ಥಳವಿದು. ಚಾಮುಂಡಿಬೆಟ್ಟಕ್ಕೆ ಸಾವಿರಾರು ವರ್ಷದ ಇತಿಹಾಸವಿದೆ.

-ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಸಂಸದ

## ಬೂಕರ್ ಬಂದಾಗ ನನಗೆ ಕಂಗ್ರ್ಯಾಟ್ಸ್ ಹೇಳಿಲ್ಲ: ಬಾನು ಮುಷ್ತಾಕ್‌ಗೆ ತಿರುಗೇಟು

• ಉದಯವಾಹಿನಿ, ಬೆಂಗಳೂರು




ಯತ್ನಾಳ್ ಆಗಲೀ, ಪ್ರತಾಪ್ ಸಿಂಹ ಆಗಲೀ, ನನಗೆ ಬೂಕರ್ ಬಂದಾಗ ನನಗೆ ಒಂದೇ ಒಂದು ಕಂಗ್ರಾಜುಲೇಟ್ ಮಾಡುವಷ್ಟು ಸಂತೋಷ ಇಲ್ಲ. ಇವರೆಲ್ಲಾ ಮಾನಸಿಕ ದಾರಿದ್ರ್ಯದಿಂದ, ಬೌದ್ಧಿಕ ದಾರಿದ್ರ್ಯದಿಂದ ನರಳ್ತಾ ಇದ್ದಾರೆ ಎಂದು ಇತ್ತೀಚೆಗೆ ಹೇಳಿಕೆ ನೀಡಿದ್ದ ಹಿರಿಯ ಲೇಖಕಿ ಬಾನು ಮುಷ್ತಾಕ್ ಅವರಿಗೆ ಮೈಸೂರಿನ ಮಾಜಿ ಸಂಸದ ಪ್ರತಾಪ್ ಸಿಂಹ ತಿರುಗೇಟು ನೀಡಿದ್ದಾರೆ.

ಅಸಲಿಗೆ, ಬಾನು ಅವರಿಗೆ ಬೂಕರ್ ಪ್ರಶಸ್ತಿ ಬಂದಿರುವುದು ಮಾಧ್ಯಮಗಳಲ್ಲಿ ಮೇ 21ರಂದು ವರದಿಯಾಗಿತ್ತು. ''ಇಂಗ್ಲೀಷ್ ಮಾಧ್ಯಮವೊಂದರಲ್ಲಿ ಬಂದಿರುವ ವರದಿಯನ್ನು ಟ್ವಿಟರ್ ನಲ್ಲಿ ಉಲ್ಲೇಖಿಸಿ, ಕನ್ನಡಕ್ಕೆ ಬೂಕರ್ ತರುವಲ್ಲಿ ಯಶಸ್ವಿಯಾದ ಬಾನು ಮುಷ್ತಾಕ್ ಹಾಗೂ ದೀಪಾ ಬಸ್ತಿಯವರಿಗೆ 2025ರ ಬೂಕರ್ ಪ್ರಶಸ್ತಿ ಗೆದ್ದಿದ್ದಕ್ಕೆ ಧನ್ಯವಾದಗಳು'' ಎಂದು ಪ್ರತಾಪ್ ಸಿಂಹ ಟ್ವೀಟ್ ಮಾಡಿದ್ದರು.

ಬಾನು ಮುಷ್ತಾಕ್ ಅವರು, ಯತ್ನಾಳ್ ಆಗಲೀ ಪ್ರತಾಪ್ ಸಿಂಹ ಅವರಾಗಲೀ ತಮಗೆ ಕಂಗ್ರಾಜ್ಯುಲೇಷನ್ ಹೇಳಿಲ್ಲ ಎಂದು ಹೇಳಿದ ಕೂಡಲೇ ತಾವು ಮೇ 21ರಂದು ಮಾಡಿದ್ದ ಟ್ವೀಟ್ ಅನ್ನು ಉಲ್ಲೇಖಿಸಿ ಹಾಗೂ ಬಾನು ಮುಷ್ತಾಕ್ ಅವರ ಹೇಳಿಕೆಯ ಆಡಿಯೋ – ಎರಡನ್ನೂ ಸೇರಿಸಿ ಟ್ವೀಟ್ ಮಾಡಿದ್ದಾರೆ ಪ್ರತಾಪ್. ಅದರ ಜೊತೆಗೆ, ಪೋಸ್ಟ್ ಕೂಡ ಹಾಕಿರುವ ಅವರು, ''ಮೇ 21 ರಂದೇ ಅಭಿನಂದನೆ ಸಲ್ಲಿಸಿದ್ದೇನೆ ಮೇಡಂ. ಈಗ ಹೇಳಿ, ಭೌದ್ಧಿಕ ದಾರಿದ್ರ್ಯದಿಂದ ನರುಳುತ್ತಿರುವವರು ಯಾರು?'' ಎಂದು ಪ್ರಶ್ನಿಸಿ, ತಿರುಗೇಟು ನೀಡಿದ್ದಾರೆ.

2023ರಲ್ಲಿ ಹಾಸನದಲ್ಲಿ ನಡೆದಿದ್ದ ಜನಸಾಹಿತ್ಯ ಸಮ್ಮೇಳನದಲ್ಲಿ ಬಾನು ಮುಷ್ತಾಕ್ ಅವರು ಕನ್ನಡಾಂಬೆ ಹಾಗೂ ಕನ್ನಡ ಧ್ವಜದ ಬಗ್ಗೆ ತಮ್ಮ ಆಕ್ಷೇಪಣೆಯನ್ನು ವ್ಯಕ್ತಪಡಿಸಿದ್ದರು. ಅಂದು ವೇದಿಕೆಯ ಮೇಲೆ ಅವರು ಮಾಡಿದ ಆ ಭಾಷಣ, ಇತ್ತೀಚೆಗೆ ಸೋಷಿಯಲ್ ಮೀಡಿಯಾಗಳಲ್ಲಿ ವೈರಲ್ ಆಗಿತ್ತು. ರಾಜ್ಯ ಸರ್ಕಾರವನ್ನು ಬಾನು ಮುಷ್ತಾಕ್ ಅವರಿಂದ ದಸರಾ ಉದ್ಘಾಟಿಸಲು ಮುಂದಾಗಿರುವುದಕ್ಕೆ ತೀವ್ರ ಆಕ್ಷೇಪಗಳು ಎದ್ದಿದ್ದವು. ಅತ್ತ, ಬಿಜೆಪಿ ನಾಯಕರು ಬಾನು ಮುಷ್ತಾಕ್ ಅವರ ಹೇಳಿಕೆಯನ್ನು ಖಂಡಿಸುವುದರ ಜೊತೆಗೆ, ದಸರಾ ಉದ್ಘಾಟನೆಯಿಂದ ಅವರನ್ನು ಹೊರಗಿಡಬೇಕೆಂದು ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದರು. ಅದೇ ಸಂದರ್ಭದಲ್ಲಿ ಪ್ರತಾಪ್ ಸಿಂಹ, ಎಂದಿನಂತೆ ತಮ್ಮ ಬಿರುಸು ಕುಡಿಕೆಗಳಂಥ ಮಾತುಗಳಿಂದ ಬಾನು ಅವರ ಹೇಳಿಕೆಗಳನ್ನು ಖಂಡಿಸಿದ್ದರು. ನೀವು ಪೂಜಿಸುವ ಅಲ್ಲಾನ ಮಸೀದಿಯೊಳಕ್ಕೇ ನಿಮಗೆ ಪ್ರವೇಶವಿಲ್ಲ. ನಿಮ್ಮನ್ನು ನಮ್ಮ ದೇವರುಗಳು ಹತ್ತಿರಕ್ಕೆ ಬರುವುದನ್ನು ಸಹಿಸಿಯಾವೇ ಎಂದು ಚುಚ್ಚಿದ್ದರು. ಅಷ್ಟೇ ಅಲ್ಲದೆ, ಅರಿಶಿನ – ಕುಂಕುಮದ ಬಣ್ಣಗಳನ್ನು ಕನ್ನಡ ಧ್ವಜದಲ್ಲಿ ಅಳವಡಿಸಿರುವುದನ್ನು ಪ್ರತಿಭಟಿಸಿ ಇಂದಿಗೂ ಮುತ್ತೈದೆಯರು ಯಾರ ಮನೆಗಾದರೂ ಹೋದರೆ ಅವರಿಗೆ ಅರಿಶಿನ ಕುಂಕುಮ ನೀಡುತ್ತಾರೆ. ಸೌಭಾಗ್ಯದ ಸಂಕೇತವಾದ ಅರಿಶಿನ ಕುಂಕುಮದ ಬಗ್ಗೆ ಬಾನು ಅವರಿಗೇಕೆ ಕಿರಿಕಿರಿ ಎಂದೂ ಪ್ರಶ್ನಿಸಿದ್ದರು. ಇದೆಲ್ಲಕ್ಕೆ ಪ್ರತಿಕ್ರಿಯಿಸಿದ್ದ ಬಾನು, ಇಷ್ಟೆಲ್ಲಾ ನನ್ನ ವಿರುದ್ಧ ಮಾತನಾಡುವ ಪ್ರತಾಪ್ ಸಿಂಹ, ಯತ್ನಾಳ್ ಅವರು, ನನಗೆ ಬೂಕರ್ ಪ್ರಶಸ್ತಿ ಬಂದಾಗ ನನಗೆ ಸಣ್ಣ ಅಭಿನಂದನೆಯನ್ನೂ ಸಲ್ಲಿಸಿಲ್ಲ ಎಂದು ಹೇಳಿದ್ದರು. ಅದಕ್ಕೆ ಪ್ರತಾಪ್ ಸಿಂಹ ಅವರು ಮೇ 21ರಂದು ಅವರಿಗೆ ಅಭಿನಂದನೆ ಸಲ್ಲಿಸಿ ಮಾಡಿದ್ದ ಟ್ವೀಟ್ ನ ಸ್ಕ್ರೀನ್ ಶಾಟ್ ತಗೆದು ಅದನ್ನು ಪೋಸ್ಟ್ ಮಾಡುವ ಮೂಲಕ ಬಾನು ಅವರಿಗೆ ತಿರುಗೇಟು ನೀಡಿದ್ದಾರೆ.



# ಬೆಂಗಳೂರು ನಗರ, ಬೆಂ.ಗ್ರಾಮಾಂತರ, ಬಾಗಲಕೋಟೆಗೆ ಆರೆಂಜ್ ಅಲರ್ಟ್

## ■ ಮಲೆನಾಡಿನ ಚಿಕ್ಕಮಗಳೂರು, ಹಾಸನ, ಕೊಡಗು, ಶಿವಮೊಗ್ಗ ಜಿಲ್ಲೆಗಳಿಗೂ ಭಾರಿ ಮಳೆಯ ಯೆಲ್ಲೊ ಅಲರ್ಟ್

• ಉದಯವಾಹಿನಿ, ಬೆಂಗಳೂರು

ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತದ ಹಿನ್ನೆಲೆ ಉಡುಪಿ ಜಿಲ್ಲೆಯಾದ್ಯಂತ ಹಾಗೂ ಶಿವಮೊಗ್ಗ ಮತ್ತು ಉತ್ತರ ಕನ್ನಡ ಜಿಲ್ಲೆ, ಯಾದಗಿರಿಯ ಹಲವು ತಾಲ್ಲೂಕುಗಳ ಅಂಗನವಾಡಿ, ಶಾಲೆ, ಪ್ರೌಢ ಶಾಲೆ ಹಾಗೂ ಪಿಯು ಕಾಲೇಜುಗಳಿಗೆ ಆಗಸ್ಟ್ 28 ರಂದು ರಜೆ ಘೋಷಣೆ ಮಾಡಲಾಗಿದೆ. ಈ ನಡುವೆಯೇ ಸಂಜೆ ವೇಳೆಗೆ ಭಾರಿ ಮಳೆ ಮುನ್ಸೂಚನೆ ಇರುವ ಹಿನ್ನೆಲೆ ಬೆಂಗಳೂರು ನಗರ, ಗ್ರಾಮಾಂತರ ಹಾಗೂ ಬಾಗಲಕೋಟೆಗೆ ಆರೆಂಜ್ ಅಲರ್ಟ್ ಕೊಡಲಾಗಿದೆ.

ಹವಾಮಾನ ಇಲಾಖೆ ವಿಜ್ಞಾನಿ ಸಿಎಸ್ ಪಾಟೀಲ್ ಮಾತನಾಡಿ, ಛತ್ತೀಸ್ ಘಡದಲ್ಲಿ ವಾಯುಭಾರ ಕುಸಿತ ಇರುವುದರಿಂದ ಕರಾವಳಿ ಜಿಲ್ಲೆಗಳಲ್ಲಿ ಸೆಪ್ಟೆಂಬರ್ 3 ರವರೆಗೆ ವ್ಯಾಪಕ ಮಳೆ, ಉತ್ತರ ಹಾಗೂ ದಕ್ಷಿಣ ಒಳನಾಡಿನಲ್ಲಿ ಆ.28–29 ರಂದು ವ್ಯಾಪಕವಾಗಿ, ಆ ಬಳಿಕ ಆಗಸ್ಟ್ 31 ರವರೆಗೆ ಕೆಲವು ಕಡೆ ಮಾತ್ರ ಮಳೆಯಾಗಲಿದೆ. ಉತ್ತರ ಕನ್ನಡ, ದಕ್ಷಿಣ ಕನ್ನಡ ಹಾಗೂ ಉಡುಪಿಯಲ್ಲಿ ಅತಿ ಭಾರೀ ಮಳೆಯ



ಸಾಧ್ಯತೆ ಇರುವುದರಿಂದ ಆ. 28 ರಂದು ರೆಡ್ ಅಲರ್ಟ್, ಆ.29 ಹಾಗೂ 30 ರಂದು ಆರೆಂಜ್ ಅಲರ್ಟ್ ಬಳಿಕ ಸೆ.3 ರವರೆಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಬೆಂಗಳೂರಿಗೂ ಮಳೆಯಾಗುವ ಸಾಧ್ಯತೆ ಇದೆ ಎಂದು ಹೇಳಿದ್ದಾರೆ.

**ಎಲ್ಲೆಲ್ಲಿ ಭಾರೀ ಮಳೆ:** ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉತ್ತರ ಕನ್ನಡ ಹಾಗೂ ಉಡುಪಿ ಜಿಲ್ಲೆಯಲ್ಲಿ ಆರೆಂಜ್ ಅಲರ್ಟ್ ಘೋಷಿಸಿದ್ದು ಅತಿ ಭಾರೀ ಮಳೆಯಾಗಲಿದೆ. ನಿನ್ನೆ ರೆಡ್ ಅಲರ್ಟ್ ಕೊಡಲಾಗಿತ್ತು. ಇದಲ್ಲದೆ ಬೀದರ್, ಕಲಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಚಿಕ್ಕಮಗಳೂರು, ಹಾಸನ, ಕೊಡಗು, ಶಿವಮೊಗ್ಗ ಜಿಲ್ಲೆಗಳಿಗೆ ಇಂದು ಆರೆಂಜ್ ಅಲರ್ಟ್ ನಾಳೆ ಯೆಲ್ಲೋ ಅಲರ್ಟ್ ಕೊಡಲಾಗಿದೆ.

**ಎಲ್ಲೆಲ್ಲಿ ಶಾಲೆ ಕಾಲೇಜಿಗಳಿಗೆ ರಜೆ:** ಮಂಗಳೂರು, ಮೂಲ್ಕಿ, ಮೂಡುಬಿದಿರೆ, ಉಳ್ಳಾಲ, ಪುತ್ತೂರು ತಾಲೂಕಿನಲ್ಲಿ ಶಾಲೆ ಹಾಗೂ ಪದವಿ ಪೂರ್ವ ಕಾಲೇಜಿಗೆ ರಜೆ ಘೋಷಿಸಲಾಗಿದೆ.

ಶಿವಮೊಗ್ಗದ ತೀರ್ಥಹಳ್ಳಿ, ಹೊಸನಗರ, ಸಾಗರ ತಾಲ್ಲೂಕಲ್ಲಿ ಭಾರಿ ಮಳೆಯಾಗುತ್ತಿದ್ದು ಮುಂಜಾಗ್ರತಾ ಕ್ರಮವಾಗಿ ಈ ತಾಲ್ಲೂಕುಗಳ ಶಾಲೆ – ಪ್ರೌಢಶಾಲೆ, ಪಿಯು ಕಾಲೇಜುಗಳಿಗೆ ರಜೆ ಘೋಷಣೆ ಮಾಡಲಾಗಿದೆ. ಉತ್ತರ ಕನ್ನಡದ 10 ತಾಲ್ಲೂಕುಗಳಿಗೆ ರಜೆ ಘೋಷಣೆ ಸದ್ಯಕ್ಕೆ ಮಾಡಲಾಗಿದೆ. ಶಿರಸಿ, ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ, ಭಟ್ಕಳ, ಜೋಯಿಡಾ, ಸಿದ್ದಾಪುರ, ಯಲ್ಲಾಪುರ ದಾಂಡೇಲಿಯಲ್ಲಿ ರಜೆ ಘೋಷಣೆ ಮಾಡಲಾಗಿದೆ.


### ಯಾದಗಿರಿ ಶಾಲಾ, ಕಾಲೇಜಿಗಿಂದು ರಜೆ ಘೋಷಣೆ

ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತದ ಹಿನ್ನೆಲೆಯಲ್ಲಿ ನಿನ್ನೆಯಿಂದ ಸತತವಾಗಿ ಸುರಿಯುತ್ತಿರುವ ಮಳೆಯಾಗುತ್ತಿದ್ದು, ಮಕ್ಕಳ ಸುರಕ್ಷತೆಯ ಕಾರಣಕ್ಕಾಗಿ ಅಗಸ್ಟ್ 28ರಂದು ಜಿಲ್ಲೆಯ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಶಾಲೆಗಳಿಗೆ ಜಿಲ್ಲಾಧಿಕಾರಿಗಳ ಆದೇಶದಂತೆ ರಜೆ ಘೋಷಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಚನ್ನಬಸಪ್ಪ ಮುಧೋಳ್ ತಿಳಿಸಿದ್ದಾರೆ. ಬಿಇಒ ಮತ್ತು ಬಿಆರ್‌ಸಿ ಅವರುಗಳು ತಮ್ಮ ವ್ಯಾಪ್ತಿಯ ಎಲ್ಲಾ ಮುಖ್ಯಗುರುಗಳಿಗೆ ತಿಳಿಸಲಿದ್ದಾರೆ. ರಜೆ ನೀಡಿರುವ ಒಂದು ದಿನದ ಕಲಿಕಾ ದಿನವನ್ನು ಮುಂದೆ ಸರಿದೂಗಿಸಲಾಗುವುದು ಎಂದಿದ್ದಾರೆ. ಕರಾವಳಿ ಜಿಲ್ಲೆಗಳಲ್ಲಿ ಸೆ. 1ರಿಂದ ಮತ್ತೆ ಮಳೆ ಬಿರುಸು ಪಡೆಯಲಿದ್ದು, ಸೆ.2 ಹಾಗೂ 3 ರಂದು ಆರೆಂಜ್ ಅಲರ್ಟ್ ಕೊಡಲಾಗಿದೆ. ವಿಜಯಪುರ, ಬಾಗಲಕೋಟೆ, ಕಲಬುರ್ಗಿ, ಬೀದರ್ ಜಿಲ್ಲೆಗಳಿಗೆ ಮುಂಜಾನೆ 4 ರವೇಳೆಗೆ ಭಾರಿ ಮಳೆಯ ಅಲರ್ಟ್ ಕೊಡಲಾಗಿದೆ.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹10,260/Gram24ct ₹9,405/Gram22ct ಬೆಳ್ಳಿ: ₹120.00/Gram

# ನಾನು ಹೇಳಿದೆಲ್ಲಾ ಸುಳ್ಳು.. ನನ್ನನ್ನು ಬಿಟ್ಬಿಡಿ ಎಂದು ಎಸ್ಐಟಿ ಮುಂದೆ ಸುಜಾತ ಭಟ್ ಅಳಲು

• ಉದಯವಾಹಿನಿ, ಬೆಂಗಳೂರು



ಅಯ್ಯೋ ನಾನು ಹೇಳಿದ್ದೆಲ್ಲ ಸುಳ್ಳು ನನ್ನ ದಾರಿ ತಪ್ಪಿಸಿದ್ದು ಆ ಬುರುಡೆ ಗ್ಯಾಂಗ್ ನನ್ನನ್ನು ಬಿಟ್ಟುಬಿಡಿ ನೀವು ಒಪ್ಪಿದ್ದರೆ ನಾನು ನನ್ನ ಕೇಸ್ ವಾಪಸ್ ಪಡೆದುಕೊಳ್ಳುತ್ತೇನೆ ಹೀಗಂತಾ ಎಸ್ಐಟಿ ಅಧಿಕಾರಿಗಳ ಮುಂದೆ ಅನನ್ಯಾ ಭಟ್ ನಾಪತ್ತೆ ಪ್ರಕರಣದ ರೂವಾರಿ 85 ವರ್ಷದ ಸುಜಾತ ಭಟ್ ಬೊಬ್ಬೆ ಹೊಡೆಯುತ್ತಿದ್ದಾರೆ. ಆದರೆ, ಅವರ ಮಾತಿಗೆ ಕ್ಯಾರೆ ಎನ್ನದ ಎಸ್ಐಟಿ ಅಧಿಕಾರಿಗಳು ಗುರುವಾರ ಸುಜಾತ ಭಟ್ ಅವರನ್ನು ಮೂರನೇ ದಿನವೂ ತೀವ್ರ ವಿಚಾರಣೆಗೆ ಒಳಪಡಿಸಿದ್ದು, ಅವರನ್ನು ಬಂಧಿಸುವ ಸಾಧ್ಯತೆ ಇದೆ. ನನ್ನ ಮಗಳು ಅನನ್ಯಾ ಭಟ್ ಅವರನ್ನು ಧರ್ಮಸ್ಥಳದಲ್ಲಿ ಕೊಲೆ ಮಾಡಲಾಗಿದೆ. ನನಗೆ ನನ್ನ ಮಗಳ ಅಸ್ಥಿಪಂಜರ ಹುಡುಕಿಕೊಟ್ಟರೆ ಹಿಂದೂ ಸಂಪ್ರದಾಯದಂತೆ ಸಂಸ್ಕಾರ ನಡೆಸುವ ಹೇಳಿಕೆ ನೀಡಿ ಸಂಚಲನ ಸೃಷ್ಟಿಸಿದ್ದ ಸುಜಾತ ಭಟ್ ನಂತರ ದಿನಕ್ಕೊಂದು ಹೇಳಿಕೆ ನೀಡಿ ಪೊಲೀಸರ ದಾರಿ ತಪ್ಪಿಸಿದ್ದರು.

ಹೀಗಾಗಿ ಭಟ್ ಅವರಿಗೆ ನೋಟೀಸ್ ನೀಡಿ ವಿಚಾರಣೆಗೆ ಹಾಜರಾಗುವಂತೆ ಎಸ್ಐಟಿ ಪೊಲೀಸರು ನೋಟೀಸ್ ಜಾರಿ ಮಾಡಿದ್ದರು. ನನಗೆ ವಯಸ್ಸಾಗಿದೆ ಹಾಗೂ ಜೀವಬೆದರಿಕೆ ಇರುವುದರಿಂದ ವಿಚಾರಣೆಗೆ ಹಾಜರಾಗಲು ಸಾಧ್ಯವಿಲ್ಲ ಎಂದಿದ್ದ ಅವರು ಮೊನ್ನೆ ಇದ್ದಕ್ಕಿದ್ದಂತೆ ಬೆಳಗಿನ ಜಾವ 5 ಗಂಟೆಗೆ ತಮ್ಮ ವಕೀಲರೊಂದಿಗೆ ಬೆಳ್ತಂಗಡಿಯಲ್ಲಿರುವ ಎಸ್ಐಟಿ ಕಚೇರಿಗೆ ಆಗಮಿಸಿ ವಿಚಾರಣೆ ಎದುರಿಸಿ ಅನನ್ಯಾ ಭಟ್ ನನ್ನ ಮಗಳು ಎಂದು ವಾದಿಸಿದ್ದರು. ಆಗ ಪೊಲೀಸರು ಸಮರ್ಪಕ ದಾಖಲೆಯೊಂದಿಗೆ ನಾಳೆ ಬರುವಂತೆ ಸೂಚಿಸಿದ್ದರು. ಹೀಗಾಗಿ ನಿನ್ನೆ ಕೂಡ ಸತತ 11 ಗಂಟೆಗಳ ಕಾಲ ಎಸ್ಐಟಿ ವಿಚಾರಣೆಗೆ ಹಾಜರಾಗಿದ್ದ ಸುಜಾತ ಭಟ್ ಅವರು, ಕಣ್ಣೀರು ಹಾಕುತ್ತ ಅನನ್ಯಾ ಭಟ್ ನನ್ನ ಮಗಳಲ್ಲ. ನನ್ನ ದಾರಿ ತಪ್ಪಿಸಿದ್ದು ಬುರುಡೆ ಗ್ಯಾಂಗ್ ಅವರ ಮಾತು ಕೇಳಿ ನಾನು ಸುಳ್ಳು ಹೇಳಿದ್ದೇನೆ. ನನ್ನನ್ನು ಬಿಟ್ಟುಬಿಡಿ ನೀವು ಅನುಮತಿ ನೀಡಿದರೆ ನಾನು ನೀಡಿರುವ ದೂರನ್ನು ವಾಪಸ್ ಪಡೆಯುತ್ತೇನೆ ಎಂದು ಅಲವತ್ತುಕೊಂಡಿದ್ದಾರೆ.

ಆದರೆ, ಅವರ ಗೋಸುಂಬೆ ಮಾತಿಗೆ ಮರುಳಾಗದ ಎಸ್ಐಟಿ ಪೊಲೀಸರು ಅದಕ್ಕೆ ಅನುಮತಿ ನೀಡದೆ ನೀವು ಇಂದೂ ಬಂದು ವಿಚಾರಣೆಗೆ ಒಳಗಾಗಬೇಕು ಎಂದು ಸೂಚಿಸಿ ಕಳುಹಿಸಿದ್ದರು. ಹೀಗಾಗಿ ಗುರುವಾರ ಕೂಡ ಬೆಳ್ತಂಗಡಿಗೆ ಆಗಮಿಸಿರುವ ಸುಜಾತ ಭಟ್ ಅವರು ಎಸ್ಐಟಿ ಪೊಲೀಸರು ವಿಚಾರಣೆಗೆ ಒಳಪಡಿಸಿ ಬಂಧಿಸುವ ಸಾಧ್ಯತೆಗಳಿವೆ.

**ಮಂಜುನಾಥ ಸ್ವಾಮಿ ಆಣೆಗೂ ಸತ್ಯ**

**ಅತ್ತ, ಮಾಸ್ಕ್‌ಮ್ಯಾನ್ ಚಿನ್ನಯ್ಯ. ಇತ್ತ ಸುಜಾತ ಭಟ್ ಇರುವ ಸತ್ಯವನ್ನು ಎಸ್ಐಟಿ ತನಿಖಾಧಿಕಾರಿ ಮುಂದೆ ಎಳೆ ಎಳೆಯಾಗಿ ಬಿಚ್ಚಿಟ್ಟಿದ್ದಾರೆ. ಧರ್ಮಸ್ಥಳ ಪ್ರಕರಣ ಸೃಷ್ಟಿಸಿದ್ದ ಸೂತ್ರಧಾರರು ಪತರಗುಟ್ಟಿ ಹೋಗಿದ್ದು, ಇಬ್ಬರಿಂದ ಅಂತರ ಕಾಯ್ದುಕೊಳ್ಳುತ್ತಿದ್ದಾರೆ ಎಂದು ತಿಳಿದುಬಂದಿದೆ. ಒಟ್ಟಾರೆ, ಕರ್ನಾಟಕದ ಹೆಮ್ಮೆಯ ಧಾರ್ಮಿಕ ಕ್ಷೇತ್ರವಾದ ಧರ್ಮಸ್ಥಳದ ಹೆಸರಿಗೆ ಮಸಿ ಬಳಿಯಲು ಹೋಗಿ ಕಟ್ಟುಕತೆ ಕಟ್ಟಿದ್ದ ಸೂತ್ರಧಾರರು ತಾವೇ ತೋಡಿಸಿದ್ದ ಗುಂಡಿಗೆ ಬಿದ್ದು ವಿಲ ವಿಲ ಒದ್ದಾಡುವಂತೆ ಆಗಿರುವುದು ಮಾತ್ರ, ಮಂಜುನಾಥ ಸ್ವಾಮಿ ಆಣೆಗೂ ಸತ್ಯ.**

## ನಾನು ಸತ್ಯ ಹೇಳಿದರೆ ಕೆಲವರು ಸಹಿಸುವುದಿಲ್ಲ : ಡಿಕೆಶಿ

• ಉದಯವಾಹಿನಿ, ಬೆಂಗಳೂರು

ನಾನು ಸತ್ಯ ಹೇಳಿದರೆ ಕೆಲವರು ಸಹಿಸುವುದಿಲ್ಲ. ಹೀಗಾಗಿ ಪಕ್ಷದ ವಕ್ತಾರರಿಂದ ಹೇಳಿಕೆ ಕೊಡಿಸುವುದಾಗಿ ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಮೈಸೂರು ದಸರಾ ಕುರಿತು ತಾವು ನೀಡಿದ ಹೇಳಿಕೆ ವಿವಾದಕ್ಕೆ ಕಾರಣವಾದ ಬೆನ್ನಲ್ಲೇ ಪ್ರತಿಕ್ರಿಯಿಸಿದ ಅವರು, ನಾನು ಕೆಲವು ಸತ್ಯಗಳನ್ನು ಹೇಳಿದರೆ ಕೆಲವರು ಸಹಿಸುವುದಿಲ್ಲ. ಪ್ರಮೋದ ದೇವಿಯವರಾಗಲೀ, ಯದುವೀರ್ ಆಗಲೀ, ವಿಧಾನಸಭೆಯಲ್ಲಾಗಲೀ ನಾನು ಆಡುವ ಮಾತುಗಳಲ್ಲಿ ತಪ್ಪ ಕಂಡುಹಿಡಿಯುವುದೇ ದೊಡ್ಡ ಕೆಲಸವಾಗಿದೆ. ನನ್ನ ವಿಚಾರವಾಗಿ ಏನೋ ನಡೆಯುತ್ತಿದೆ. ಅದಕ್ಕಾಗಿ ನಾನು ಮಾತನಾಡದೇ ಇರುವುದೇ ಉತ್ತಮ. ಪಕ್ಷದ ಬೇರೆ ನಾಯಕರು, ವಕ್ತಾರರಿದ್ದಾರೆ. ಅವರಿಂದ ಮಾತನಾಡಿಸುವುದೇ ಸೂಕ್ತ ಎಂದರು.

ಡಿ.ಕೆ.ಶಿವಕುಮಾರ್ ಅವರ ಇತ್ತೀಚಿನ ಹೇಳಿಕೆಗಳು ತೀವ್ರ ಸಂಚಲನ ಸೃಷ್ಟಿಸಿದ್ದು, ಭಾರೀ ವಿವಾದ ಮೂಡಿಸಿವೆ. ಧರ್ಮಸ್ಥಳದ ಕುರಿತಂತೆ ಎಸ್ಐಟಿ ತನಿಖೆ ಪ್ರಗತಿಯಲ್ಲಿರುವಾಗಲೇ ಡಿ.ಕೆ.ಶಿವಕುಮಾರ್ ಷಡ್ಯಂತ್ರ ನಡೆದಿದೆ ಎಂದು ಹೇಳಿ ತನಿಖೆಯ ದಿಕ್ಕನ್ನು ಬದಲಾಯಿಸಿದರು. ಚಾಮುಂಡೇಶ್ವರಿ ದೇವಸ್ಥಾನ ಕೇವಲ ಹಿಂದೂಗಳ ಆಸ್ತಿಯಲ್ಲ ಎಂದು ಹೇಳುವ ಮೂಲಕ ಮತ್ತಷ್ಟು ವಿವಾದಗಳನ್ನು ಮೈಮೇಲೆ ಎಳೆದುಕೊಂಡಿದ್ದಾರೆ. ಇದು ಬಿಜೆಪಿಯವರ ಕೆಂಗಣ್ಣಿಗೂ ಗುರಿಯಾಗಿದ್ದು ತೀಕ್ಷ್ಣ ಪ್ರತಿಕ್ರಿಯೆಗಳು ಕಂಡು ಬರುತ್ತಿವೆ. ಈ ಸಂಬಂಧಪಟ್ಟಂತೆ ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಾವು ಈ ವಿಚಾರವಾಗಿ ಮಾತನಾಡದೆ ಇರುವುದೇ ಕ್ಷೇಮ ಎಂದು ಪ್ರತಿಕ್ರಿಯಿಸಿದ್ದಾರೆ. ದಸರಾ ಸಮೀಪಿಸುತ್ತಿರುವ ಸಂದರ್ಭದಲ್ಲಿ ಅನಗತ್ಯ ವಿವಾದಗಳನ್ನು ಮೈಮೇಲೆ ಎಳೆದುಕೊಳ್ಳುವುದು ಬೇಡ ಎಂಬ ನಿರ್ಧಾರಕ್ಕೆ ಶಿವಕುಮಾರ್ ಬಂದಂತ್ತಿದೆ.

## ಸರ್ಕಾರಕ್ಕೆ ಮಂಜುನಾಥಸ್ವಾಮಿಯೇ ಶಿಕ್ಷೆ ಕೊಡುತ್ತಾನೆ : ಹೆಚ್‌ಡಿಕೆ

• ಉದಯವಾಹಿನಿ, ಬೆಂಗಳೂರು

ಧರ್ಮಸ್ಥಳ ವಿಚಾರದಲ್ಲಿ ನಾನು ರಾಜಕೀಯ ಬೆರೆಸೋಕೆ ಹೋಗಲ್ಲ. ಆದರೆ, ಮುಂದಿನ ದಿನಗಳಲ್ಲಿ ಸರ್ಕಾರಕ್ಕೆ ಮಂಜುನಾಥಸ್ವಾಮಿಯೇ ಶಿಕ್ಷೆ ಕೊಡುತ್ತಾನೆ ಎಂದು ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಹೆಚ್. ಡಿ.ಕುಮಾರಸ್ವಾಮಿ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಸರ್ಕಾರ ನಡೆದುಕೊಂಡ ರೀತಿ ನೋಡಿದರೆ ಎಸ್ ಐಟಿ ಹೆಸರಲ್ಲಿ ತನಿಖೆಯ ನಾಟಕ ಮಾಡಿದೆ. ಶ್ರೀಕ್ಷೇತ್ರಕ್ಕೆ ಅವಮಾನ ಅಪಮಾನವಾಗುವಂತೆ ಸರ್ಕಾರ ನಡೆದುಕೊಂಡಿದೆ ಎಂದು ಆರೋಪಿಸಿದರು.

ಇದರಲ್ಲಿ ಧರ್ಮ ಬೆರೆಸಲು ಹೋಗುವುದಿಲ್ಲ. ಸರ್ಕಾರದ ಮುಂದೆ ದ್ವಾರಕನಾಥ್ ಎಂಬುವರು ದೂರು ಕೊಟ್ಟ ವಿಷಯದಲ್ಲಿ ಮುಖ್ಯಮಂತ್ರಿ ತಕ್ಷಣ ಕ್ರಮ ತೆಗೆದುಕೊಂಡಿದ್ದಾರೆ. ಎಡಪಂಥೀಯ ಶಕ್ತಿಗಳು ಇದೆ ಅಂತಿದಾರೆ. ಏನಿದ್ದರೂ ಮುಂದೆ ಗೊತ್ತಾಗಲಿದೆ ಎಂದರು. ದಸರಾ ಉದ್ಘಾಟನೆಗೆ ಸಾಹಿತಿ ಭಾನು ಮಸ್ತಾಕ್ ಅವರನ್ನು ಆಹ್ವಾನಿಸಿರುವುದಕ್ಕೆ ತಕರಾರು ಇಲ್ಲ. ಆದರೆ,ಉದ್ಧಟತನ ಬೇಡ. ಹಿಂದೂ ದೇಗುಲಗಳು , ಧಾರ್ಮಿಕ ಕೇಂದ್ರಗಳು ಹಿಂದೂಗಳ ಆಸ್ತಿಯಲ್ಲ ಎನ್ನುತ್ತಾರೆ. ಭಾನು ಮಸ್ತಾಕ್ ಅವರಿಂದ ಪೂಜೆ ಮಾಡಿಸೋದು ಬೇರೆ ವಿಚಾರ. ಧಾರ್ಮಿಕ ಕ್ಷೇತ್ರಗಳಿಗೆ ಈ ರೀತಿ ಸಮಸ್ಯೆ ಉಂಟು ಮಾಡೋದು ಸರ್ಕಾರಕ್ಕೆ ಕುತ್ತು ತರುವಂಥದ್ದು ಎಂದು ಅವರು ಹೇಳಿದರು.

ಕಾಂಗ್ರೆಸ್ ನಿಷ್ಠಾವಂತ ಕಾರ್ಯಕರ್ತ ಸದನದಲ್ಲಿ ಆರ್‌ಎಸ್‌ಎಸ್ ಗೀತೆ ಹಾಡಿದ್ದಾರೆ. ತಮಾಷೆಗೂ ಆ ರೀತಿ ಹೇಳೋದನ್ನು ಕಾಂಗ್ರೆಸ್‌ನವರು ಒಪ್ಪಲ್ಲ. ಈಗ ಕ್ಷಮೆ ಕೇಳುವ ಪರಿಸ್ಥಿತಿ ಉದ್ಭವವಾಗಿದೆ ಎಂದು ಟೀಕಿಸಿದರು. ನಾನು ಬಹಳನೋವಿನಿಂದ ಹೇಳುತ್ತಿದ್ದೇನೆ. ರಾಜ್ಯದ ಸಮಸ್ಯೆ ಬಗ್ಗೆ ಸರ್ಕಾರ ಕೇಳುತ್ತಿಲ್ಲ. ಕ್ಷಮೆ ಕೇಳಿರುವುದನ್ನು ಗಮನಿಸಿದರೆ, ಅವರು ಭಯ ಬಿದ್ದು ಕೇಳುತ್ತಿದಾರೋ ಏನೋ? ಅದರ ಬಗ್ಗೆ ನನಗೆ ಗೊತ್ತಿಲ್ಲ. ಅದು ಅವರ ಪಕ್ಷದ ವಿಚಾರ ಎಂದು ಕುಮಾರಸ್ವಾಮಿ ತಿಳಿಸಿದರು.

## ಧರ್ಮಸ್ಥಳ ವಿರುದ್ಧ ಮಿಥ್ಯಾರೋಪ, ಬಿಜೆಪಿಯಿಂದ ರಾಜಕೀಯ

• ಉದಯವಾಹಿನಿ,ಬೆಂಗಳೂರು

ಧರ್ಮಸ್ಥಳ ಕ್ಷೇತ್ರದ ವಿಚಾರದಲ್ಲಿ ಮಿಥ್ಯಾರೋಪಕ್ಕೆ ಪ್ರಚಾರ ಸಿಗುವ ಬದಲು ಸತ್ಯ ದೃಢವಾಗಲಿ ಎನ್ನುವ ಉದ್ದೇಶದಿಂದ ಸರಕಾರ ಎಸ್ಐಟಿ ರಚಿಸಬೇಕಾಗಿ ಬಂತು. ಇದನ್ನು ಬಿಜೆಪಿಯವರೂ ಸ್ವಾಗತಿಸಿದ್ದರು. ಈಗ ಇದನ್ನೇ ಅವರು ರಾಜಕೀಯ ಬಂಡವಾಳ ಮಾಡಿಕೊಳ್ಳಲು ಹೊರಟಿದ್ದಾರೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ದೂರಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಯಾರೋ ಒಬ್ಬ ಅನಾಮಿಕ ತಾನು ಧರ್ಮಸ್ಥಳದಲ್ಲಿ ಹತ್ತಾರು ಶವಗಳನ್ನು ಹೂತು ಹಾಕಿದ್ದಾಗಿ ಹೇಳಲು ಶುರು ಮಾಡಿದ. ಅದೇನೆಂದು ಸರಿಯಾಗಿ ಕಂಡುಕೊಳ್ಳುವುದು ಸರಕಾರದ ಕರ್ತವ್ಯ ಆಗಿತ್ತು. ಎಸ್ಐಟಿ ಮಾಡಿದ್ದರಿಂದ ಧರ್ಮಸ್ಥಳದ ಶಕ್ತಿ, ಆ ಕ್ಷೇತ್ರದ ಬಗೆಗಿನ ವಿಶ್ವಾಸ ಮತ್ತಷ್ಟು ಹೆಚ್ಚಾಗಿದೆ. ಏಕೆಂದರೆ, ಇದರಿಂದ ವಿನಾ ಕಾರಣ ಕಳಂಕ ಅಂಟಿಕೊಳ್ಳುವ ಅಪಾಯ ತಪ್ಪಿತು ಎಂದು ಅವರು ತಿಳಿಸಿದ್ದಾರೆ.

## ಅಕ್ರಮ ಹಣ ವರ್ಗಾವಣೆ ಕೇಸ್ ಕೈ ಶಾಸಕ ವಿರೇಂದ್ರ ಪಪ್ಪಿ ಇಡಿ ಕಸ್ಟಡಿಗೆ

• ಉದಯವಾಹಿನಿ, ಬೆಂಗಳೂರು

ಅಕ್ರಮ ಹಣ ವರ್ಗಾವಣೆ, ಗೇಮಿಂಗ್ ಆ್ಯಪ್‌ಗಳಿಗೆ ಹಣ ಪೂರೈಕೆ ಆರೋಪದ ಮೇಲೆ ಬಂಧನಕ್ಕೆ ಒಳಗಾಗಿದ್ದ ಕಾಂಗ್ರೆಸ್ ಶಾಸಕ ವಿರೇಂದ್ರ ಪಪ್ಪಿ ಅವರನ್ನ ಮತ್ತೆ 6 ದಿನ ಇಡಿ ಕಸ್ಟಡಿಗೆ ನೀಡಿ ಕೋರ್ಟ್ ಆದೇಶಿಸಿದೆ. ವಾದ ಪ್ರತಿವಾದಗಳನ್ನು ಆಲಿಸಿದ ಬಳಿಕ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಗುರುವಾರ ಕಸ್ಟಡಿ ವಿಸ್ತರಣೆ ಮಾಡಿ ಆದೇಶ ಹೊರಡಿಸಿದೆ. ಅಲ್ಲದೇ ಅವರಗೆ 24 ಗಂಟೆಗಳಿಗೊಮ್ಮೆ ವೈದ್ಯಕೀಯ ತಪಾಸಣೆ ಮಾಡಿಸಬೇಕು ಎಂದು ಕೋರ್ಟ್ ಸೂಚಿಸಿದೆ. ಇದರೊಂದಿಗೆ ಶುದ್ಧವಾದ ಆಹಾರ, ನೀರು, ಮೆಡಿಸಿನ್ ನೀಡಬೇಕು. ಆರೋಪಿಗೆ ಸ್ವಲ್ಪ ವಿಶ್ರಾಂತಿ ಕೊಟ್ಟು ವಿಚಾರಣೆ ಮಾಡಬೇಕು. 30 ನಿಮಿಷ ವಕೀಲರ ಭೇಟಿಗೆ ಅವಕಾಶ ನೀಡಬೇಕು, ರಾತ್ರಿ 9 ಗಂಟೆಯ ತನಕ ವಿಚಾರಣೆ ನಡೆಸಬೇಕು ಎಂದು ಕೋರ್ಟ್ ಹೇಳಿದೆ.

ವಿರೇಂದ್ರ ಪಪ್ಪಿ ಇಡಿ ಕಸ್ಟಡಿ ಇಂದಿಗೆ ಅಂತ್ಯಗೊಂಡ ಹಿನ್ನೆಲೆ ಬೆಂಗಳೂರಿನಲ್ಲಿರುವ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿತ್ತು. ಇಡಿ ಪರ ವಕೀಲ ಪ್ರಮೋದ್ ಚಂದ್ರ ವಾದ ಮಂಡಿಸಿದ್ರೆ, ಆರೋಪಿ ವಿರೇಂದ್ರ ಪಪ್ಪಿ ಪರ ಹಿರಿಯ ವಕೀಲ ಕಿರಣ್ ಜವಳಿ ವಾದ ಮಂಡಿಸಿದರು.

**ಏನಿದು ಪ್ರಕರಣ?:** ಗೇಮಿಂಗ್ ಆ್ಯಪ್‌ಗಳಿಗೆ ಅಕ್ರಮವಾಗಿ ಹಣ ವರ್ಗಾವಣೆ, ಅಕ್ರಮ ಆಸ್ತಿ ಮತ್ತು ತೆರಿಗೆ ವಂಚನೆ ಆರೋಪ ಪಪ್ಪಿ ವಿರುದ್ಧ ಕೇಳಿಬಂದಿತ್ತು. ಈ ಕುರಿತು ಗೋವಾದಲ್ಲಿ 2 ಪ್ರಕರಣ ದಾಖಲಾಗಿತ್ತು. ಇದನ್ನಾಧರಿಸಿ ಇಡಿ ದಾಳಿ ನಡೆಸಿತ್ತು.

# ಬೆಂಗಳೂರಿನಲ್ಲಿ ಸದ್ದು ಮಾಡಿದ ತಲೆಬುರುಡೆ

### ಅಸಲಿ ವಿಷಯ ತಿಳಿದು ನಿರಾಳರಾದ ನಾಗರಿಕರು; ಏನಿದರ ರಹಸ್ಯ? ಇದರಿಂದ ಕೆಲಕಾಲ ಭಾರೀ ಆತಂಕ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

**ಭಾರೀ ಸಂಚಲನಕ್ಕೆ ಕಾರಣ**

ಧರ್ಮಸ್ಥಳ ಗ್ರಾಮದಲ್ಲಿ ತಲೆಬುರುಡೆ ಕೇಸ್ ಭಾರೀ ಸದ್ದು ಮಾಡುತ್ತಿರುವ ಬೆನ್ನಲ್ಲೇ ಸಿಲಿಕಾನ್ ಸಿಟಿಯಲ್ಲಿ ರಾಜಕಾಲುವೆ ಪಕ್ಕ ಮಂಗಳವಾರ ಬಿದ್ದಿದ್ದ ಮಾನವನ ತಲೆಬುರುಡೆ, ಮೂಳೆಗಳು ಭಾರೀ ಆತಂಕಕ್ಕೆ ಕಾರಣವಾಗಿದ್ದವು. ಪರಪ್ಪನ ಅಗ್ರಹಾರದ ಜಿ.ಎಸ್. ಪಾಳ್ಯದ ರಾಜಕಾಲುವೆ ಬಳಿ ಸಿಕ್ಕ ಬುರುಡೆ, ಮೂಳೆಗಳು ನಗರದಲ್ಲಿ ಭಾರೀ ಸಂಚಲನಕ್ಕೆ ಕಾರಣವಾಗಿದ್ದವು. ಇದೀಗ ಇದರ ರಹಸ್ಯ ಬಯಲಾಗಿದೆ. ಅಂತಿಮವಾಗಿ ವೈದ್ಯಕೀಯ ವಿದ್ಯಾರ್ಥಿನಿಯೊಬ್ಬರು ಅಧ್ಯಯನಕ್ಕೆಂದು ಬಳಸಿದ್ದ ಬುರುಡೆ, ಮೂಳೆಗಳನ್ನು ಅಚಾನಕ್ಕಾಗಿ ರಾಜಕಾಲುವೆ ಪ್ರದೇಶಕ್ಕೆ ತಂದು ಎಸೆಯಲಾಗಿತ್ತು ಎಂಬ ಸತ್ಯ ಇದೀಗ ತನಿಖೆಯಿಂದ ಬಯಲಾಗಿದೆ. ಇದರಿಂದ ಬೆಂಗಳೂರು ನಗರ ಪೊಲೀಸರು ನೆಮ್ಮದಿಯ ನಿಟ್ಟುಸಿರು ಬಿಡುವಂತಾಗಿದೆ ಜೊತೆಗೆ ಜನರು ಕೂಡ ಜಿ.ಎಸ್. ಪಾಳ್ಯದ ರಾಜಕಾಲುವೆ ಸಮೀಪ ಆಗಸ್ಟ್ 26ರಂದು ಮಂಗಳವಾರ ಬೆಳಗ್ಗೆ ಮೂಳೆಗಳು, ಬುರುಡೆ ಕಂಡ ಸ್ಥಳೀಯ ಪೌರ ಕಾರ್ಮಿಕರು ಪೊಲೀಸ್ ಸಹಾಯವಾಣಿ ಸಂಖ್ಯೆ 112ಕ್ಕೆ ಕರೆ ಮಾಡಿ ಮಾಹಿತಿ ನೀಡಿದ್ದರು. ವಿಷಯ ತಿಳಿದು ಹೊಯ್ಸಳ ಪ್ಯಾಟ್ರೋಲಿಂಗ್ ತಂಡದವರು ಹಾಗೂ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯ ಸಿಬ್ಬಂದಿ ತಕ್ಷಣ ಸ್ಥಳಕ್ಕೆ ತೆರಳಿ ಪರಿಶೀಲನೆ ಕೈಗೊಂಡಿದ್ದರು. ಪೊಲೀಸರು ಸ್ಥಳಕ್ಕೆ ಆಗಮಿಸಿದ್ದು, ರಾಜಕಾಲುವೆಯಲ್ಲಿ ಬಿದ್ದಿದ್ದ ಬುರುಡೆ ಹಾಗೂ ಮೂಳೆಗಳನ್ನು ಪರಿಶೀಲನೆ ನಡೆಸಲು ಆರಂಭಿಸಿದ್ದರು. ಸ್ಥಳೀಯರ ಬಳಿ ಕಳೆದ ರಾತ್ರಿ ಏನಾದರೂ ಶಬ್ದ ಕೇಳಿದ್ದು, ಯಾರದರೂ ಬಂದು ಎಸೆದಿದ್ದನ್ನು ನೋಡಿದ್ದಾರೆ ಎಂದು ವಿಚಾರಣೆ ಮಾಡಲು ಆರಂಭಿಸಿದರು. ಇದನ್ನೆಲ್ಲ ಗಮನಿಸಿ ಸ್ಥಳಕ್ಕೆ ಆಗಮಿಸಿದ ಸಮೀಪದ ಮನೆಯ ನಿವಾಸಿ ರಾಜಶೇಖರ್ ಈ ಬುರುಡೆಗಳ ಹಿಂದಿನ ರಹಸ್ಯ ಬಿಚ್ಚಿಟ್ಟರು.

ರಾಜಶೇಖರ್ ಅವರ ಮಗಳು ಎರಡನೇ ವರ್ಷದ ಎಂಬಿಬಿಎಸ್ ವ್ಯಾಸಂಗ ಮಾಡುತ್ತಿದ್ದಾರೆ. ಅವರು ಪ್ರಾಯೋಗಿಕ ಅಧ್ಯಯನದ ಸಲುವಾಗಿ ತಲೆಬುರುಡೆ ಹಾಗೂ ಮೂಳೆಗಳನ್ನು ಕಾಲೇಜು ಲ್ಯಾಬ್‌ನಿಂದ ಮನೆಗೂ ತಂದಿದ್ದರು. ಮಗಳ ಅಧ್ಯಯನ ಮುಗಿದಿದ್ದು, ಮನೆಯಲ್ಲಿ ಏಕೆ ಇಡಬೇಕು ಎಂದೆಣಿಸಿದ ರಾಜಶೇಖರ್, ಮೂಳೆ ಹಾಗೂ ಬುರುಡೆಯನ್ನು ರಾಜಕಾಲುವೆ ಬಳಿ ಎಸೆದು ಹೋಗಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

> **ತಲೆಬುರುಡೆ, ಮೂಳೆಗಳ ಕುರಿತು ರಾಜಶೇಖರ್, ಅವರ ಮಗಳು, ಕಾಲೇಜಿನವರ ಬಳಿಯೂ ಮಾಹಿತಿ ಪಡೆಯಲಾಗಿದೆ. ಲಿಖಿತವಾಗಿ ಹೇಳಿಕೆ ದಾಖಲಿಸಿಕೊಳ್ಳಲಾಗಿದೆ. ಅಧ್ಯಯನ ಸಲುವಾಗಿಯೇ ಅವುಗಳನ್ನು ಕಾನೂನಾತ್ಮಕವಾಗಿ ಬಳಸುತ್ತಿದ್ದರು ಎಂಬುದು ದೃಢಪಟ್ಟಿದೆ. ಇದರಿಂದ ಯಾವುದೇ ಪ್ರಕರಣ ದಾಖಲಿಸಿಲ್ಲ, ಎಂದು ನಗರದ ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಹೇಳಿದ್ದಾರೆ.**

**ಅಧ್ಯಯನಕ್ಕಾಗಿ ಬಳಸಿದ್ದ ಮೂಳೆ**

**ಬೆಂಗಳೂರಿನ ಪರಪ್ಪನ ಅಗ್ರಹಾರದ ರಾಜಕಾಲುವೆ ಬಳಿ ತಲೆಬುರುಡೆ, ಮೂಳೆಗಳು ಪತ್ತೆಯಾಗಿದ್ದು ಆತಂಕ ಮೂಡಿಸಿತ್ತು. ತನಿಖೆಯ ನಂತರ, ವೈದ್ಯಕೀಯ ವಿದ್ಯಾರ್ಥಿನಿಯೊಬ್ಬಳು ಅಧ್ಯಯನಕ್ಕಾಗಿ ಬಳಸಿದ್ದ ಮೂಳೆಗಳನ್ನು ರಾಜಶೇಖರ್ ಎಂಬುವವರು ರಾಜ ಕಾಲುವೆಗೆ ಎಸೆದಿದ್ದು ಬೆಳಕಿಗೆ ಬಂದಿದೆ. ಪೊಲೀಸರು ಈ ಬಗ್ಗೆ ಹೇಳಿಕೆಯನ್ನು ದಾಖಲಿಸಿಕೊಂಡಿದ್ದು, ಇದು ಅಧ್ಯಯನಕ್ಕೆ ಬಳಸಿದ್ದು ಎಂದು ತನಿಖೆಯಿಂದ ದೃಢಪಟ್ಟಿದೆ.**

## 2ನೇ ಹಂತದ ಮಾನ್ಯತೆ ಪಡೆದ ದೇಶದ ಮೊದಲ ವಿಮಾನ ನಿಲ್ದಾಣ

• ಉದಯವಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ವಿಮಾನ ನಿಲ್ದಾಣಗಳಲ್ಲಿ ಸೌಲಭ್ಯ, ಪ್ರಯಾಣಿಕ ಸ್ನೇಹಿ ಸೌಕರ್ಯ, ತಂತ್ರಜ್ಞಾನಗಳ ಬಳಕೆಗಾಗಿ ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವು ಎಸಿಐನ 2ನೇ ಹಂತದ ಪ್ರಮಾಣಪತ್ರ ಪಡೆದಿದೆ. ಅಂತರರಾಷ್ಟ್ರೀಯ ವಿಮಾನ ನಿಲ್ದಾಣಗಳ ಮಂಡಳಿಯು ಪ್ರವೇಶ ವರ್ಧಕ ಮಾನ್ಯತೆ ಕಾರ್ಯಕ್ರಮದಡಿ ವಿಮಾನ ನಿಲ್ದಾಣಗಳಲ್ಲಿನ ಸೌಲಭ್ಯ, ತಂತ್ರಜ್ಞಾನ ಬಳಕೆ, ಪ್ರಯಾಣಿಕ ಸ್ನೇಹಿ ಸೌಕರ್ಯಗಳನ್ನು ಆಧರಿಸಿ ಮಾನ್ಯತೆಯನ್ನು ನೀಡುತ್ತದೆ. ಈ ಮೂಲಕ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವು ಎಸಿಐನ 2ನೇ ಹಂತದ ಮಾನ್ಯತೆ ಪಡೆದ ದೇಶದ ಮೊದಲ ವಿಮಾನ ನಿಲ್ದಾಣ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಅಂಗವಿಕಲರು, ಹಿರಿಯ ನಾಗರಿಕರು ಸುಲಭವಾಗಿ ಸಂಚರಿಸಲು, ಇತರ ಸೌಲಭ್ಯಗಳನ್ನು ಸರಳವಾಗಿ ಬಳಸಿಕೊಳ್ಳಲು ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿದೆ. ಪ್ರಯಾಣಿಕರ ಅಗತ್ಯತೆ ಪೂರೈಸುವ ಉದ್ದೇಶದಿಂದ ವಿಮಾನ ನಿಲ್ದಾಣದಲ್ಲಿ ಅಗತ್ಯ ಸೌಕರ್ಯ ಒದಗಿಸುವ ಎಇಎ ಕಾರ್ಯಕ್ರಮವನ್ನು ಜಾರಿಗೊಳಿಸಲಾಗಿದೆ. ಇದೆಲ್ಲವನ್ನು ಪರಿಗಣಿಸಿ ಎಇಎ ಮಾನ್ಯತೆ ನೀಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಎಸಿಐ ನೀಡುವ ಪ್ರವೇಶ ವರ್ಧಕ ಮಾನ್ಯತೆ ಕಾರ್ಯಕ್ರಮದಡಿ 2ನೇ ಹಂತ ಮಾನ್ಯತೆ ಪಡೆದಿರುವುದು ಸಂತಸ ತರಿಸಿದೆ. ಪ್ರವೇಶ ವರ್ಧಕ ಮಾನ್ಯತೆಯು ಕೇವಲ ಮೂಲಸೌಕರ್ಯವನ್ನು ಪರಿಗಣಿಸುವುದಿಲ್ಲ ಬದಲಾಗಿ ಪ್ರತಿಯೊಬ್ಬ ಪ್ರಯಾಣಿಕರ ಅನುಭವವನ್ನು ಒಳಗೊಂಡಿರುತ್ತದೆ ಎಂಬ ನಮ್ಮ ನಂಬಿಕೆಯ ಪ್ರತಿಬಿಂಬ ಆಗಿದೆ ಎಂದು ಸತಕಿ ತಿಳಿಸಿದಾರೆ.

> **ವಿಮಾನ ನಿಲ್ದಾಣಗಳ ಕಾರ್ಯತಂತ್ರ, ನೀತಿ ನಿಯಮ ಮತ್ತು ಅವುಗಳಿಂದ ದೊರೆಯುವ ಫಲಿತಾಂಶವನ್ನು ಎಸಿಐ ಮೌಲ್ಯಮಾಪನ ಮಾಡುತ್ತದೆ. ಪ್ರಯಾಣಿಕರು, ಸಿಬ್ಬಂದಿ ಸೇರಿದಂತೆ ವಿಮಾನ ನಿಲ್ದಾಣದ ಎಲ್ಲಾ ಬಳಕೆದಾರರ ಪ್ರಯಾಣ ಅನುಭವದ ಅಭಿಪ್ರಾಯ ಆಧರಿಸಿ ಮಾನ್ಯತೆ ನೀಡಲಾಗಿದೆ.**
>
> **-ಸತ್ಯಕಿ ರಘುನಾಥ್, ಮುಖ್ಯ ಕಾರ್ಯನಿರ್ವಹಣಾಧಿಕಾರಿ**

## ವಿದ್ಯುತ್ ತಂತಿ ತಗುಲಿ ಇಬ್ಬರು ಸಾವು

• ಉದಯವಾಹಿನಿ, ದೊಡ್ಡಬಳ್ಳಾಪುರ



ಉದಯವಾಹಿನಿ ಚಿತ್ರ

ತಾಲ್ಲೂಕಿನ ಕಾರನಾಳ ಗ್ರಾಮದಲ್ಲಿ ಸಂಜೆ ವಿದ್ಯುತ್ ತಂತಿ ತಗುಲಿ ಇಬ್ಬರು ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ರಕ್ಷಿಸಲು ಹೋದ ಮಹಿಳೆ ಗಂಭೀರವಾಗಿ ಗಾಯಗೊಂಡಿದ್ದಾರೆ.

ಮೃತರನ್ನು ಸಂಜಯ್ (43) ಲಲಿತಮ್ಮ(50) ಎಂದು ಗುರುತಿಸಲಾಗಿದೆ. ಗಾಯಗೊಂಡಿರುವ ಲಕ್ಷ್ಮಮ್ಮ(45) ಅವರನ್ನು ನಗರದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ವಿದ್ಯುತ್ ಕಂಬದಿಂದ ನಿರ್ಮಾಣ ಹಂತದ ಮನೆಗೆ ಎಳೆದೊಕೊಂಡಿದ್ದ ವಿದ್ಯುತ್ ತಂತಿ ಸಮೀಪವೇ ಒಣ ಹಾಕಿದ್ದ ಬಟ್ಟೆ ತೆಗೆದುಕೊಳ್ಳಲು ಹೋದ ಲಲಿತಮ್ಮ ಅವರಿಗೆ ವಿದ್ಯುತ್ ತಂತಿ ತಗುಲಿ ಒದ್ದಾಡಲು ಆರಂಭಿಸಿದರು. ಇದನ್ನು ನೋಡಿ ರಕ್ಷಿಸಲು ಹೋದ ಸಂಜಯ್ ಅವರಿಗೂ ವಿದ್ಯುತ್ ತಗುಲಿದೆ. ಇಬ್ಬರೂ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ.

ಈ ಇಬ್ಬರನ್ನೂ ರಕ್ಷಿಸಲು ಮುಂದಾದ ಲಕ್ಷ್ಮಮ್ಮ ಗಾಯಗೊಂಡಿದ್ದು, ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಅವರು ಪ್ರಾಣಾಪಾಯದಿಂದ ಪರಾಗಿದ್ದಾರೆ. ಸ್ಥಳಕ್ಕೆ ಬೆಸ್ಕಾಂ ಅಧಿಕಾರಿಗಳು, ಗ್ರಾಮಾಂತರ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದರು. ಗ್ರಾಮಾಂತರ ಠಾಣೆಯಲ್ಲಿ ದೂರು ದಾಖಲಾಗಿದೆ.


## ಧರ್ಮಸ್ಥಳ ಕೇಸ್‌ನಲ್ಲಿ ತಾವೇ ತೋಡಿದ ಹಳ್ಳಕ್ಕೆ ಬಿದ್ದರು, ಡಿಕೆಶಿ ಹೇಳಿಕೆ ವಾಪಸ್ ಪಡೆಯಲಿ

• ಉದಯವಾಹಿನಿ, ಬೆಂಗಳೂರು

ಧರ್ಮಸ್ಥಳ ಕೇಸ್ ವಿಚಾರದಲ್ಲಿ ಕಾಂಗ್ರೆಸ್ ಅನವಶ್ಯಕವಾಗಿ ಮಾಡಿರುವ ತಪ್ಪಿಗಾಗಿ ಇನ್ನೊಬ್ಬರ ಮೇಲೆ ಗೂಬೆ ಕೂರಿಸ್ತಾರೆ. ತಾವೇ ತೋಡಿದ ಹಳ್ಳಕ್ಕೆ ಬಿದ್ದರು ಅಂತ ಕೇಂದ್ರ ಸಚಿವ ವಿ.ಸೋಮಣ್ಣ ಕಿಡಿಕಾರಿದ್ದಾರೆ. ವಿಧಾನಸೌಧದಲ್ಲಿ ಮಾತನಾಡಿದ ಅವರು, ಧರ್ಮಸ್ಥಳ ವಿಚಾರದಲ್ಲಿ ಬಿಜೆಪಿ ರಾಜಕೀಯ ಮಾಡಿದವರು ಅಲ್ಲ. ಧರ್ಮಸ್ಥಳಕ್ಕೆ ಇತಿಹಾಸ ಇದೆ. ಧಾರ್ಮಿಕ, ನಂಬಿಕೆ ಸ್ಥಳ. ಈ ಸ್ಥಳವನ್ನ ಅಸ್ಥಿರಗೊಳಿಸುವ ಪ್ರಯತ್ನ ಮಾಡ್ತಿದ್ದಾರೆ. ಯಾರೋ ಒಬ್ಬ ದೂರು ಕೊಟ್ಟ ಅಂತೇಳಿ ಕಾಂಗ್ರೆಸ್ ಎಸ್‌ಐಟಿ ಮಾಡಿದ್ರು. ಅವರಿವರ ಮಾತು ಕೇಳಿ ಎಸ್‌ಐಟಿ ಮಾಡಿದ್ರು ಅಂತಾ ವಾಗ್ದಾಳಿ ನಡೆಸಿದರು.

**ಚಾಮುಂಡೇಶ್ವರಿ ಭಾರತಕ್ಕೆ ದೇವತೆ**

ಇದೇ ವೇಳೆ ಚಾಮುಂಡೇಶ್ವರಿ ದೇವಸ್ಥಾನದ ವಿಚಾರದಲ್ಲಿ ಡಿ.ಕೆ.ಶಿವಕುಮಾರ್ ಅವರು ಈ ರೀತಿ ಮಾತನಾಡಬಾರದಿತ್ತು. ಇದು ಅಕ್ಷ್ಯಮ ಅಪರಾಧ. ಆರ್‌ಎಸ್‌ಎಸ್ ಬಗ್ಗೆ ಮಾತಾಡಿದಾಗ ಪರವಾಗಿಲ್ಲ ಶಿವಕುಮಾರ್ ಅಂದ್ಕೊಂಡಿದ್ವಿ. ರಾಣಿ ಪ್ರಮೋದದೇವಿ ಅವರು ಹೇಳಿರೋದು ಸರಿ ಇದೆ. ನಾವು ಮಸೀದಿಗೆ ಹೋಗಿ ನಮ್ಮದು ಅನ್ನೋದಕ್ಕೆ ಆಗುತ್ತಾ? ಚಾಮುಂಡೇಶ್ವರಿ ಭಾರತಕ್ಕೆ ದೇವತೆ. ಭಗವಂತ ನಿಮ್ಮನ್ನ ಮೆಚ್ಚುವುದಿಲ್ಲ.



ಡಿಕೆಶಿ ಅವರ ಕುಟುಂಬವನ್ನ ಹತ್ತಿರದಿಂದ ನೋಡಿದ್ದೇನೆ. ಭಕ್ತಿ, ಪೂಜೆ ಮಾಡ್ತಾರೆ. ಡಿಕೆಶಿ ನಿಮ್ಮ ಹೇಳಿಕೆಯನ್ನ ವಾಪಸ್ ಪಡೆಯುವುದು ಒಳ್ಳೆಯದು ಎಂದು ಆಗ್ರಹಿಸಿದರು.

**ನಾಮಾವಶೇಷ ಆಗ್ತಾರೆ**

**ನಾನು ರಾಜಕೀಯ ನಿವೃತ್ತಿ ಅಂತೇಳಿಲ್ಲ. ತುಮಕೂರು ಲೋಕಸಭಾ ಕ್ಷೇತ್ರದಿಂದ ಸ್ಪರ್ಧೆ ಮಾಡಲ್ಲ ಅಂತೇಳಿದ್ದೇನೆ. ನಾನು ಆಕಸ್ಮಿಕವಾಗಿ ತುಮಕೂರು ಲೋಕಸಭಾ ಕ್ಷೇತ್ರದಲ್ಲಿ ಸ್ಪರ್ಧಿಸಿದ್ದೆ. ಹಾಗಾಗಿ ಮುಂದೆ ತುಮಕೂರು ಲೋಕಸಭೆ ಕ್ಷೇತ್ರದಿಂದ ಸ್ಪರ್ಧಿಸಿಲ್ಲ ಎಂದಿದ್ದೇನೆ. ಅಲ್ಲದೆ ಸದಸ್ಯಕ್ಕೆ ರಾಜ್ಯಾಧ್ಯಕ್ಷ ಸ್ಥಾನ ಈಗ ಖಾಲಿ ಇಲ್ಲ. ಮೋದಿ ಅವರ ನೇತೃತ್ವದಲ್ಲಿ ಸೇವೆ ಮಾಡ್ತಾ ಇದೀನಿ, ಕೆಲಸ ಮಾಡ್ತೀನಿ ಅಂತೇಳಿದ್ದರು. ಇನ್ನು ಕಾಂಗ್ರೆಸ್‌ನಲ್ಲಿ ಕ್ರಾಂತಿಯೂ ಆಗುತ್ತೆ, ಕೆಲ ನಾಯಕರಿಗೆ ವಾಂತಿಯೂ ಆಗುತ್ತೆ. ಹೀಗೆ ಹೋಗ್ತಿದ್ರೆ ಕಾಂಗ್ರೆಸ್ ಅವರು ನಾಮಾವಶೇಷ ಆಗ್ತಾರೆ ಅಂತಾ ವ್ಯಂಗ್ಯವಾಡಿದರು.**

## ಬಾನು ಮುಷ್ತಾಕ್‌ಗೆ ದಸರಾ ಆಹ್ವಾನ ಉದ್ದೇಶವೋ, ದುರುದ್ದೇಶವೋ?

• ಉದಯವಹಿನಿ, ಬೆಂಗಳೂರು

**ಅಪಪ್ರಚಾರ ನಡೆಸಿದವರನ್ನು ಬಂಧಿಸಿಲ್ಲವೇಕೆ?**


**ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಾಕಿದ ಹಿಂದೂಗಳ ವಿರುದ್ಧ ಕೇಸ್ ದಾಖಲಿಸಿ, 24 ಗಂಟೆಗಳಲ್ಲಿ ಬಂಧಿಸುತ್ತಾರೆ. ಆದರೆ, ಧರ್ಮಸ್ಥಳದ ವಿಷಯದಲ್ಲಿ ಹಿಂದೂ ಭಾವನೆಗೆ ಧಕ್ಕೆ ತರುವಂತೆ ಸಾಮಾಜಿಕ ಜಾಲತಾಣದಲ್ಲಿ ಅಪಪ್ರಚಾರ ನಡೆದರೂ ಅವರ ವಿರುದ್ಧ ಕೇಸ್ ಹಾಕಿ ಬಂಧಿಸಬೇಕೆಂದು ಯಾಕೆ ಕಾಂಗ್ರೆಸ್ ಸರ್ಕಾರಕ್ಕೆ ಅನಿಸಿಲ್ಲ ಎಂದು ಪ್ರಶ್ನಿಸಿದರು.**

ಬಾನು ಮುಷ್ತಾಕ್ ಅವರು ಅಂತರರಾಷ್ಟ್ರೀಯ ಬೂಕರ್ ಪ್ರಶಸ್ತಿ ಪಡೆದುಕೊಂಡಿದ್ದಾರೆ. ರಾಜ್ಯ ಸರ್ಕಾರ, ಸಿಎಂಗಳಿಗೆ ಬಾನು ಮುಷ್ತಾಕ್‌ರನ್ನು ದಸರಾ ಉದ್ಘಾಟನೆಗೆ ಕರೆಯಬೇಕೆಂದು ಅನಿಸುತ್ತದೆ. ಬಾನು ಮುಷ್ತಾಕ್ ಅವರ ಜೊತೆಗೆ ದೀಪಾಭಸ್ತಿ ಅವರಿಗೂ ಪ್ರಶಸ್ತಿ ಲಭಿಸಿದೆ.

ಅವರನ್ನು ಕರೆಯಬೇಕೆಂದು ಸಿಎಂಗಳಿಗೆ ಯಾಕೆ ಅನಿಸಿಲ್ಲ? ಎಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಪ್ರಶ್ನಿಸಿದರು. ಕಾಂಗ್ರೆಸ್ ಸರ್ಕಾರದ ಅಜೆಂಡಾ ಏನು? ಎಂದು ಕೇಳಿದರು. ನಿಸಾರ್ ಅಹ್ಮದ್ ಅವರೂ ದಸರಾ ಉದ್ಘಾಟಿಸಿದ್ದರು. ಅದು ಬೇರೆ ಪ್ರಶ್ನೆ. ಬಾನು ಮುಷ್ತಾಕ್ ಅವರು ನಮ್ಮ ಸಂಸ್ಕೃತಿ, ಪರಂಪರೆ, ಎಲ್ಲಾ ಆಚಾರ ವಿಚಾರಗಳನ್ನು ಒಪ್ಪಿ ಬರುವುದಾದ್ರೆ, ಅದನ್ನು ನಾವು ಒಪ್ಪಿಕೊಳ್ಳುವುದಾಗಿ ಹೇಳಿದ್ದೇನೆ. ದಸರಾ ಎಂಬುದು ಕೇವಲ ಒಂದು ಸಾಂಸ್ಕೃತಿಕ ಕಾರ್ಯಕ್ರಮವಲ್ಲ, ಇದು ನಮ್ಮ ಹಿಂದೂ ಸಂಸ್ಕೃತಿ, ಹಿಂದೂ ಪರಂಪರೆಯ ಪದ್ಧತಿ. ರಾಜ ಮಹಾರಾಜರ ಕಾಲದಿಂದ ಈ ಪದ್ಧತಿ ಬಂದಿದೆ ಎಂದು ವಿಜಯೇಂದ್ರ ವಿವರಿಸಿದರು. ಹಿಂದೂಗಳ ಭಾವನೆಗೆ ಧಕ್ಕೆ ಬರಬಾರದೆಂಬುದು ನಮ್ಮೆಲ್ಲರ ಉದ್ದೇಶ ಎಂದು ನುಡಿದರು. ಹಿಂದೂ ಸಂಸ್ಕೃತಿ ಪರಂಪರೆಗೆ ಧಕ್ಕೆ ತರುವ ನಿರ್ಧಾರವನ್ನ ಸರಕಾರ ತೆಗೆದುಕೊಳ್ಳಬಾರದು. ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣದಲ್ಲಿ ಗೃಹ ಸಚಿವರು ಮಂಗಳೂರಿಗೆ ಹೋಗಿದ್ದರು.

ಸುಹಾಸ್ ಶೆಟ್ಟಿ ಮನೆಗೆ ಭೇಟಿ ನೀಡಲು ಹೊರಟ ಸಂದರ್ಭದಲ್ಲಿ ಯಾವುದೋ ಒಂದು ಕೋಮಿಗೆ ಸೇರಿದ ನಾಯಕರು ಹೋಗಬಾರದೆಂದು ಕಟ್ಟಿ ಹಾಕುವ ಕೆಲಸ ಮಾಡಿದ್ದರು. ಗೃಹ ಸಚಿವರು ಹಾಗೇ ವಾಪಸಾದರು. ಅಂದರೆ, ರಾಜ್ಯ ಸರ್ಕಾರದ ನಡವಳಿಕೆಯನ್ನು ಪ್ರತಿ ಸಂದರ್ಭದಲ್ಲೂ ಗಮನಿಸಿದರೆ, ಪ್ರತಿ ಬಾರಿಯೂ ಹಿಂದೂಗಳಿಗೆ ಅಪಮಾನ ಮಾಡುವ ನಿರ್ಧಾರವನ್ನೇ ಕಾಂಗ್ರೆಸ್ ಸರ್ಕಾರ ತೆಗೆದುಕೊಳ್ಳುತ್ತಿದೆ ಎಂದು ವಿಜಯೇಂದ್ರ ಆಕ್ಷೇಪಿಸಿದರು. ಎಸ್‌ಐಟಿ ತನಿಖೆ ಮಾಡಿಕೊಳ್ಳಲಿ, ದುಷ್ಟ ಶಕ್ತಿಗಳ ಹಿಂದಿರುವ ರಾಷ್ಟ್ರ ಅಂತರರಾಷ್ಟ್ರೀಯ ಮಟ್ಟದ ದುಷ್ಟ ಶಕ್ತಿಗಳ ಬಗ್ಗೆ ತಿಳಿಯಲು, ಅವರನ್ನು ಹೊರಕ್ಕೆ ತರಲು ಎನ್ಐಎ, ಸಿಬಿಐ ತನಿಖೆ ಆಗಬೇಕೆಂಬ ಆಗ್ರಹ ಭಕ್ತರದ್ದೂ ಆಗಿದೆ.

ಕಾಂಗ್ರೆಸ್ ಸರ್ಕಾರಕ್ಕೆ ರಾಜ್ಯದ ಸಿಎಂಗಳಿಗೆ ಕಿಂಚಿತ್ತಾದರೂ ಕಾಳಜಿ, ಪ್ರಾಮಾಣಿಕತೆ ಇದ್ದಲ್ಲಿ, ಹಿಂದೂಗಳ ಧಾರ್ಮಿಕ ಶ್ರದ್ಧೆ ಬಗ್ಗೆ ಕಿಂಚಿತ್ತಾದರೂ ನಂಬಿಕೆ ಇದ್ದರೆ, ಎಸ್‌ಐಟಿ ತನಿಖೆ ಆಗಲಿ, ಆದರೆ, ಅದಕ್ಕೊಂದು ಕಾಲಮಿತಿ ಬೇಕಲ್ಲವೇ ಎಂದು ಪ್ರಶ್ನಿಸಿದರು. ಶ್ರೀ ಕ್ಷೇತ್ರ ಧರ್ಮಸ್ಥಳ ಕುರಿತ ಈ ಹುಚ್ಚಾಟ ಇನ್ನೆಷ್ಟು ದಿನ ಮುಂದುವರೆಸುತ್ತೀರಿ? ಅಪಪ್ರಚಾರ ಮಾಡುವವರ ವಿರುದ್ಧ ಒಂದೂ ಎಫ್‌ಐಆರ್ ಮಾಡದ ಕಾಂಗ್ರೆಸ್ ಸರ್ಕಾರದ ಬಗ್ಗೆ ನಮಗೆ ವಿಶ್ವಾಸ ಇಲ್ಲ, ಷಡ್ಯಂತ್ರ ಮಾಡಿದ್ದು ಯಾರು? ಅಪಪ್ರಚಾರ ಮಾಡಿದ್ದು ಯಾರು? ದುಷ್ಟ ಶಕ್ತಿಗಳಿಗೆ ಹಣ ಕೊಟ್ಟವರು ಯಾರು? ಇವೆಲ್ಲವೂ ಸಮಗ್ರ ತನಿಖೆ ಆಗಲಿ ಎಂದು ವಿಜಯೇಂದ್ರ ಒತ್ತಾಯಿಸಿದರು.



### ಆ.31ರಂದು ಯಲಹಂಕ ಸಂಪರ್ಕಿಸುವ ಈ ರಸ್ತೆಗಳಲ್ಲಿ ಸಂಚಾರ ಬಂದ್, ಪರ್ಯಾಯ ಮಾರ್ಗದ ಪಟ್ಟಿ ಇಲ್ಲಿದೆ

# ಸಂಚಾರ ದಟ್ಟಣೆ ನಿಲ್ಲಿಸಲು ಇಲಾಖೆಯಿಂದ ಪರ್ಯಾಯ ಮಾರ್ಗಸೂಚಿ

• ಉದಯವಾಹಿನಿ, ಬೆಂಗಳೂರು



ಯಲಹಂಕ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಆಗಸ್ಟ್ 31 ರಂದು ಗಣೇಶ ವಿಸರ್ಜನಾ ಮೆರವಣಿಗೆ ನಡೆಯಲಿರುವ ಹಿನ್ನೆಲೆ ಸಂಚಾರ ಮಾರ್ಗ ಬದಲಾವಣೆ ಮತ್ತು ಪರ್ಯಾಯ ಮಾರ್ಗ ಬಳಸಲು ಸಂಚಾರ ಪೊಲೀಸರು ಮನವಿ ಮಾಡಿದ್ದಾರೆ. ಯಾವ್ಯಾವ ಮಾರ್ಗದಲ್ಲಿ ವಾಹನ ಓಡಾಟ ಇರೋದಿಲ್ಲ ಎಂಬುದರ ಪಟ್ಟಿ ಇಲ್ಲಿದೆ. ಆ. 31 ರಂದು ಗಣೇಶ ವಿಸರ್ಜನೆಗೂ ಮುನ್ನ ನಡೆಯುವ ಮೆರವಣಿಗೆಯು ಯಲಹಂಕ ನ್ಯೂ ಟೌನ್, ಸಿಂಗಾಪುರ, ಚಿಕ್ಕಬೆಟ್ಟಹಳ್ಳಿ, ದೊಡ್ಡಬೆಟ್ಟಹಳ್ಳಿ ಮತ್ತು ವಿದ್ಯಾರಣ್ಯಪುರ ಪ್ರದೇಶಗಳಲ್ಲಿ ಸಾಗಲಿದೆ. ಇನ್ನೂರಕ್ಕೂ ಹೆಚ್ಚು ಭಕ್ತಾದಿಗಳು ಮೆರವಣಿಗೆಯಲ್ಲಿ ಸೇರುವ ಬಗ್ಗೆ ಅಂದಾಜಿಸಲಾಗಿದ್ದು, ಸಂಚಾರ ದಟ್ಟಣೆ ಉಂಟಾಗುವ ಸಾಧ್ಯತೆ ಇದೆ. ಆ ಕಾರಣದಿಂದಾಗಿ ಅಂದಿನ ದಿನ ವಾಹನ ಸಂಚಾರವನ್ನು ಬೆಳಗ್ಗೆ 9 ರಿಂದ ರಾತ್ರಿ 10 ಗಂಟೆಯವರೆಗೆ ತಾತ್ಕಾಲಿಕವಾಗಿ ನಿರ್ಬಂಧಿಸಲಾಗಿದೆ. ವಾಹನ ಸವಾರರಿಗೆ ಅನುಕೂಲವಾಗುವಂತೆ ಪರ್ಯಾಯ ಮಾರ್ಗಗಳನ್ನು ಸೂಚಿಸಲಾಗಿದೆ.

**ಎಲ್ಲೆಲ್ಲಿ ವಾಹನ ಸಂಚಾರ ನಿರ್ಬಂಧ?:** ಜಾಲಹಳ್ಳಿ, ಪೀಣ್ಯ, ಯಶವಂತಪುರ, ವಿಜಯನಗರ, ಕೆಂಗೇರಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಿಂದ ಯಲಹಂಕಕ್ಕೆ ಬರುವ ವಾಹನಗಳಿಗೆ ನಿರ್ಬಂಧ ಹೇರಲಾಗಿದೆ. ಎಂ.ಎಸ್. ಪಾಳ್ಯ ಜೆಲ್ಲಿ ಮಿಷನ್ ಕ್ರಾಸ್, ಜಿಕೆ ವಿಕೆ ಬ್ಯಾಕ್ ಗೇಟ್, ತಿರುಮಲ ಧಾಬಾ, ಅತ್ತೂರು ಜಂಕ್ಷನ್, ಮದರ್ ಡೈರಿ ಜಂಕ್ಷನ್ ಕಡೆಗೆ ಹೋಗುವ ವಾಹನಗಳಿಗೆ ಬೆಳಗ್ಗೆ 9-00 ಗಂಟೆಯಿಂದ ರಾತ್ರಿ 10-00 ಗಂಟೆಯವರೆಗೆ ನಿರ್ಬಂಧ ಇರುತ್ತದೆ. ಸಂಚಾರ ಪೊಲೀಸರು ತಮ್ಮ ಅಧಿಕೃತ ಎಕ್ಸ್ ಖಾತೆಯಲ್ಲಿ ಸಂಚಾರ ಮಾರ್ಗ ಬದಲಾವಣೆ ಬಗ್ಗೆ ಮಾಹಿತಿ ಹಂಚಿಕೊಂಡಿದ್ದಾರೆ. ಇದನ್ನು ಉಲ್ಲೇಖಿಸಿರುವ ಈಶಾನ್ಯ ಭಾಗದ ಎಸಿಪಿ ಪ್ರದೀಪ್, ಆ. 31 ರಂದು ಯಲಹಂಕ ಹೆಗಡೆ ನಗರ ನಾಗವಾರ ಜಂಕ್ಷನ್‌ನಲ್ಲಿ ಗಣೇಶ ಮೆರವಣಿಗೆ ನಡೆಯಲಿದೆ. ಸಂಚಾರದಲ್ಲಿ ವ್ಯತ್ಯಯ ಉಂಟಾಗುವ ಸಾಧ್ಯತೆ ಇದೆ ಎಂದು ಹೇಳಿದ್ದಾರೆ.

**ಪರ್ಯಾಯ ಮಾರ್ಗ ಯಾವುದು?:** ಜಾಲಹಳ್ಳಿ ಮತ್ತು ಪೀಣ್ಯದಿಂದ ಯಲಹಂಕ ಕಡೆಗೆ ಹೋಗುವ ವಾಹನಗಳು ಗಂಗಮ್ಮ ವೃತ್ತದಲ್ಲಿ ಬಲಕ್ಕೆ ತಿರುಗಬೇಕು. ನಂತರ ಬಿಇಎಲ್ ವೃತ್ತದಲ್ಲಿ ಎಡಕ್ಕೆ ತಿರುಗಿ, ದೊಡ್ಡಬೊಮ್ಮಸಂದ್ರ ಕಮಾನು, ನಂಜಪ್ಪ ವೃತ್ತ, ತಿಂಡ್ಲು ಮುಖ್ಯ ರಸ್ತೆ ಮೂಲಕ ಜಿಕೆವಿಕೆ ಡಬಲ್ ರಸ್ತೆಯಲ್ಲಿ ಎಡ ತಿರುವು ಪಡೆದು ಜಿಕೆವಿಕೆ ಹಿಂಭಾಗದ ಗೇಟ್‌ನಿಂದ ಉನ್ನಿಕೃಷ್ಣ ಮುಖ್ಯ ರಸ್ತೆಯ ಮೂಲಕ ಯಲಹಂಕ ತಲುಪಬಹುದು. ಯಶವಂತಪುರ, ವಿಜಯನಗರ ಮತ್ತು ಕೆಂಗೇರಿಯಿಂದ ಯಲಹಂಕ ಕಡೆಗೆ ಹೋಗುವ ವಾಹನಗಳು ಬಿಇಎಲ್ ವೃತ್ತದಲ್ಲಿ ಬಲಕ್ಕೆ ತಿರುಗಬೇಕು.

ದೊಡ್ಡಬೊಮ್ಮಸಂದ್ರ ಕಮಾನು, ನಂಜಪ್ಪ ವೃತ್ತ, ತಿಂಡ್ಲು ಮುಖ್ಯ ರಸ್ತೆ, ಜಿಕೆವಿಕೆ ಡಬಲ್ ರಸ್ತೆಯಲ್ಲಿ ಎಡ ತಿರುವು ಪಡೆದು ಜಿಕೆವಿಕೆ ಹಿಂಭಾಗದ ಗೇಟ್‌ನಿಂದ ಉನ್ನಿಕೃಷ್ಣ ಮುಖ್ಯ ರಸ್ತೆಯ ಮೂಲಕ ಯಲಹಂಕ ತಲುಪಬಹುದು. ಯಲಹಂಕದಿಂದ ಯಶವಂತಪುರ, ವಿಜಯನಗರ, ಕೆಂಗೇರಿ, ಜಾಲಹಳ್ಳಿ, ಪೀಣ್ಯ ಕಡೆಗೆ ಹೋಗುವ ವಾಹನಗಳು ಜಿಕೆವಿಕೆ ಹಿಂಭಾಗದ ಗೇಟ್‌ನಿಂದ ಜಿಕೆ ವಿಕೆ ಡಬಲ್ ರಸ್ತೆ ತಿಂಡ್ಲು ಕ್ರಾಸ್ ಬಳಿ ಎಡ ತಿರುವು ಪಡೆಯಬೇಕು. ನಂತರ ನಂಜಪ್ಪ ವೃತ್ತದ ಮುಖ್ಯ ರಸ್ತೆ, ದೊಡ್ಡಬೊಮ್ಮಸಂದ್ರ ಕಮಾನು, ಬಿಇಎಲ್ ವೃತ್ತದ ಮೂಲಕ ಯಶವಂತಪುರ, ವಿಜಯನಗರ, ಕೆಂಗೇರಿ, ಜಾಲಹಳ್ಳಿ ಮತ್ತು ಪೀಣ್ಯ ತಲುಪಬಹುದು. ಗಣೇಶ ವಿಸರ್ಜನಾ ಮೆರವಣಿಗೆಯು ಶಾಂತಿಯುತವಾಗಿ ನಡೆಯಲು ಸಾರ್ವಜನಿಕರು ಸಹಕರಿಸಬೇಕೆಂದು ಪೊಲೀಸರು ಮನವಿ ಮಾಡಿದ್ದಾರೆ.

> **ಯಲಹಂಕದಲ್ಲಿ ಗಣೇಶ ವಿಗ್ರಹ ವಿಸರ್ಜನೆಯ ಮೆರವಣಿಗೆಗಳು ನಡೆಯಲಿವೆ. ಸಿಂಗಾಪುರ ಲೇಔಟ್‌ನಿಂದ ದೊಡ್ಡಬೊಮ್ಮಸಂದ್ರ ಕೆರೆಯವರೆಗೆ ಎರಡು ಮೆರವಣಿಗೆಗಳು ಸಾಗುತ್ತವೆ. ಸಂಭ್ರಮ್ ಕಾಲೇಜು ಆರ್ಚ್‌ನಿಂದ ಅಲ್ಲಾಳಸಂದ್ರ ಕೆರೆಯವರೆಗೆ ಮತ್ತೊಂದು ಮೆರವಣಿಗೆ ನಡೆಯಲಿದೆ. ಹೀಗಾಗಿ ಸಂಚಾರ್ ನಿರ್ಬಂಧಿಸಲಾಗಿದೆ ಎಂದು ಟ್ರಾಫಿಕ್ ಪೊಲೀಸರು ತಿಳಿಸಿದ್ದಾರೆ.**

**ವಾಹನ ಓಡಾಟಕ್ಕೆ ಬ್ರೇಕ್**

**ಆಗಸ್ಟ್ 31ರಂದು ಯಲಹಂಕ ಸುತ್ತಮುತ್ತಲಿನ ಪ್ರದೇಶದಲ್ಲಿ ಗಣೇಶ ವಿಸರ್ಜನೆಗೂ ಮುನ್ನ ಮೆರವಣಿಗೆ ಇರುವುದರಿಂದ ಬೆಳಿಗ್ಗೆ ಒಬ್ಬಂತ್ತು ಗಂಟೆಯಿಂದ ರಾತ್ರಿ ಹತ್ತರರೆಗೂ ಸಂಚಾರ ನಿರ್ಬಂಧ ಹೇರಲಾಗಿದೆ. ಸಂಚಾರ ದಟ್ಟಣೆ ತಪ್ಪಿಸಲು ಜಿಕೆವಿಕೆ, ತಿರರುಮಲ ಧಾಬಾ, ಅತ್ತೂರು ಸೇರಿದಂತೆ ಸುತ್ತಮುತ್ತ ಪ್ರದೇಶದಲ್ಲಿನ ವಾಹನ ಓಡಾಟಕ್ಕೆ ಬ್ರೇಕ್ ಹಾಕಲಾಗಿದೆ. ಜೊತೆಗೆ ಯಲಹಂಕ ಮೂಲಕ ಬೇರೆ ಬೇರೆ ಪ್ರದೇಶಕ್ಕೆ ತೆರಳುವವರಿಗಾಗಿ ಪರ್ಯಾಯ ಮಾರ್ಗದ ಪಟ್ಟಿಯನ್ನು ಸಂಚಾರ ಪೊಲೀಸ್ ಇಲಾಖೆ ಬಿಡುಗಡೆ ಮಾಡಿದೆ.**

**ಸಂಚಾರ ದಟ್ಟಣೆ ಸಾಧ್ಯತೆ**

## ದಿನ ಭವಿಷ್ಯ

| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| --- | --- | --- |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ನಿಮ್ಮ ವಿಶ್ವಾಸ ಮತ್ತು ಚೈತನ್ಯ ಅಧಿಕವಾಗಿರುತ್ತದೆ. ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ.

**ವೃಷಭ** ಮುಂದೆ ಒಳ್ಳೆಯ ಸಮಯವಿರುವುದರಿಂದ ಸಂತೋಷದಿಂದಿರಿ. ಯಾರ ಹತ್ತಿರವಾದರು ಸಾಲವನ್ನು ತೆಗೆದುಕೊಂಡಿರುವ ಜನರು, ಯಾವುದೇ ಪರಿಸ್ಥಿತಿಯಲ್ಲೂ ಸಾಲವನ್ನು ಮರುಪಾವತಿಸಬೇಕಾಗುತ್ತದೆ.

**ಮಿಥುನ** ನೀವು ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳುತ್ತಿರದಿದ್ದಲ್ಲಿ ನಿಮಗೆ ತುಂಬಾ ದಣಿವಾದಂತೆನಿಸುತ್ತದೆ ಮತ್ತು ನಿಮಗೆ ಅಧಿಕ ವಿಶ್ರಾಂತಿ ಬೇಕಾಗುತ್ತದೆ. ಆರ್ಥಿಕ ಜೀವನದ ಸ್ಥಿತಿ ಉತ್ತಮವಾಗಿದೆ ಎಂದು ಹೇಳಲಾಗುವುದಿಲ್ಲ.

**ಕರ್ಕಾಟಕ** ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ.

**ಸಿಂಹ** ನೀವು ಸುತ್ತಲಿರುವವರು ನಿಮಗೆ ಬೆಂಬಲ ನೀಡುವುದರಿಂದ ನೀವು ಸಂತೋಷವಾಗಿರುವಿರಿ. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ.

**ಕನ್ಯಾ** ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮ ಸುತ್ತಮುತ್ತಲಿನ ಪರಿಸರವನ್ನು ಬೆಳಗಿಸುತ್ತದೆ. ಇದುವರೆಗೂ ಒಂಟಿಯಾಗಿ ಇರುವವರು ಯಾರೋ ವಿಶೇಷ ಭೇಟಿಯಾಗುವ ಸಾಧ್ಯತೆ ಇದೆ.

**ತುಲಾ** ರಿಯಲ್ ಎಸ್ಟೇಟ್ ನಲ್ಲಿ ಹೂಡಿಕೆ ಲಾಭದಾಯಕ . ಸಂಜೆ ಸ್ನೇಹಿತರೊಡನೆ ಹೋಗಿ ಇದು ತುಂಬ ಒಳ್ಳೆಯದನ್ನು ಮಾಡುತ್ತದೆ. ಪ್ರೀತಿಯ ಸಂಗೀತವನ್ನು ಯಾವಾಗಲೂ ಅದರಲ್ಲೇ ಮುಳುಗಿರುವವರು ಕೇಳಬಹುದು.

**ವೃಶ್ಚಿಕ** ಕೈಗೊಂಡ ಹೊಸ ಕಾರ್ಯಯೋಜನೆಗಳು ನಿಮ್ಮ ನಿರೀಕ್ಷೆಗಳನ್ನು ತಲುಪುವುದಿಲ್ಲ. ವ್ಯಾಪಾರದ ಉದ್ದೇಶದಿಂದ ಕೈಗೊಂಡ ಪ್ರಯಾಣ ದೀರ್ಘಾವಧಿಯಲ್ಲಿ ಪ್ರಯೋಜನಕಾರಿ ಎಂದು ಸಾಬೀತಾಗುತ್ತದೆ.

**ಧನಸ್ಸು** ಆಕರ್ಷಕವಾದ ಮತ್ತು ನಿಮ್ಮನ್ನು ಶಾಂತವಾಗಿರಿಸುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಿ. ಯಾವುದೇ ಅನುಭವದ ವ್ಯಕ್ತಿಯ ಸಲಹೆ ಇಲ್ಲದೆ, ನಿಮಗೆ ಆರ್ಥಿಕ ನಷ್ಟವಾಗುವ ಯಾವುದೇ ಕೆಲಸವನ್ನು ಮಾಡಬೇಡಿ.

**ಮಕರ** ನೀವು ಕೆಲವು ಉನ್ನತ ವ್ಯಕ್ತಿಗಳನ್ನು ಭೇಟಿಯಾಗಬಹುದಾದ್ದರಿಂದ ಗಾಬರಿಯಾಗಬೇಡಿ ಮತ್ತು ವಿಶ್ವಾಸ ಕಳೆದುಕೊಳ್ಳದಿರಿ. ಇದು ವ್ಯಾಪಾರಕ್ಕೆ ಬಂಡವಾಳದಂತೆ ಉತ್ತಮ ಆರೋಗ್ಯಕ್ಕೆ ಅಗತ್ಯವಾಗಿದೆ.

**ಕುಂಭ** ನಿಮ್ಮ ಒತ್ತಡವನ್ನು ನೀವು ತೊಡೆದುಹಾಕಬಹುದು. ನಿಮ್ಮ ಸ್ನೇಹಿತರೊಬ್ಬರು ದೊಡ್ಡ ಸಾಲವನ್ನು ಕೇಳಬಹುದು, ನೀವು ಅವರಿಗೆ ಈ ಹಣವನ್ನು ಕೊಟ್ಟರೆ, ನೀವು ಆರ್ಥಿಕ ತೊಂದರೆಗೊಳಗಾಗಬಹುದು.

**ಮೀನ** ಮಾನಸಿಕ ಶಾಂತಿಗಾಗಿ ಕೆಲವು ದಾನ ಧರ್ಮಗಳಲ್ಲಿ ನಿಮ್ಮನ್ನು ತೊಡಗಿಸಿಕೊಳ್ಳಿ. ಈ ರಾಶಿಚಕ್ರಕ್ಕೆ ಸಂಬಂಧಿಸಿದ ಕೆಲವರು ಇಂದು ಭೂಮಿಗೆ ಸಂಬಂಧಿಸಿದ ವಿಷಯದ ಬಗ್ಗೆ ಹಣವನ್ನು ಖರ್ಚುಮಾಡಬಹುದು.

---

• ವಾರ್ಷಿಕ ಮಹಾಸಭೆಯಲ್ಲಿ ಸಚಿವ ಡಿ.ಸುಧಾಕರ್ ಮಾಹಿತಿ

# ಡಿಸಿಸಿ ಬ್ಯಾಂಕ್: ರೂ.8.3 ಕೋಟಿ ನಿವ್ವಳ ಲಾಭ

• ಉದಯವಾಹಿನಿ, ಚಿತ್ರದುರ್ಗ

ಚಿತ್ರದುರ್ಗ ಡಿ.ಸಿ.ಸಿ ಬ್ಯಾಂಕ್ 2024-25ನೇ ಸಾಲಿನಲ್ಲಿ ಬ್ಯಾಂಕ್ ರೂ.1338.40 ಕೋಟಿ ವ್ಯವಹಾರ ನಡೆಸಿದ್ದು, ರೂ.8 ಕೋಟಿ 3 ಲಕ್ಷ ನಿವ್ವಳ ಲಾಭಗಳಿಸಿ ಪ್ರಗತಿಯತ್ತ ಸಾಗುತ್ತಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಚಿತ್ರದುರ್ಗ ಡಿಸಿಸಿ ಬ್ಯಾಂಕಿನ ಅಧ್ಯಕ್ಷ ಡಿ.ಸುಧಾಕರ್ ಚಿತ್ರದುರ್ಗ ಡಿ.ಸಿ.ಸಿ ಬ್ಯಾಂಕಿನಲ್ಲಿ ಈಚೆಗೆ ನಡೆದ 2024-25ನೇ ಸಾಲಿನ ವಾರ್ಷಿಕ ಮಹಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

**ಡಿಸಿಸಿ ಬ್ಯಾಂಕ್ ರೈತರಿಗೆ ಆರ್ಥಿಕವಾಗಿ ನೆರವು**

ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕಿಗೆ ಸರ್ಕಾರದಿಂದಾಗಲೀ ಅಥವಾ ಇನ್ನಾವುದೇ ಮೂಲದಿಂದಾಗಲೀ ಹಣಕಾಸಿನ ಅನುದಾನ ಲಭ್ಯವಾಗುತ್ತಿರುವುದಿಲ್ಲ. ಬ್ಯಾಂಕ್ ಸಾರ್ವಜನಿಕರಿಂದ ಠೇವಣಿ ಸಂಗ್ರಹಣೆ ಮಾಡಿ ಮತ್ತು ನಬಾರ್ಡ್ ಮತ್ತು ಅಪೆಕ್ಸ್ ಬ್ಯಾಂಕಿನಿಂದ ಸಾಲ ಪಡೆದು ರೈತರಿಗೆ ಸಾಲ ವಿತರಿಸುತ್ತಿದೆ. ಬ್ಯಾಂಕಿಗೆ ಆರಂಭದಲ್ಲಿ ಸುಮಾರು 25 ವರ್ಷಗಳ ಹಿಂದೆ ಸರ್ಕಾರದಿಂದ ರೂ.1. ಕೋಟಿ ಷೇರು ಹಣ ಬಂದಿರುತ್ತದೆ. ಅದರೂ ಚಿತ್ರದುರ್ಗ ಡಿ.ಸಿ.ಸಿ ಬ್ಯಾಂಕ್ ರೈತರಿಗೆ ಆರ್ಥಿಕವಾಗಿ ನೆರವು ನೀಡುವ ಕೆಲಸ ಮಾಡುತ್ತಿದೆ ಎಂದು ತಿಳಿಸಿದರು.

ಬ್ಯಾಂಕಿನ ಎಲ್ಲಾ ಸದಸ್ಯ ಸಹಕಾರ ಸಂಘಗಳು ಬದ್ಧತೆಯಿಂದ ಕೆಲಸ ನಿರ್ವಹಿಸಿದರೆ ಹಾಗೂ ಸುಸ್ತಿ ಸಾಲ ಮರುಪಾವತಿ ಮಾಡಿದರೆ ನಿಮ್ಮ ಡಿ.ಸಿ.ಸಿ ಬ್ಯಾಂಕ್ ಉಳಿಯುತ್ತದೆ ಹಾಗೂ ಬ್ಯಾಂಕಿನಿಂದ ಎಲ್ಲಾ ರೀತಿಯ ಸಾಲ ಸೌಲಭ್ಯ ನೀಡಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.

2025ರ ಮಾರ್ಚ್ 31ರ ಅಂತ್ಯಕ್ಕೆ ರೂ.630.68 ಕೋಟಿ ಠೇವಣಿ ಸಂಗ್ರಹಿಸಿದ್ದು, 2025-26ನೇ ಸಾಲಿಗೆ ರೂ.739.68 ಕೋಟಿ ಠೇವಣಿ ಸಂಗ್ರಹಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದರು.ಇದೇ ಸಂದರ್ಭದಲ್ಲಿ ಸಹಕಾರ ರತ್ನ ಪ್ರಶಸ್ತಿ ಪಡೆದ ಬ್ಯಾಂಕಿನ ಅಧ್ಯಕ್ಷ ಡಿ.ಸುಧಾಕರ್ ಅವರಿಗೆ ಬ್ಯಾಂಕಿನ ಉಪಾಧ್ಯಕ್ಷರು ಮತ್ತು ನಿರ್ದೇಶಕರು, ಬ್ಯಾಂಕಿನ ವತಿಯಿಂದ ಸನ್ಮಾನಿಸಲಾಯಿತು.

ಸಭೆಯಲ್ಲಿ ಸಿಡಿಸಿಸಿ ಬ್ಯಾಂಕಿನ ಉಪಾಧ್ಯಕ್ಷ ಹೆಚ್.ಬಿ. ಮಂಜುನಾಥ್, ಬ್ಯಾಂಕಿನ ನಿರ್ದೇಶಕರಾದ ಎಸ್.ಆರ್. ಗಿರೀಶ್, ಹೆಚ್.ಟಿ.ನಾಗರೆಡ್ಡಿ, ಎಂ.ನಿಶಾನಿ ಜಯಣ್ಣ, ವಿನೋದಸ್ವಾಮಿ, ಕೆ.ಜಗಣ್ಣ, ಹೆಚ್.ಎಂ ದ್ಯಾಮಣ್ಣ, ರಘು ರಾಮರೆಡ್ಡಿ, ಪಿ.ತಿಪ್ಪೇಸ್ವಾಮಿ, ಟಿ.ಮಹಾಂತೇಶ್, ಡಾ.ಕೆ. ಅನಂತ್, ಓ.ಮಂಜುನಾಥ್, ವ್ಯವಸ್ಥಾಪಕ ನಿರ್ದೇಶಕರಾದ ಇಲ್ಯಾಸ್ ಉಲ್ಲಾ ಷರೀಫ್, ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

> **ಬ್ಯಾಂಕ್ ಪ್ರಗತಿಯತ್ತ ಸಾಗುತ್ತಿದ್ದು, ಬ್ಯಾಂಕಿನ ಅಭಿವೃದ್ಧಿಗೆ ತಮ್ಮೆಲ್ಲರ ಸಹಕಾರ ಮುಖ್ಯವಾಗಿದ್ದು, ಪ್ರಸ್ತುತ ಸಾಲಿನಲ್ಲಿ ಬ್ಯಾಂಕ್ ರೂ.8.03 ಕೋಟಿ ಲಾಭಗಳಿಸಿ ಸದಸ್ಯರಿಗೆ ಶೇ.2% ಡಿವಿಡೆಂಡ್ ನೀಡಿರುವುದು ಸಂತಸ ತಂದಿದೆ. ಶೀಘ್ರದಲ್ಲೇ ಭದ್ರ ಮೇಲ್ದಂಡೆ ಯೋಜನೆಯು ಪೂರ್ಣಗೊಳ್ಳಲ್ಲಿದ್ದು, ಇದರಿಂದ ಜಿಲ್ಲೆಯ ರೈತರಿಗೆ ಅನೂಕೂಲವಾಗಲಿದೆ. ಪ್ರಯುಕ್ತ ರೈತರು ತಾವು ಪಡೆದ ಸಾಲವನ್ನು ಸೂಕ್ತ ಸಮಯಕ್ಕೆ ಮರುಪಾವತಿಸಿ ಬ್ಯಾಂಕಿನಿಂದ ಹೆಚ್ಚಿನ ಸಾಲ ಸೌಲಭ್ಯ ಪಡೆಯಲು ಸೂಚಿಸಿದರು. ಬ್ಯಾಂಕಿನ ಅಧ್ಯಕ್ಷರಾದ ಡಿ.ಸುಧಾಕರ್ ಅವರಿಗೆ ರಾಜ್ಯ ಸರ್ಕಾರವು ಸಹಕಾರ ರತ್ನ ಪ್ರಶಸ್ತಿ ನೀಡಿ ಗೌರವಿಸಿರುವುದು. ನಮ್ಮೆಲ್ಲರಿಗೂ ಅತೀವ ಸಂತೋಷ ಉಂಟು ಮಾಡಿದೆ**
>
> **- ಟಿ.ರಘುಮೂರ್ತಿ, ಸಿಡಿಸಿಸಿ ಬ್ಯಾಂಕಿನ ನಿರ್ದೇಶಕರು ಹಾಗೂ ಚಳ್ಳಕೆರೆ ಶಾಸಕ**

> **ಬ್ಯಾಂಕ್ 2024-25ನೇ ಸಾಲಿನಲ್ಲಿ ಕೃಷಿ ಉದ್ದೇಶಗಳಿಗಾಗಿ 56950 ರೈತರಿಗೆ ರೂ.48689.52 ಲಕ್ಷ ಬೆಳೆ ಸಾಲ ವಿತರಣೆ ಮಾಡಿದೆ. ಈ ಪೈಕಿ ಪರಿಶಿಷ್ಟ ಜಾತಿಯ 7043 ರೈತರಿಗೆ ರೂ.4791.61 ಲಕ್ಷ, ಪರಿಶಿಷ್ಟ ಪಂಗಡ 8704 ರೈತರಿಗೆ ರೂ.6573.55 ಲಕ್ಷ ಬೆಳೆ ಸಾಲ ವಿತರಣೆ ಮಾಡಲಾಗಿದೆ. ಒಟ್ಟಾರೆ ಎಸ್.ಸಿ, ಎಸ್.ಟಿ ವರ್ಗದ ರೈತರಿಗೆ 15747 ರೈತರಿಗೆ ರೂ.11365.16 ಲಕ್ಷ ಬೆಳೆ ಸಾಲ ವಿತರಣೆ ಮಾಡಲಾಗಿದೆ. 857 ರೈತರಿಗೆ ರೂ.5334.71 ಲಕ್ಷ ಮಧ್ಯಮಾವಧಿ ಸಾಲ ವಿತರಣೆ ಮಾಡಿದೆ. ಅಲ್ಲದೇ 2025-26ನೇ ಸಾಲಿಗೆ 3000 ಹೊಸ ರೈತರಿಗೆ ರೂ.15.00 ಕೋಟಿ ಅಲ್ಪಾವಧಿ ಕೃಷಿ ಬೆಳೆ ಸಾಲ, 1000 ಹೊಸ ರೈತರಿಗೆ ರೂ.52.00 ಕೋಟಿ ಮಧ್ಯಮಾವಧಿ ಸಾಲ ಮತ್ತು ರೂ.285.10 ಕೋಟಿ ಕೃಷಿಯೇತರ ಸಾಲ ನೀಡುವ ಗುರಿ ಹೊಂದಲಾಗಿದೆ. ಆದ್ದರಿಂದ ಈ ಸಾಲಗಳನ್ನು ನೀಡಲು ಠೇವಣಿ ಸಂಗ್ರಹಣೆ ಬಹಳ ಮುಖ್ಯವಾಗಿರುತ್ತದೆ -ಡಿ.ಸುಧಾಕರ್, ಸಚಿವ**

---

## ಅಂತರ್ಜಲ ಹೆಚ್ಚಳದಿಂದ ಬೋರವೇಲ್ ನಿಂದ ಏಕಾಏಕಿ ನೀರು

• ಉದಯವಾಹಿನಿ, ಚಿಂಚೋಳಿ


ಉದಯವಾಹಿನಿ ಚಿತ್ರ

ತಾಲ್ಲೂಕಿನಾದ್ಯಂತ ಸತತವಾಗಿ ಸುರಿಯುತ್ತಿರುವ ನಿರೀಕ್ಷಿತ ಪ್ರಮಾಣಕ್ಕಿಂತ ಹೆಚ್ಚು ಮಳೆಯಿಂದಾಗಿ ಅಂತರ್ಜಲ ಹೆಚ್ಚಾಗಿರುವುದರಿಂದ ಶಾದಿಪೂರ ಗ್ರಾಮದಲ್ಲಿರುವ ಬೋರವೇಲ್ ನಿಂದ ಏಕಾಏಕಿ ನೀರು ಉಕ್ಕಿ ಹೊರ ಬರುತ್ತಿವೆ. ತಾಲ್ಲೂಕಿನ ಶಾದಿಪೂರ ಗ್ರಾಮದ ಸೇತುವೆ ಪಕ್ಕದಲ್ಲಿರುವ ಬೋರವೇಲ್ ನಿಂದ ನೀರು ಉಕ್ಕಿ ಹರಿಯುತ್ತಿರುವುದರಿಂದ ರಸ್ತೆಗೆ ಹೋಗುತ್ತಿರುವ ಸಾರ್ವಜನಿಕರು ನೀರು ಕುಡಿದು ಕೊಳ್ಳುತ್ತಿದ್ದರೆ ಮತ್ತೊಂದೆಡೆ ಕೆಲವರು ಉಕ್ಕಿ ಹರಿಯುತ್ತಿರುವ ನೀರಿನ ಜೋತೆ ಪೋಟೋಗಳನ್ನು ತೆದುಕೊಳ್ಳುತ್ತಿರುವುದು ಕಾಣುತ್ತಿದೆ.

ಮಳೆಗಾಲದಲ್ಲಿ ನೀರಿನ ಪ್ರಮಾಣ ಹೆಚ್ಚಾಳ ಆಗಿರುವುದರಿಂದ ಬೋರವೇಲ್ ನಿಂದ ನೀರು ಉಕ್ಕಿ ಹರಿಯುವುದು ಸಹಜವೆಂದು ಕೆಲ ಗ್ರಾಮಸ್ಥರು ತಿಳಿಸಿದರು.

## ಅಕ್ರಮ ಸಿಲಿಂಡರ್ ಅಡ್ಡೆ ಮೇಲೆ ದಾಳಿ

• ಉದಯವಾಹಿನಿ, ವಿಜಯಪುರ

ನಗರದ ಅತಾವುಲ್ಲಾ ಚೌಕ್ ಹತ್ತಿರ ಗೃಹ ಬಳಕೆಯ ಅಡುಗೆ ಅನಿಲ ಸಿಲಿಂಡರ್‌ಗಳಿಂದ ಆಟೋಗಳಿಗೆ ರೀಫಿಲ್ ಮಾಡುತ್ತಿರುವ ಸ್ಥಳದ ಮೇಲೆ ಆಹಾರ ಇಲಾಖೆಯ ಅಧಿಕಾರಿಗಳು ಹಾಗೂ ಪೊಲೀಸ್ ಅಧಿಕಾರಿಗಳು ದಾಳಿ ಮಾಡಿ ಅಕ್ರಮ ಸಿಲಿಂಡರ್‌ಗಳನ್ನು ವಶಪಡಿಸಿಕೊಂಡರು. 1 ತುಂಬಿದ ಅಡುಗೆ ಅನಿಲ ಸಿಲಿಂಡರ್ ಹಾಗೂ 3 ಖಾಲಿ ಸಿಲಿಂಡರ್‌ಗಳನ್ನು, ಮತ್ತು ರಿಫಿಲ್ ಮಾಡಲು ಬಳಸುತ್ತಿದ್ದ ಮೋಟಾರು ಮತ್ತು ತೂಕದ ಯಂತ್ರವನ್ನು ವಶಪಡಿಸಿಕೊಂಡು ಗೋಲ್ ಗುಂಬಜ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದೆ ಎಂದು ಆಹಾರ ಇಲಾಖೆಯ ಉಪ ನಿರ್ದೇಶಕ ವಿನಯಕುಮಾರ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಠಗಳಿಂದ ಶಿಕ್ಷಣ, ಸಂಸ್ಕೃತಿ ಬೆಳವಣಿಗೆ ಸಾಧ್ಯ

• ಉದಯವಾಹಿನಿ, ಗುಳೇದಗುಡ್ಡ,

ಮಠಗಳಿಂದ ಪ್ರಸಾದ ವ್ಯವಸ್ಥೆ ಮಾಡುವ ಮೂಲಕ ಜಾತಿ,ಧರ್ಮ ಭೇದ ಮಾಡದೇ ಎಲ್ಲಾ ವರ್ಗದವರಿಗೆ ಶಿಕ್ಷಣ ನೀಡುತ್ತಿವೆ ಜೊತೆಗೆ ಸಂಸ್ಕೃತಿಯನ್ನು ಮುಂದಿನ ತಲೆಮಾರಿಗೆ ತಲುಪಿಸುವ ಜವಾಬ್ದಾರಿ ಮಠಗಳು ಮಾಡುತ್ತಿವೆ. ಅದರಲ್ಲಿ ಗುರುಸಿದ್ದೇಶ್ವರ ಬೃಹನ್ಮಠದ ಕಾರ್ಯ ಶ್ಲಾಘನೀಯವಾಗಿದೆ ಎಂದು ವಿಜಯಪುರ ಮಹಿಳಾ ವಿಶ್ವವಿದ್ಯಾಲಯದ ಮೌಲ್ಯಮಾಪನ ವಿಭಾಗದ ಕುಲಸಚಿವರಾದ ಪ್ರೊ. ಬಸವರಾಜ ಲಕ್ಕನ್ನವರ ಹೇಳಿದರು.

ಅವರು ಪಟ್ಟಣದ ಗುರುಸಿದ್ದೇಶ್ವರ ಬೃಹನ್ಮಠದಲ್ಲಿ ಭಾನುವಾರ ಜರುಗಿದ ಒಂದು ತಿಂಗಳ ನಿರಂತರವಾಗಿ ನಡೆಸಿಕೊಂಡು ಬಂದ ಶ್ರಾವಣಮಾಸದ ಇಷ್ಟಲಿಂಗ ಪೂಜೆ, ಕತೃ ಗದ್ದುಗೆಯ ವಚನಾಭಿಷೇಕ, ಪ್ರತಿದಿನ ಸಾಯಂಕಾಲ ಜರುಗಿದ ವಚನೋಪನ್ಯಾಸ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಶ್ರೀಮಠದ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಕೆಲವಡಿಯ ಸಮಾಜ ಸೇವಕಿ ಅನ್ನಪೂರ್ಣ ಪಾಟೀಲ, ನೇಕಾರ ಪ್ರಶಸ್ತಿ ಪುರಸ್ಕೃತರದ ಲಕ್ಷ್ಮಣ ಕಕ್ಕನ್ನವರ, ತೇಜಪ್ಪ ಚಿನ್ನೂರ, ದೆಹಲಿಯ ರಾಷ್ಟ್ರೀಯ ಕೈಮಗ್ಗ ದಿನಾಚರಣೆಯಲ್ಲಿ ಭಾಗವಹಿಸಿದ ರವೀಂದ್ರ ಜಿಡಗಿ, ಜಿಲ್ಲಾ ಹಿರಿಯ ಪತ್ರಕರ್ತ ಪ್ರಶಸ್ತಿ ಪುರಸ್ಕೃತ ಮಲ್ಲಿಕಾರ್ಜುನ ರಾಜನಾಳ, ಕಮರಿಮಠದ ಶರಣ ಬಸವಶ್ರೀ ಪ್ರಶಸ್ತಿ ಪುರಸ್ಕೃತೆ ಮಾಲಾ ರಾಜನಾಳ ಅವರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ವಿ.ಎ.ಬೆನಕನಾಳ, ಈರಣ್ಣ ಶೇಖಾ ಮುಂತಾದವರಿದ್ದರು.

---

## ಹಾಸ್ಟೆಲ್ ಶೌಚಾಲಯದಲ್ಲಿ ಮಗುವಿಗೆ ಜನ್ಮ ನೀಡಿದ ಹೈಸ್ಕೂಲ್ ವಿದ್ಯಾರ್ಥಿನಿ..!


ಉದಯವಾಹಿನಿ ಚಿತ್ರ

• ಉದಯವಾಹಿನಿ, ಯಾದಗಿರಿ

ಶಹಾಪುರ ನಗರದ ಡಾ. ಬಿ ಆರ್ ಅಂಬೇಡ್ಕರ್ ವಸತಿ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿದ್ದ 9ನೇ ತರಗತಿಯ ವಿದ್ಯಾರ್ಥಿನಿಯೊಬ್ಬರು ವಸತಿ ಶಾಲೆಯ ಶೌಚಾಲಯದಲ್ಲಿ ಗಂಡು ಮಗುವಿಗೆ ಜನ್ಮ ನೀಡಿದ್ದಾಳೆ.

ವಸತಿ ಶಾಲೆಯ ಶೌಚಾಲಯದಲ್ಲಿ ಮಧ್ಯಾಹ್ನ 2:30ರ ಸುಮಾರಿಗೆ ಬಾಲಕಿಗೆ ಹೆರಿಗೆಯಾಗಿದೆ ಗಂಡು ಮಗುವಿಗೆ ಜನ್ಮ ನೀಡಿದ್ದಾಳೆ ಸಂಬಂಧಿಸಿದ ಅಧಿಕಾರಿಗಳು ಈ ಬಗ್ಗೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಗಮನಕ್ಕೂ ತರಲಿಲ್ಲ ಬೇರೆ ಮೂಲಗಳಿಂದ ಗಮನಕ್ಕೆ ಬಂದಿದ್ದು ಕ್ರಮಕ್ಕೆ ಮುಂದಾಗಿದ್ದೇವೆ ಎಂದು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ್ ಕೋಸಂಬೆ ತಿಳಿಸಿದರು.

ಬಾಲಕಿ ಮತ್ತು ಮಗು ನಗರದ ಸರ್ಕಾರಿ ಆಸ್ಪತ್ರೆಯಲ್ಲಿ ಆರೋಗ್ಯವಾಗಿದ್ದಾರೆ. ಈ ಘಟನೆ ಕುರಿತು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಸ್ವಯಂ ಪ್ರೇರಿತ ಪ್ರಕರಣ ದಾಖಲು ಮಾಡಿಕೊಳ್ಳಲು ನಿರ್ಧರಿಸಿದೆ. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗೆ ದೂರವಾಣಿ ಮೂಲಕ ಮಾತನಾಡಿ ಘಟನೆ ಕುರಿತು ಪ್ರಕರಣ ದಾಖಲು ಮಾಡುವಂತೆ ಸೂಚಿಸಲಾಗಿದೆ. ಸ್ಥಳಕ್ಕೆ ಭೇಟಿ ನೀಡಿ ವಿಸ್ತೃತ ವರದಿಯನ್ನು ಆಯೋಗಕ್ಕೆ ಸಲ್ಲಿಸುವಂತೆ ತಿಳಿಸಲಾಗಿದೆ. ಇನ್ನು ಮಗುವಿಗೆ ಜನ್ಮ ನೀಡಿದ ಸಂಗತಿ ಹೊರಬೀಳುತ್ತಿದ್ದಂತೆ ಅಧಿಕಾರಿಗಳ ತಂಡ ಆಸ್ಪತ್ರೆಗೆ ಭೇಟಿ ನೀಡಿ ಪರಿಶೀಲಿಸುತ್ತಿದ್ದಾರೆ.

**ಬಾಲಕಿಗೆ ಗಂಡು ಮಗು: ಪೋಕ್ಸೋ -ಬಾಲ ನ್ಯಾಯ ಕಾಯಿದೆಯಡಿ ನಾಲ್ವರ ಮೇಲೆ ಪ್ರಕರಣ ದಾಖಲು**

**ದಿನಾಂಕ:27-08-2025 ರಂದು ಶಹಾಪುರ ನಗರದ ಡಾ.ಬಿ.ಆರ್.ಅಂಬೇಡ್ಕರ್ ಬಾಲಕಿಯರ ವಸತಿ ಶಾಲೆ (ಎಸ್.ಸಿ-813) ಇಲ್ಲಿ 9 ನೇ ತರಗತಿಯಲ್ಲಿ ಶಿಕ್ಷಣ ಪಡೆಯುತ್ತಿರುವ ಬಾಲಕಿಗೆ ಗಂಡು ಮಗು ಜನನವಾದ ಪ್ರಕರಣಕ್ಕೆ ಸಂಬಂಧಿಸಿದಂತೆ, ವಸತಿ ನಿಲಯದ ಪ್ರಾಚಾರ್ಯರು, ವಾರ್ಡನ್, ಒಬ್ಬರು ತರಗತಿ ಶಿಕ್ಷಕರು, ದೈಹಿಕ ಶಿಕ್ಷಕರು ಒಟ್ಟು 4 ಜನರನ್ನು ಅಮಾನತ್ತು ಮಾಡಲಾಗಿದ್ದು, ಈ ಪ್ರಕರಣಕ್ಕೆ ಸಂಬಂಧಿಸಿದಂತೆ 4 ಜನರ ಮೇಲೆ ಬಿ.ಎನ್.ಎಸ್ ಕಾಯ್ದೆ ಕಲಂ 64, ಪೋಕ್ಸೋ ಕಾಯ್ದೆ ಕಲಂ 4,6,19, ಹಾಗೂ ಬಾಲ ನ್ಯಾಯ ಕಾಯ್ದೆ- 2015ರ ಕಲಂ 33, 34 ರಡಿ ಶಹಾಪುರ ಪೊಲೀಸ್ ಠಾಣೆ ಯಲ್ಲಿ ಶ್ರೀಮತಿ ನಿರ್ಮಲಾ.ಎಚ್.ಸುರಪುರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಯಾದಗಿರಿ ರವರು ಪ್ರಕರಣ ದಾಖಲಿಸಿರುವುದಾಗಿ ಶ್ರೀ ಹರ್ಷಲ್ ಭೋಯರ್ ನಾರಾಯಣರಾವ್ ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಯಾದಗಿರಿ ರವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.**

---

## ಸತತ ಸುರಿಯುತ್ತಿರುವ ಮಳೆಗೆ ಜಲಾಶಯಗಳು,ಹಳ್ಳ ಕೊಳ್ಳಗಳು ಭರ್ತಿ,ಸೇತುವೆಗಳು ಜಲಾವೃತ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನಾದ್ಯಂತ ಸತತವಾಗಿ ಸುರಿಯುತ್ತಿರುವ ಮಳೆಗೆ ನಾಗರಾಳ ಜಲಾಶಯ,ಚಂದ್ರಂಪಳ್ಳಿ ಜಲಾಶಯ ಹಾಗೂ ಸಣ್ಣ ನೀರಾವರಿ ಇಲಾಖೆ ಕೆರೆಗಳು ಭರ್ತಿಯಾಗಿದ್ದು ಕೆರೆ ಹಾಗೂ ಜಲಾಶಯಗಳಿಂದ ಹೊರಬಿಡುತ್ತಿರುವ ನೀರಿನಿಂದ ಸೇತುವೆಗಳು ಜಲಾವೃತವಾಗಿರುವುದರಿಂದ ಅನೇಕ ಗ್ರಾಮಗಳ ಸಂಪರ್ಕ ರಸ್ತೆಗಳು ಕಡಿತವಾಗಿವೆ.

**ಮುಲ್ಲಾಮಾರಿ ಕೆಳದಂಡೆ ನಾಗರಾಳ ಜಲಾಶಯ:-** 490.15ಮೀಟರ್ ನೀರಿನ ಸಂಗ್ರಹವಿದ್ದು,2000ಕ್ಯೂಸೆಕ್ ಒಳಹರಿವು, 2500 ಹೊರಹರಿವು ನೀರು ಬಿಡಲಾಗಿದೆ ಎಂದು ನಾಗರಾಳ ಜಲಾಶಯ ಇಂಜಿನಿಯರಿಂಗ್ ವಿನಾಯಕ ಚವ್ಹಾಣ ತಿಳಿಸಿದ್ದಾರೆ.

**ಚಂದ್ರಂಪಳ್ಳಿ ಜಲಾಶಯ:** 1.051ಟಿಎಂಸಿ ನೀರಿನ ಸಂಗ್ರಹವಿದ್ದು, 1412ಕ್ಯೂಸೇಕ್ ನೀರಿನ ಒಳಹರಿವುವಿದ್ದು, 2200ಕ್ಯೂಸೇಕ್ ನೀರು ಹೊರಹರಿವು ಬಿಡಲಾಗಿದೆ ಎಂದು ಜಲಾಶಯ ಎಇಇ ಚೇತನ ಕಳಸ್ಕರ್ ತಿಳಿಸಿದ್ದಾರೆ. ಮುಲ್ಲಾಮಾರಿ ನದಿಗೆ ಅಡ್ಡಲಾಗಿ ನಿರ್ಮಿಸಿದ ಸೇತುವೆ ನಿರ್ಮಾಣಗಳು ಬ್ರಿಜ್ಡ್ ಕಂ ಬ್ಯಾರೇಜ್ ಗಳು ಚಿಮ್ಮನಚೋಡ,ತಾದಲಾಪೂರ,ಕನಕಪುರ,ಗಾರಂಪಳ್ಳಿ, ಚಂದಾಪೂರ,ಪೋಲಕಪಳ್ಳಿ,ಅಣವಾರ,ಭಕ್ತಂಪಳ್ಳಿ ಸೇತುವೆಗಳು ಜಲಾವೃತವಾಗಿ ಅನೇಕ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳು ಕಡಿತಗೊಂಡು ಜನರು ಪರದಾಡುವ ಪರಿಸ್ಥಿತಿ ಪ್ರತಿವರ್ಷ ಮಳೆಗಾಲ ಬಂದರೆ ನಿರ್ಮಾಣವಾಗುತ್ತಿದೆ ಅದ್ದರಿಂದ ಸೇತುವೆಗಳು ಮೇಲ್ದರ್ಜೆಗೆ ಎರಿಸುವಂತೆ ಸತೀಶರೆಡ್ಡಿ ತಾದಲಾಪೂರ ಹಾಗೂ ಗೋಪಾಲ ಪೂಜಾರಿ ಗಾರಂಪಳ್ಳಿ ಸರ್ಕಾರಕ್ಕೆ ಒತ್ತಾಯಿಸಿದರು.

**ತಾಲ್ಲೂಕಿನ ಮಳೆ ಮಾಪನ ಕೇಂದ್ರಗಳ ಮಳೆ ವರದಿ:** ಚಿಂಚೋಳಿ 11.9ಮೀಮೀ, ಕುಂಚಾವರಂ 30.4ಮೀಮೀ, ಐನಾಪುರ 28.5ಮೀಮೀ, ಸುಲೇಪೇಟ 11.6ಮೀಮೀ,ಚಿಮ್ಮನಚೋಡ 06.0ಮೀಮೀ,ನೀಡಗುಂದಾ 05.0ಮೀಮೀ ಮಳೆ ಗುರುವಾರ ಮಳೆಯಾಗಿದೆ,ಹೆಚ್ಚು ಮಳೆಯಾಗುತ್ತಿರುವುದರಿಂದ ಹೊಲಗದ್ದೆಗಳಲ್ಲಿ ನೀರು ನಿಲ್ಲದಂತೆ ರೈತರು ಹೊಲಗದ್ದೆಗಳಲ್ಲಿ ಕಾಲುವೆ ಮೂಲಕ ನೀರು ಹೊರಹಾಕಬೇಕು ಎಂದು ಸಹಾಯಕ ಕೃಷಿ ನಿರ್ದೇಶಕ ವೀರಶೇಟ್ಟಿ ರಾಠೋಡ್ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

**ಹದಗೆಟ್ಟ ರಸ್ತೆಗಳು**

**ಸತತವಾಗಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ಪಟ್ಟಣ ಸೇರಿದಂತೆ ಗ್ರಾಮೀಣ ಪ್ರದೇಶದ ಡಾಂಬರೀಕರಣ ರಸ್ತೆಗಳು ಹಾಗೂ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿ ಡಾಂಬರೀಕರಣ ರಸ್ತೆಗಳು ಹದಗೆಟ್ಟು ಹೋಗಿವೆ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ರಸ್ತೆಗಳು ವೀಕ್ಷಿಸಿ ದುರಸ್ಥಿಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿ ಕೊಡಬೇಕು ಎಂದು ಸಮಾಜ ಸೇವಕ ಸಾಗರ್ ಆನಂದಿ ನೀಮಾಹೋಸಳ್ಳಿ ಪಿಡಬ್ಲ್ಯೂಡಿ ಇಲಾಖೆಗೆ ಮನವಿಸಲ್ಲಿಸಿ ಒತ್ತಾಯಿಸಿದರು.**

## ಬಸವ ಸಂಸ್ಕೃತಿ ಯಶಸ್ವಿಗೆ ಶ್ರಮಿಸಿ : ಸಚಿವ ಶಿವಾನಂದ ಪಾಟೀಲ

• ಉದಯವಾಹಿನಿ, ಬಸವವನಬಾಗೇವಾಡಿ

ಪ್ರತಿಯೊಬ್ಬರೂ ಬಸವ ಸಂಸ್ಕೃತಿ ಅಭಿಯಾನದ ಯಶಸ್ಸಿಗೆ ತನು, ಮನ, ಧನದಿಂದ ಶ್ರಮಿಸಬೇಕಿದ್ದು, ಅಭಿಯಾನದ ಯಶಸ್ಸು ಬಸವ ಜನ್ಮಭೂಮಿಯ ನಮ್ಮ ನೆಲಕ್ಕೆ ಸಲ್ಲಲಿದೆ ಎಂದು ಜವಳಿ, ಸಕ್ಕರೆ, ಕಬ್ಬು ಅಭಿವೃದ್ಧಿ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಮನವಿ ಮಾಡಿದರು. ಪಟ್ಟಣದ ಶ್ರೀನಂದೀಶ್ವರ ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ರಾಜ್ಯ ಮಟ್ಟದ ಬಸವ ಸಂಸ್ಕೃತಿ ಅಭಿಯಾನ ಪೂರ್ವಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಬಸವ ಜನ್ಮಸ್ಥಳವಾದ ಈ ನೆಲದಲ್ಲಿ ರಾಜ್ಯ ಮಟ್ಟದ ಬಸವ ಸಂಸ್ಕೃತಿ ಅಭಿಯಾನದಿಂದ ನಡೆಯುತ್ತಿರುವುದು ನಮ್ಮ ಸುದೈವ ಎಂದರು. ಬಸವಭೂಮಿಯಲ್ಲಿ ನಡೆಯುತ್ತಿರುವ ಈ ಕಾರ್ಯಕ್ರಮ ಯಾರೊಬ್ಬರ ಕಾರ್ಯಕ್ರಮವಲ್ಲ. ಇದು ಇಡೀ ಬಸವವನಬಾಗೇವಾಡಿ ಜನತೆಯ ಮನೆಯ ಕಾರ್ಯಕ್ರಮದಂತೆ ಸೇವಾ ಕಾರ್ಯ ಮಾಡುವ ಮೂಲಕ ಕಾರ್ಯಕ್ರಮ ಯಶಸ್ವಿ ಮಾಡಬೇಕು ಎಂದು ಕೋರಿದರು.

ಜಾತ್ಯಾತೀತ ಸಮಾನತೆಯ ಸಮಾಜ ನಿರ್ಮಿಸಲು ಶ್ರಮಿಸಿದ ಪುಣ್ಯ ಪುರುಷ ಬಸವೇಶ್ವರರು ಜನಿಸಿದ ಈ ಪುಣ್ಯ ನೆಲದ ದರ್ಶನಕ್ಕಾಗಿ ನಾಡಿನ ಮೂಲೆಮೂಲೆಯಿಂದ ಮಠಾಧೀಶರು, ಬಸವ ಭಕ್ತರು, ಶರಣ ಬಂಧುಗಳು ಸೇರಿದಂತೆ ಲಕ್ಷಾಂತರ ಸಂಖ್ಯೆಯಲ್ಲಿ ಬಸವ ಮನಸ್ಸುಗಳು ಆಗಮಿಸಲಿದ್ದಾರೆ. ಹೀಗಾಗಿ ನಮ್ಮ ನೆಲಕ್ಕೆ ಬರುವ ಲಕ್ಷ ಲಕ್ಷ ಸಂಖ್ಯೆಯ ಬಸವ ಭಕ್ತರಿಗೆ ಯಾವುದೇ ಸಮಸ್ಯೆ ಆಗದಂತೆ ಹಾಗೂ ಸೇವಾ ಲೋಪ ಆಗದಂತೆ ಎಲ್ಲರೂ ಒಗ್ಗೂಡಿ ಕೆಲಸ ಮಾಡುವಂತೆ ಮನವಿ ಮಾಡಿದರು. ಹೊರಗಿನಿಂದ ಬರುವ ಬಸವ ಭಕ್ತರಿಗೆ ಸ್ಥಳೀಯರು ತಮ್ಮ ಮನೆಗಳಲ್ಲಿ ಆತಿಥ್ಯ ಕಲ್ಪಿಸಬೇಕು. ಕುಂಭ ಮೇಳವನ್ನು ಮೀರಿಸುವಂತೆ ಬಸವಜನ್ಮಭೂಮಿ ಜನರು ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಸಂಗನಗೌಡ ಚಿಕ್ಕೊಂಡ ಮನವಿ ಮಾಡಿದರು. ಸಿದ್ಧಲಿಂಗ ಶ್ರೀಗಳು, ಮನಗೂಳಿ ವಿರಕ್ತ ಮಠದ ವಿರತೀಶಾನಂದ ಶ್ರೀಗಳು, ಶ್ರೀ ಬಸವೇಶ್ವರ ಸೇವಾ ಸಮಿತಿ ಅಧ್ಯಕ್ಷ ಐ.ಸಿ. ಪಟ್ಟಣಶೆಟ್ಟಿ, ಬಸನಗೌಡ ಹರನಾಳ ಸೇರಿದಂತೆ ಇತರರು ಕಾರ್ಯಕ್ರಮದ ಯಶಸ್ಸಿನ ಕುರಿತು ಕೈಗೊಂಡಿರುವ ಸಿದ್ಧತೆಗಳ ಕುರಿತು ಮಾತನಾಡಿದರು.


ಉದಯವಾಹಿನಿ ಚಿತ್ರ

**ಸೆ.1ರಂದು ಬಸವ ಜನ್ಮ ಭೂಮಿಯಿಂದ ಅಭಿಯಾನಕ್ಕೆ ಚಾಲನೆ**

---

## ಹಾನಿಗೊಳಗಾಗುವ ಪ್ರದೇಶಗಳಲ್ಲಿ ಮುಂಜಾಗ್ರತಾ ಕ್ರಮ ಕೈಗೊಳ್ಳಿ: ಜಿಲ್ಲಾಧಿಕಾರಿ

• ಉದಯವಾಹಿನಿ, ಗದಗ


ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಿಂದ ಸಾಕಷ್ಟು ಮಳೆಯಾಗುತ್ತಿದ್ದು ಮಳೆಯಿಂದ ಹಾನಿಗೊಳಗಾಗುವ ಪ್ರದೇಶಗಳ ಸಾರ್ವಜನಿಕರ ಸುರಕ್ಷತೆಗೆ ಪ್ರಥಮಾದ್ಯತೆ ನೀಡಿ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು. ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮುಂಗಾರು ಹಂಗಾಮು ಪರಿಸ್ಥಿತಿ ಕುರಿತು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾದಿಕಾರದ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪ್ರವಾಹ ಪರಿಸ್ಥಿತಿಯನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಿಸಲು ಎಲ್ಲಾ ಅಧಿಕಾರಿಗಳು ಸನ್ನದ್ಧರಾಗಬೇಕು. ಅತೀವೃಷ್ಟಿಯಿಂದ ಉಂಟಾಗುವ ಸಾರ್ವಜನಿಕರ ಆಸ್ತಿ ಪಾಸ್ತಿ ಹಾನಿ ತಪ್ಪಿಸಲು ಅಗತ್ಯದ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಅಧಿಕ ಪ್ರಮಾಣದ ಮಳೆ ಸುರಿದಲ್ಲಿ ತಕ್ಷಣ ಅಧಿಕಾರಿಗಳು ಗುರುತಿಸಲಾದ ಪ್ರದೇಶಗಳಿಗೆ ಭೇಟಿ ನೀಡಿ ಪರಿಸ್ಥಿತಿ ನಿಯಂತ್ರಣ ಕುರಿತಂತೆ ಕ್ರಮ ವಹಿಸಬೇಕು. ಪ್ರವಾಹ ಸಂಭವಿಸುವ 43 ಗ್ರಾಮಗಳನ್ನು ಗುರುತಿಸಲಾಗಿದ್ದು ಮುಂಜಾಗ್ರತೆಯಾಗಿ ಆ ಭಾಗದ ಅಧಿಕಾರಿಗಳು ಜೀವ ಹಾನಿ ತಡೆಗೆ ನಿರಂತರ ನಿಗಾ ವಹಿಸಬೇಕು ಎಂದು ಸೂಚಿಸಿದರು. ಸಭೆಯಲ್ಲಿ ಮುಂಗಾರು ಹಂಗಾಮಿನಲ್ಲಿ ಅತೀವೃಷ್ಟಿಯಿಂದ ಮನೆ, ಶಾಲೆ, ಬೆಳೆ ಹಾಗೂ ಮೂಲಭೂತ ಸೌಕರ್ಯಗಳ ಹಾನಿಗಳ ಕುರಿತು ಚರ್ಚಿಸಲಾಯಿತು.


ಉದಯವಾಹಿನಿ ಚಿತ್ರ

## ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಬೆಳೆ ಹಾನಿ : ರೈತ ಸಂಘಗಳ ಮನವಿ

• ಉದಯವಾಹಿನಿ, ಬೀದರ

ಜಿಲ್ಲೆಯಲ್ಲಿ ಕಳೆದ ಒಂದು ತಿಂಗಳಿನಿಂದ ಧಾರಾಕಾರ ಮಳೆಯಿಂದಾಗಿ ಉದ್ದು, ಹೆಸರು, ಸೋಯಾಬೀನ್, ತೋಗರಿ, ಹತ್ತಿ ಹಾಗೂ ತೋಟಗಾರಿಕೆ ಬೆಳೆಗಳಿಗೆ ಭಾರೀ ಹಾನಿ ಉಂಟಾಗಿದೆ. ಇದಲ್ಲದೆ 50 ಕ್ಕೂ ಹೆಚ್ಚು ಜಾನುವಾರುಗಳು ನೀರಿನಲ್ಲಿ ಕೊಚ್ಚಿ ಹೋಗಿ ಸಾವಿಗೀಡಾಗಿದ್ದು, ಅನೇಕ ಮನೆಗಳು ಕುಸಿದು ಬಿದ್ದಿವೆ. ಇದರ ಪರಿಣಾಮವಾಗಿ ಜಿಲ್ಲೆಯ ರೈತರು ಆರ್ಥಿಕ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಈ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾ ಘಟಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿ, ಪ್ರತಿ ಎಕರೆಗೆ ಕನಿಷ್ಠ 25 ಸಾವಿರ ರೂಪಾಯಿ ಪರಿಹಾರ ನೀಡಬೇಕೆಂದು ಹಾಗೂ ಸಾವಿಗೀಡಾದ ಜಾನುವಾರುಗಳಿಗೆ, ಕುಸಿದ ಮನೆಗಳಿಗೆ ತಕ್ಷಣ ಸಮೀಕ್ಷೆ ನಡೆಸಿ ಸೂಕ್ತ ಪರಿಹಾರ ಒದಗಿಸಬೇಕೆಂದು ಮತ್ತು ಪ್ರತಿ ಟನ್ ಕಬ್ಬಿಗೆ ಒಂದು ಕೆಜಿ ಸಕ್ಕರೆ ಕೊಡಬೇಕು ಎಂದು ಒತ್ತಾಯಿಸಿದೆ. ರೈತ ಸಂಘದ ನಾಯಕರು, ಬೆಳೆ ವಿಮೆ ಕಟ್ಟಿದ ರೈತರಿಗೆ ಶೀಘ್ರದಲ್ಲೇ ವಿಮೆ ಹಣ ಬಿಡುಗಡೆ ಮಾಡುವಂತೆ ಸರ್ಕಾರವನ್ನು ಕೋರಿದ್ದಾರೆ. ನಮ್ಮ ಬೇಡಿಕೆಗಳನ್ನು ತಕ್ಷಣ ಪೂರೈಸದಿದ್ದರೆ ಬೀದಿಗಿಳಿದು ಉಗ್ರ ಹೋರಾಟ ನಡೆಸಲಾಗುವುದು, ಇದರಿಂದಾಗುವ ಪರಿಣಾಮಗಳಿಗೆ ಸರ್ಕಾರವೇ ಹೊಣೆಗಾರ ಎಂದು ಎಚ್ಚರಿಕೆ ನೀಡಿದ್ದಾರೆ.


ಉದಯವಾಹಿನಿ ಚಿತ್ರ

---

# ಭತ್ತದ ಗದ್ದೆಗಳು ಒಣಗುವುದಕ್ಕೆ ನೀರಾವರಿ ಇಲಾಖೆ ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆ

## ಹೊಸಳ್ಳಿ ಇ.ಜೆ ಕ್ಯಾಂಪ್ 36/1 ಕಾಲುವೆಗೆ ಸುಮಾರು 7 ಸಾವಿರ ಎಕರೆ ಹೊಂದಿದ್ದು, ನೀರಾವರಿ ಪ್ರದೇಶ ವಾಗಿದ್ದರೂ ಕಾಲುವೆಗೆ ಸರಿಯಾಗಿ ನೀರು ಬರುತ್ತಿಲ್ಲ

• ಉದಯವಾಹಿನಿ ಸಿಂಧನೂರು

ಇಡೀ ದೇಶಾದ್ಯಂತ ವರುಣನ ಆರ್ಭಟದಿಂದ ರಾಜ್ಯದಲ್ಲಿ ತುಂಗಭದ್ರಾ ಜಲಾಶಯ ಸೇರಿದಂತೆ ಹಲವು ಡ್ಯಾಂಗಳು ಭರ್ತಿಯಾಗಿ ಲಕ್ಷಗಟ್ಟಲೆ ಕ್ಯೂಸೆಕ್ ನೀರನ್ನು ನದಿಗೆ ಹರಿಸಲಾಗಿದ್ದು.ಆದರೆ ಹೊಸಳ್ಳಿ ಇ.ಜೆ ಕ್ಯಾಂಪ್ 36/1 ಕಾಲುವೆಗೆ ಸುಮಾರು 7 ಸಾವಿರ ಎಕರೆ ಹೊಂದಿದ್ದು. ನೀರಾವರಿ ಪ್ರದೇಶ ವಾಗಿದ್ದರೂ ಸಹ ಕಾಲುವೆಗೆ ಸರಿಯಾಗಿ ನೀರು ಬರುತ್ತಿಲ್ಲ. ಈಗಾಗಲೇ ರೈತರು ನಾಟಿ ಮಾಡಿದ ಭತ್ತದ ಬೆಳೆಗಳಿಗೆ ನೀರಲ್ಲದೇ ಗದ್ದೆಗಳು ಬಿರ್ಕ್ ಬಿಟ್ಟು ಒಣಗುತ್ತಿರುವುದನ್ನು ನೋಡಿದರೆ. ಅಯ್ಯೋ ಪಾಪ ಎನ್ನಿಸುತ್ತದೆ.

ರೈತರು ನೀರಲ್ಲದೆ ಒಣಗುತ್ತಿರುವ ಭತ್ತದ ಗದ್ದೆಗಳನ್ನು ನೋಡಿದೆ ತಮ್ಮ ಅಳಲನ್ನು ಪತ್ರಿಕಾದೊಂದಿಗೆ ತೋಡಿಕೊಂಡ ರೈತಾಪಿ ವರ್ಗ. ಆದರೆ ಇಲ್ಲಿಯ ನೀರಾವರಿ ಅಧಿಕಾರಿಗಳಾದ ಸತ್ಯನಾರಾಯಣ ಶೆಟ್ಟಿ (ಇಇ) ನೀರಾವರಿ ಇಂಜಿನಿಯರ್ ನಾಗಪ್ಪ ಹಾಗೂ ಕೆನಾಲ್ ಮೇಲೆ ಓಡಾಡುವ ಸಿಬ್ಬಂದಿ ವೆಂಕನಗೌಡ ಈ ಮೂರು ಅಧಿಕಾರಿಗಳಿಗೆ ರೈತರ ಸಂಕಷ್ಟ ಗೊತ್ತಾಗುತ್ತದೆ ಅಥವಾ ಇಲ್ಲವೋ , ಅವರಿಗೆ ಏನಾದರೂ ಕರುಳು ಇದೆಯೋ ಇಲ್ಲವೋ ಗೊತ್ತಿಲ್ಲ ಆದರೆ ಇವರುಗಳು ಬೇಜವಾಬ್ದಾರಿ ಧೋರಣೆಯಿಂದ ಹೊಸಳ್ಳಿ (ಇ ಜೆ) ಕ್ಯಾಂಪನ 36/1 ಭಾಗದ ಕಾಲುವೆಗೆ ನೀರು ಬಾರದೆ (ನೀರು ಸಿಗದೇ) ನಾಟಿ ಮಾಡಿದ ನೂರಾರು ಎಕರೆ ಭತ್ತ ಹೊಲಗಳು ಒಣಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಎಂದು ಹೊಸಳ್ಳಿ ಇ.ಜೆ . ಕ್ಯಾಂಪ್ ರೈತಾಪಿ ವರ್ಗ ಸಂಕಷ್ಟವನ್ನು ಅನುಭವಿಸುವಂತಾಗಿದೆ ಎಂದು ರೈತರು ತಮ್ಮ ಅಳಲನ್ನು ಸುದ್ದಿಗಾರರೊಂದಿಗೆ ತೋಡಿಕೊಂಡರು. ನಾಟಿ ಮಾಡಿ ಒಂದು ಬಾರಿ ಗೊಬ್ಬರ ಹಾಕಿ ಈಗಾಗಲೇ ಸುಮಾರು 15-25 ಸಾವಿರ ರೂ ಖರ್ಚು ಮಾಡಿದ್ದೇವೆ. ಕಾಲುವೆಗೆ ನೀರು ಬಾರದೆ. ಮಡಿಗಳಲ್ಲಿ ನೀರಲ್ಲದೆ ಒಣಗಿ ಹೊಲದ ತುಂಬಾ ಕಳೆವು ಬಂದಿದ್ದು. ಅದನ್ನು ತೆಗೆಯುವುದಕ್ಕೆ 10-20 ಹಾಳು ಮತ್ತು 3-4 ಸಾವಿರಾರು ರೂ ಖರ್ಚು ಬರುತ್ತದೆ ಇದಕ್ಕೆ ಯಾರು ಹೊಣೆಗಾರರು ಎಂದು ಪ್ರಶ್ನೆ...? ನಮ್ಮ ಕಾಲುವೆಗೆ 174 ರಷ್ಟು ಗೇಜ್ ನೀರು ಬರಬೇಕು. ಅಷ್ಟು ಬಂದರೆ ಸಾಕು. ಆದರೆ ನೀರಾವರಿ ಇಲಾಖೆ ಅಧಿಕಾರಿ ಇಇ ಸತ್ಯನಾರಾಯಣ ಶೆಟ್ಟಿ ಅವರು ಮೇಲ್ಭಾಗದ ರೈತರಿಗೆ ಹೊಂದಾಣಿಕೆ ಮಾಡಿಕೊಂಡು ಕೆಳಭಾಗದ ಕಾಲುವೆಗೆ ಗೇಜ್ ಕಡಿಮೆ ಮಾಡಿ ನೀರು ಹರಿಸುತ್ತಾರೆ. ಇದಕ್ಕೆಲ್ಲಾ ಅಧಿಕಾರಿಗಳ ನಿರ್ಲಕ್ಷ್ಯವೇ ಕಾರಣ . ಮುಂದಿನ ದಿನಗಳಲ್ಲಿ ನಮ್ಮ ಕಾಲುವೆಗೆ ನೀರು ಬಾರದಿದ್ದರೆ ಎಲ್ಲಾ ರೈತರೊಂದಿಗೆ ನೀರಾವರಿ ಇಲಾಖೆಯ ಮುಂದೆ ಹೋರಾಟವನ್ನು ಹಮ್ಮಿಕೊಳ್ಳಲಾಗುತ್ತದೆ ಎಂದು ಹೊಸಳ್ಳಿ ಕ್ಯಾಂಪ್ ರೈತರಾದ ವಿರೂಪಾಕ್ಷ ಗೌಡ ಎಚ್ಚರಿಕೆ ಮೂಲಕ ಆಗ್ರಹಿಸಿದರು.

**ರೈತರ ಸಂಕಷ್ಟ ಗೊತ್ತಾಗುತ್ತದೆ ಅಥವಾ ಇಲ್ಲವೋ**


ಉದಯವಾಹಿನಿ ಚಿತ್ರ

**ತಾಲ್ಲೂಕು ಭತ್ತದ ನಾಡು**

**ಸಿಂಧನೂರು ತಾಲ್ಲೂಕ ದೊಡ್ಡ ವಾಣಿಜ್ಯೋದ್ಯಮಿ ನಗರವನ್ನಾಗಿ ಬೆಳೆಯುತ್ತದೆ ಎಂದರೆ ಅದಕ್ಕೆ ಕಾರಣ ಇಲ್ಲಿನ ರೈತರು ಅಧಿಕ ಸಂಖ್ಯೆಯಲ್ಲಿ ಭತ್ತವನ್ನು ಬೆಳೆಯುವುದರಿಂದ ಸಿಂಧನೂರು ತಾಲ್ಲೂಕ ಭತ್ತದ ನಾಡು ಎಂದು ಹೆಸರಾಗಿದ್ದು. ಆದರೆ ಅಧಿಕಾರಿಗಳು ನಿರ್ಲಕ್ಷ್ಯ ಧೋರಣೆ ಮೂಲಕ ಹೊಸಳ್ಳಿ ಇಜೆ. ಕ್ಯಾಂಪ್ ನ ಕಾಲುವೆಗೆ 174 % ರಷ್ಟು ಗೇಜ್ ನೀರನ್ನು ಹರಿಸಬೇಕು. ಅದನ್ನು ಬಿಟ್ಟು ಮೇಲ್ಭಾಗದ ದೊಡ್ಡ ದೊಡ್ಡ ರೈತರೊಂದಿಗೆ ಶಾಮೀಲಾಗಿ 150% ನೀರು ಹರಿಸಲಾಗುತ್ತದೆ. ಹಾಗಾಗಿ ಕಾಲುವೆಗೆ ಸರಿಯಾಗಿ ನೀರು ಬರುತ್ತಿಲ್ಲ ಎಂದು ರೈತರು ಆಗ್ರಹಿಸಿದ್ದಾರೆ.**

**ರೈತರ ಸಮಸ್ಯೆಗಳಿಗೆ ಬಾರದ ಜನಪ್ರತಿನಿಧಿಗಳು**

**ಜನಪ್ರತಿನಿಧಿಗಳು ರೈತರು ಬಗ್ಗೆ ಗಮನ ಹರಿಸುತ್ತಿಲ್ಲ ದೊಡ್ಡ ದೊಡ್ಡ ಕಾರ್ಯಕ್ರಮದಲ್ಲಿ ರೈತರು ದೇಶದ ಬೆನ್ನೆಲುಬು ಎಂದು ದೊಡ್ಡದಾಗಿ ಭಾಷಣ ಬಿಗಿಯುತ್ತಾರೆ. ರೈತರು ಸಮಸ್ಯೆಗಳಿಗೆ ಯಾರು ಸಹ ಸ್ಪಂದನ ಮಾಡದ ರಾಜಕಾರಣಿಗಳು. ಈಗಲಾದರೂ ಜನಪ್ರತಿನಿಧಿಗಳು ಹಾಗೂ ನೀರಾವರಿ ಇಲಾಖೆ ಅಧಿಕಾರಿಗಳು ಎಚ್ಚೆತ್ತುಕೊಂಡು ಹೊಸಳ್ಳಿ ಇ ಜೆ ವ್ಯಾಪ್ತಿಗೆ ಬರುವ 36/1ನೇ ಕಾಲುವಗೆ ಭಾಗಕ್ಕೆ 174 ರಷ್ಟು ಗೇಜ್ ನೀರು ಹರಿಸುತ್ತಾರೂ ಅಥವಾ ಇಲ್ಲವೋ ಕಾದು ನೋಡಬೇಕಿದೆ.**

ಉದಯ ವಾಹಿನಿ

ದೇಶ/ವಿದೇಶ

ಶುಕ್ರವಾರ 29 ಜೂನ್ 2025



## ಗಾಜಾದಲ್ಲಿ ಮಾನವ ನಿರ್ಮಿತ ಬಿಕ್ಕಟ್ಟಿನಿಂದ ಆಹಾರ ಕ್ಷಾಮ: UNSC ಸದಸ್ಯ ರಾಷ್ಟ್ರಗಳು

**ವಿಶ್ವಸಂಸ್ಥೆ:** ಅಮೆರಿಕ ಹೊರತುಪಡಿಸಿ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಉಳಿದೆಲ್ಲ ಸದಸ್ಯ ರಾಷ್ಟ್ರಗಳು ಗಾಜಾದಲ್ಲಿ ತಲೆದೋರಿರುವ ಹಾಹಾಕಾರವು ಮಾನವ ನಿರ್ಮಿತ ಬಿಕ್ಕಟ್ಟು' ಎಂದು ಪ್ರತಿಪಾದಿಸಿವೆ. ಹಾಗೆಯೇ, ಹಸಿವನ್ನು ಯುದ್ಧದ ಅಸ್ತ್ರವನ್ನಾಗಿ ಬಳಸಿಕೊಳ್ಳುವುದು ಅಂತರರಾಷ್ಟ್ರೀಯ ಮಾನವೀಯ ಕಾನೂನಿನ ಅಡಿಯಲ್ಲಿ ನಿಷಿದ್ಧ ಎಂದು ಎಚ್ಚರಿಸಿವೆ.

**ಕಾನೂನಿನ ಅಡಿಯಲ್ಲಿ ನಿಷಿದ್ಧ**

15 ಸದಸ್ಯ ರಾಷ್ಟ್ರಗಳ ಪೈಕಿ ಅಮೆರಿಕ ಹೊರತುಪಡಿಸಿ ಉಳಿದೆಲ್ಲ ದೇಶಗಳು ಜಂಟಿ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿದ್ದು, 'ಬೇಷರತ್, ಶಾಶ್ವತ ಕದನ ವಿರಾಮ ಘೋಷಿಸಬೇಕು. ಹಮಾಸ್ ಮತ್ತು ಇತರ ಗುಂಪುಗಳ ವಶದಲ್ಲಿರುವ ಒತ್ತೆಯಾಳುಗಳನ್ನು ಕೂಡಲೇ ಬಿಡುಗಡೆ ಮಾಡಬೇಕು. ಗಾಜಾದಾದ್ಯಂತ ಸಹಾಯದ ಹಸ್ತ ಚಾಚಬೇಕು. ಗಾಜಾಗೆ ನೆರವು ವಿತರಣೆ ಮೇಲೆ ಇಸ್ರೇಲ್ ಹೇರಿರುವ ಎಲ್ಲಾ ನಿರ್ಬಂಧಗಳನ್ನು ಕೂಡಲೇ ತೆಗೆದುಹಾಕಬೇಕು' ಎಂದು ಕರೆ ನೀಡಿವೆ. 'ಗಾಜಾದಲ್ಲಿನ ಆಹಾರ ಕ್ಷಾಮ ಕೂಡಲೇ ನಿಲ್ಲಬೇಕು. ಮಾನವೀಯ ತುರ್ತು ಪರಿಸ್ಥಿತಿಯನ್ನು ತಡಮಾಡದೆ ತೊಡೆದುಹಾಕಬೇಕು. ಇಸ್ರೇಲ್ ತನ್ನ ಹಾದಿಯನ್ನು ಬದಲಿಸಿಕೊಳ್ಳಬೇಕಾಗಿದೆ' ಎಂದು ಒತ್ತಾಯಿಸಿವೆ.

ಗಾಜಾ ಹಾಗೂ ಸುತ್ತಲಿನ ಪ್ರದೇಶದಲ್ಲಿ ತೀವ್ರ ಆಹಾರ ಬಿಕ್ಕಟ್ಟು ಉಂಟಾಗಿದೆ. ಅದು ಇತರ ಪ್ರದೇಶಗಳಿಗೂ ವ್ಯಾಪಿಸುವ ಸಾಧ್ಯತೆ ಇದೆ ಎಂದು ಜಾಗತಿಕ ಹಸಿವು ಮೇಲ್ವಿಚಾರಣಾ ಸಂಸ್ಥೆ ಕಳವಳ ವ್ಯಕ್ತಪಡಿಸಿದೆ. ಗಾಜಾದಲ್ಲಿರುವ ನಾಲ್ಕನೇ ಒಂದರಷ್ಟು ಪ್ಯಾಲೆಸ್ಟೀನಿಯನ್ನರು




(ಸುಮಾರು 5.14 ಲಕ್ಷ ಜನರು) ತೀವ್ರ ಕ್ಷಾಮ ಅನುಭವಿಸುತ್ತಿದ್ದಾರೆ. ಅದು, ಸೆಪ್ಟೆಂಬರ್ ಅಂತ್ಯದ ಹೊತ್ತಿಗೆ 6.41 ಲಕ್ಷಕ್ಕೆ ಏರಿಕೆಯಾಗಲಿದೆ ಎಂದು 'ಸಮಗ್ರ ಆಹಾರ ಭದ್ರತಾ ಹಂತಗಳ ವರ್ಗೀಕರಣ' ಅಂದಾಜಿಸಿದೆ. ಐಪಿಸಿ ವರದಿಯನ್ನು ಇಸ್ರೇಲ್ ಅಲ್ಲಗಳೆದಿದೆ. ಗಾಜಾ ನೀಡಿದ ದತ್ತಾಂಶಗಳನ್ನು ಆಧರಿಸಿ ವಿಶ್ಲೇಷಣೆ ಮಾಡಲಾಗಿದೆ. ಇದು ಸುಳ್ಳು ಮತ್ತು ಪಕ್ಷಪಾತದಿಂದ ಕೂಡಿದ ವರದಿಯಾಗಿದ್ದು, ಗಾಜಾಗೆ ಇತ್ತೀಚೆಗೆ ಆಹಾರ ಪೂರೈಕೆಯಾಗಿರುವುದನ್ನು ಗಣನೆಗೆ ತೆಗೆದುಕೊಂಡಿಲ್ಲ ಎಂದು ಆರೋಪಿಸಿದೆ.

ವಿಶ್ವಸಂಸ್ಥೆಯಲ್ಲಿ ಅಮೆರಿಕದ ಹಂಗಾಮಿ ರಾಯಭಾರಿಯಾಗಿರುವ ಡೊರೊಥಿ ಶಿಯಾ ಅವರು, ಐಪಿಸಿ ವರದಿಯ ವಿಶ್ವಾಸಾರ್ಹತೆಯನ್ನೇ ಪ್ರಶ್ನಿಸಿದ್ದಾರೆ. 'ಗಾಜಾದಲ್ಲಿ ಹಸಿವು ನಿಜವಾದ ಸಮಸ್ಯೆಯಾಗಿದೆ ಮತ್ತು ಮಾನವೀಯ ನೆರವು ಪೂರೈಕೆಯಾಗಬೇಕಿದೆ ಎಂಬುದನ್ನು ನಾವೆಲ್ಲ ಒಪ್ಪುತ್ತೇವೆ. ಸಮಸ್ಯೆಗಳನ್ನು ಪರಿಹರಿಸುವುದು ಅಮೆರಿಕದ ಆದ್ಯ ವಿಚಾರವಾಗಿದೆ' ಎಂದು ಸ್ಪಷ್ಟಪಡಿಸಿದ್ದಾರೆ.

### ● ಉಕ್ರೇನ್ ಯುದ್ಧ ನಿಲ್ಲಿಸಲು ಆಗದ ಅಮೆರಿಕ ತನ್ನ ವೈಫಲ್ಯವನ್ನು ಭಾರತದ ಮೇಲೆ ಹಾಕುತ್ತಿದೆ

# ಉಕ್ರೇನ್ ಯುದ್ಧವನ್ನು ಮೋದಿ ವಾರ್ ಎಂದ ಟ್ರಂಪ್ ಆಪ್ತಸಹಾಯಕ

**ವಾಷಿಂಗ್ಟನ್ ಡಿಸಿ:** ಕೈಲಾಗದವ ಮೈಪರಚಿಕೊಂಡನಂತೆ ಈ ನಾಣ್ಣುಡಿ ಸದ್ಯ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತಕ್ಕೆ ಸರಿಯಾಗಿ ಹೊಂದುತ್ತದೆ. ರಷ್ಯಾ-ಉಕ್ರೇನ್ ಯುದ್ಧ ನಿಲ್ಲಿಸುವಲ್ಲಿ ವಿಫಲವಾಗಿರುವ ಟ್ರಂಪ್ ಆಡಳಿತ, ಈ ವೈಫಲ್ಯವನ್ನು ಭಾರತ ಮತ್ತು ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಮೇಲೆ ಹಾಕುವ ಹುನ್ನಾರ ನಡೆಸಿದೆ.

ಹೌದು, ಅಧಿಕಾರಕ್ಕೆ ಬಂದ ಒಂದು ವಾರದಲ್ಲಿ ಉಕ್ರೇನ್ ಯುದ್ಧ ನಿಲ್ಲಿಸುವುದಾಗಿ ಬಿಲ್ಡಪ್ ಕೊಟ್ಟಿದ್ದ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಅಧಿಕಾರಕ್ಕೆ ಬಂದು ಎಂಟು ತಿಂಗಳಾದರೂ ಯುದ್ಧ ನಿಲ್ಲಿಸುವುದಿರಲಿ ಅದರ ತೀವ್ರತೆಯನ್ನೂ ಕಡಿಮೆ ಮಾಡಿಲ್ಲ. ಉಕ್ರೇನ್ ಯುದ್ಧ ಕೊನೆಗಾಣಿಸುವ ಉದ್ದೇಶದಿಂದ ನಡೆದ ಟ್ರಂಪ್-ಪುಟಿನ್ ಅಲಾಸ್ಕಾ ಮಾತುಕತೆ ವಿಫಲ ಆಗಿದೆ. ಇದು ಟ್ರಂಪ್ ಆಡಳಿತಕ್ಕೆ ತೀವ್ರ ಮುಜುಗರ ತಂದಿದ್ದು, ತನ್ನ ವೈಫಲ್ಯವನ್ನು ಮರೆಮಾಚಲು ಭಾರತದತ್ತ ಅನಗತ್ಯವಾಗಿ ಬೊಟ್ಟು ಮಾಡುತ್ತಿದೆ.

ಇದಕ್ಕೆ ಉದಾಹರಣೆಯಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ವ್ಯಾಪಾರ ಸಲಹೆಗಾರ ಪೀಟರ್ ನವರೊ, ಉಕ್ರೇನ್ ಯುದ್ಧವನ್ನು ಮೋದಿ ವಾರ್ ಎಂದು ಕರೆಯುವ ಮೂಲಕ ದರ್ಪ ಮೆರೆದಿದ್ದಾರೆ. ರಷ್ಯಾದಿಂದ ಕಚ್ಚಾತೈಲ ಖರೀದಿಸುವ ಭಾರತ, ಉಕ್ರೇನ್ ಯುದ್ಧಕ್ಕೆ ಪರೋಕ್ಷವಾಗಿ ಧನಸಹಾಯ ಮಾಡುತ್ತಿದೆ ಎಂಬ ಡೊನಾಲ್ಡ್ ಟ್ರಂಪ್ ಅವರ ಹೇಳಿಕೆಯನ್ನೇ, ಪೀಟರ್ ನವರೊ ಬೇರೆ ರೀತಿಯಲ್ಲಿ ಪ್ರಸ್ತುಪಡಿಸಿದ್ದಾರೆ.

ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಓರ್ವ ಶ್ರೇಷ್ಠ ನಾಯಕ. ಆದಾಗ್ಯೂ, ನಾನು ಉಕ್ರೇನ್ ಯುದ್ಧವನ್ನು ಮೋದಿ ವಾರ್ ಎಂದು ಕರೆಯಲು ಬಯಸುತ್ತೇನೆ. ಏಕೆಂದರೆ ಭಾರತವು ರಷ್ಯಾದಿಂದ ಕಚ್ಚಾತೈಲವನ್ನು ಅಗ್ಗದ ದರದಲ್ಲಿ ಖರೀದಿಸುವ ಮೂಲಕ, ರಷ್ಯಾ ನಿರಂತರವಾಗಿ ಉಕ್ರೇನ್ ಮೇಲೆ ದಾಳಿ ಮಾಡಲು ಕಾರಣರಾಗಿದ್ದಾರೆ. ಹೀಗಾಗಿ ಭಾರತ ಮತ್ತು ರಷ್ಯಾ, ಎರಡೂ ದೇಶಗಳ ಮೇಲೆ ಒತ್ತಡ ಹೇರಲು, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಭಾರತದ ಸರಕುಗಳ ಮೇಲೆ ಶೇ. 50ರಷ್ಟು ಸುಂಕ ಹೇರಿದ್ದಾರೆ ಎಂದು ಪೀಟರ್ ನವರೊ ಪ್ರತಿಪಾದಿಸಿದ್ದಾರೆ.

ಬ್ಲೂಮ್‌ಬರ್ಗ್‌ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿರುವ ಶ್ವೇತಭವನದ ವ್ಯಾಪಾರ ಸಲಹೆಗಾರ, ನಾನು ಉಕ್ರೇನ್ ಯುದ್ಧವನ್ನು ಮೋದಿ ವಾರ್ ಎಂದು ಕರೆಯಲು ಕಾರಣವೇನೆಂದರೆ, ಉಕ್ರೇನ್ ಶಾಂತಿಯ ಹಾದಿ ಭಾಗಶಃ ನವದೆಹಲಿಯ ಮೂಲಕ ಹಾದುಹೋಗುತ್ತದೆ ಎಂದು ಹೇಳಿದ್ದಾರೆ.



- ರಷ್ಯಾ-ಉಕ್ರೇನ್ ನಡುವೆ ಕದನ ವಿರಾಮ ಒಪ್ಪಂದ ಜಾರಿಗೊಳಿಸುವಲ್ಲಿ ವಿಫಲವಾದ ಅಮೆರಿಕ.
- ಉಕ್ರೇನ್ ಯುದ್ಧ ನಿಲ್ಲಿಸಲು ಆಗದ ಅಮೆರಿಕ ತನ್ನ ವೈಫಲ್ಯವನ್ನು ಭಾರತದ ಮೇಲೆ ಹಾಕುತ್ತಿದೆ.
- ಉಕ್ರೇನ್ ಯುದ್ಧವನ್ನು ಮೋದಿ ವಾರ್ ಎಂದು ಕರೆದ ಡೊನಾಲ್ಡ್ ಟ್ರಂಪ್ ಸಲಹೆಗಾರ ಪೀಟರ್ ನವ್ರೊರೊ.

**ನವರೋ ಪಾಂಡಿತ್ಯ**

**ನವದೆಹಲಿಯು ರಷ್ಯಾದ ಇಂಧನವನ್ನು ನಿರಂತರವಾಗಿ ಖರೀದಿಸುತ್ತಿರುವುದು, ಉಕ್ರೇನ್ ಮೇಲಿನ ಮಾಸ್ಕೋದ ಮಿಲಿಟರಿ ಆಕ್ರಮಣಕ್ಕೆ ಕಾರಣ. ಒಂದು ವೇಳೆ ಭಾರತವು ರಷ್ಯಾದಿಂದ ಕಚ್ಚಾತೈಲ ಖರೀದಿಯನ್ನು ನಿಲ್ಲಿಸಿದರೆ, ಮರುದಿನವೇ ಡೊನಾಲ್ಡ್ ಟ್ರಂಪ್ ಅವರು ಶೇ. 25ರಷ್ಟು ದಂಡದ ಸುಂಕವನ್ನು ವಾಪಸ್ ಪಡೆಯಲಿದ್ದಾರೆ. ನಾವು ಭಾರತದ ಮೇಲೆ ಹೆಚ್ಚುವರಿ ಸುಂಕಗಳನ್ನು ವಿಧಿಸಿರುವುದೇ ರಷ್ಯಾ ಮೇಲೆ ಒತ್ತಡ ಹೇರಲು ಎಂದು ಪೀಟರ್ ನವರೊ ತಮ್ಮದೇ ಆದ ವಾದವನ್ನು ಮಂಡಿಸಿದ್ದಾರೆ.**

**ಮೋದಿ ವಾರ್ ನಿಜಾನಾ?**

**ರಷ್ಯಾ-ಉಕ್ರೇನ್ ಯುದ್ಧ ಆರಂಭವಾದ ದಿನದಿಂದ, ಭಾರತ ಯುದ್ಧ ಕೊನೆಗೊಳಿಸುವಂತೆ ಉಭಯ ದೇಶಗಳಲ್ಲಿ ಮನವಿ ಮಾಡಿಕೊಳ್ಳುತ್ತಲೇ ಬಂದಿದೆ. ರಷ್ಯಾ ಅಧ್ಯಕ್ಷ ಪುಟಿನ್ ಅವರಿಗೆ ಪ್ರಧಾನಿ ಮೋದಿ ಇದು ಯುದ್ಧದ ಸಮಯವಲ್ಲ ಎಂಬ ಸಲಹೆಯನ್ನು ಇಡೀ ಜಗತ್ತೇ ಕೊಂಡಾಡಿತ್ತು. ಈಗಲೂ ರಷ್ಯಾ-ಉಕ್ರೇನ್ ಯುದ್ಧ ನಿಲ್ಲಿಸಲು ಭಾರತ ಪ್ರಯತ್ನ ಮಾಡುತ್ತಿದೆ.**

**ಚೀನಾ ವಿರುದ್ಧ ಸೊಲ್ಲೆತ್ತದ ಅಮೆರಿಕ:** ರಷ್ಯಾದಿಂದ ಕಚ್ಚಾತೈಲ ಖರೀದಿಸುತ್ತಿರುವ ಭಾರತದ ಮೇಲೆ ಕೋಪ-ತಾಪ ಪ್ರದರ್ಶಿಸುತ್ತಿರುವ ಅಮೆರಿಕ, ಅದೇ ರಷ್ಯಾದಿಂದ ಭಾರತಕ್ಕಿಂತಲೂ ಹೆಚ್ಚಿನ ಪ್ರಮಾಣದಲ್ಲಿ ಕಚ್ಚಾತೈಲ ಖರೀದಿಸುತ್ತಿರುವ ಚೀನಾದ ಮೇಲೆ ಹೆಚ್ಚುವರಿಕ ಸುಂಕ ಹೇರಿಕೆ ಮಾಡುತ್ತಿಲ್ಲ. ಅಮೆರಿಕದ ದರ್ಪದ ಮಾತುಗಳೇನಿದ್ದರೂ ಭಾರತವನ್ನು ಗುರಿಯಾಗಿಸಿಕೊಂಡಿದೆಯೇ ಹೊರತು, ಚೀನಾ ವಿರುದ್ಧ ಕ್ರಮ ಕೈಗೊಳ್ಳಲು ಅದಕ್ಕೆ ಧೈರ್ಯ ಇಲ್ಲ. ಅಷ್ಟಕ್ಕೂ ಅಮೆರಿಕ ಏಕೆ ಚೀನಾ ವಿರುದ್ಧ ಕ್ರಮ ಕೈಗೊಳ್ಳುತ್ತಿಲ್ಲ ಎಂಬುದಕ್ಕೆ ಕಾರಣವೂ ಸ್ಪಷ್ಟವಾಗಿದೆ. ರಷ್ಯಾದಿಂದ ಕಚ್ಚಾತೈಲ ಖರೀದಿಸುವ ಚೀನಾ, ಅದನ್ನು ತನ್ನ ಸಂಗ್ರಹಾರಗಳಲ್ಲಿ ಸಂಸ್ಕರಿಸಿ ಜಾಗತಿಕ ಮಾರುಕಟ್ಟೆಯಲ್ಲಿ ಮಾರಾಟ ಮಾಡುತ್ತಿದೆ. ಈ ತೈಲವನ್ನು ರಷ್ಯಾದೊಂದಿಗೆ ವ್ಯಾಪಾರ ಸಂಬಂಧ ಕಡಿದುಕೊಂಡಿರುವ ಯುರೋಪ್ ರಾಷ್ಟ್ರಗಳೂ ಖರೀದಿಸುತ್ತಿವೆ. ಒಂದು ವೇಳೆ ಚೀನಾದ ಮೇಲೆ ಹೆಚ್ಚುವರಿ ಸುಂಕಗಳನ್ನು ವಿಧಿಸಿದರೆ, ಚೀನಾ ಜಾಗತಿಕ ಮಾರುಕಟ್ಟೆಯಲ್ಲಿ ತೈಲ ಬೆಲೆಯನ್ನು ಹೆಚ್ಚಿಸುತ್ತದೆ. ಇದು ನೇರವಾಗಿ ಯುರೋಪ್ ರಾಷ್ಟ್ರಗಳ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತದೆ. ಹೀಗಾಗಿ ಚೀನಾದ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಲು ಅಮೆರಿಕ ಹಿಂದೇಟು ಹಾಕುತ್ತಿದೆ. ಭಾರತವು ರಷ್ಯಾದಿಂದ ಅಗ್ಗದ ದರದಲ್ಲಿ ಕಚ್ಚಾತೈಳ ಖರೀದಿಸುತ್ತಿರುವುದ ನಿಜ. ಏಕೆಂದರೆ ಅದಕ್ಕೆ ತನ್ನ 1.4 ಬಿಲಿಯನ್ ಜನರ ತೈಲ ಅಗತ್ಯತೆಯನ್ನು ಪೂರೈಸಬೇಕಾದ ಅನಿವಾರ್ಯತೆ ಇದೆ. ಆದರೆ ಇದು ಉಕ್ರೇನ್ ಯುದ್ಧಕ್ಕೆ ನೆರವಾಗಲಿ ಎಂಬ ಉದ್ದೇಶ ಖಂಡಿತವಾಗಿಯೂ ಭಾರತಕ್ಕಿಲ್ಲ. ಅಮೆರಿಕ ಈ ಸತ್ಯವನ್ನು ಆದಷ್ಟು ಬೇಗ ಅರ್ಥ ಮಾಡಿಕೊಂಡಷ್ಟೂ ಒಳ್ಳೆಯದು.

## ಹೆಚ್1ಬಿ ವೀಸಾ ವ್ಯವಸ್ಥೆ ಬದಲಾವಣೆಗೆ ಮುಂದಾದ ಟ್ರಂಪ್




**ಹೆಚ್1ಬಿ ವೀಸಾಗಳ ಪ್ರಮುಖ ಫಲಾನುಭವಿಗಳು ಭಾರತೀಯರು, ಇದು ಪ್ರಪಂಚದಾದ್ಯಂತದ ಅತ್ಯುತ್ತಮ ಪ್ರತಿಭೆ ಮತ್ತು ಮಿದುಳುಗಳನ್ನು ತರುತ್ತದೆ. ಭಾರತದ ಉನ್ನತ ಕೌಶಲ್ಯ ಹೊಂದಿರುವ ವೃತ್ತಿಪರರು ಅಗಾಧ ಸಂಖ್ಯೆಯ ಹೆಚ್1ಬಿ ವೀಸಾಗಳೊಂದಿಗೆ ಹೊರಡುತ್ತಾರೆ. ಪ್ರಸ್ತುತ ವೀಸಾ ವ್ಯವಸ್ಥೆಯು ವಿದೇಶಿ ಕಾರ್ಮಿಕರಿಗೆ ಅಮೆರಿಕದ ಉದ್ಯೋಗಾವಕಾಶಗಳನ್ನು ತುಂಬಲು ಅನುವು ಮಾಡಿಕೊಡುವ ಒಂದು ಹಗರಣವಾಗಿದೆ. ಅಮೇರಿಕನ್ ಕಾರ್ಮಿಕರನ್ನು ನೇಮಿಸಿಕೊಳ್ಳುವುದು ಎಲ್ಲಾ ದೊಡ್ಡ ಅಮೇರಿಕನ್ ವ್ಯವಹಾರಗಳ ಆದ್ಯತೆಯಾಗಿರಬೇಕು. ಈಗ ಅಮೆರಿಕನ್ನರನ್ನು ನೇಮಿಸಿಕೊಳ್ಳುವ ಸಮಯ ಬಂದಿದೆ ಎಂದು ಹೇಳಿದರು.**

**ಅಮೇರಿಕನ್ ಕಾರ್ಮಿಕರಿಗೆ ಆದ್ಯತೆ**

**ನ್ಯೂಯಾರ್ಕ್:** ಭಾರತೀಯ ಐಟಿ ವೃತ್ತಿಪರರಲ್ಲಿ ಅತ್ಯಂತ ಬೇಡಿಕೆಯಿರುವ ವಲಸೆಯೇತರ ವೀಸಾ ಹೆಚ್1ಬಿ ಕಾರ್ಯಕ್ರಮವನ್ನು ಬದಲಾಯಿಸಲು ಟ್ರಂಪ್ ಆಡಳಿತ ಯೋಜಿಸುತ್ತಿದೆ ಮತ್ತು ಗ್ರೀನ್ ಕಾರ್ಡ್ ಪ್ರಕ್ರಿಯೆಯಲ್ಲಿ ಬದಲಾವಣೆಗಳನ್ನು ತರಲು ಯೋಜಿಸುತ್ತಿದೆ ಎಂದು ಅಮೆರಿಕದ ವಾಣಿಜ್ಯ ಕಾರ್ಯದರ್ಶಿ ಹೊವಾರ್ಡ್ ಲುಟ್ನಿಕ್ ಹೇಳಿದ್ದಾರೆ.


ನಾನು ಹೆಚ್1ಬಿ ಕಾರ್ಯಕ್ರಮವನ್ನು ಬದಲಾಯಿಸುವಲ್ಲಿ ಭಾಗಿಯಾಗಿದ್ದೇನೆ. ನಾವು ಆ ಕಾರ್ಯಕ್ರಮವನ್ನು ಬದಲಾಯಿಸಲಿದ್ದೇವೆ, ಏಕೆಂದರೆ ಅದು ಭಯಾನಕವಾಗಿದೆ ಎಂದು ಲುಟ್ನಿಕ್ ನೀಡಿದ ಸಂದರ್ಶನದಲ್ಲಿ ಹೇಳಿದರು.

ಅಮೆರಿಕದಲ್ಲಿ ಶಾಶ್ವತ ನಿವಾಸವನ್ನು ಒದಗಿಸುವ ಗ್ರೀನ್ ಕಾರ್ಡ್ ಪ್ರಕ್ರಿಯೆಯನ್ನು ಸಹ ಟ್ರಂಪ್ ಆಡಳಿತ ಬದಲಾಯಿಸಲಿದೆ ಎಂದು ಅವರು ಹೇಳಿದರು. ನಿಮಗೆ ಗೊತ್ತಾ, ನಾವು ಗ್ರೀನ್ ಕಾರ್ಡ್‌ಗಳನ್ನು ನೀಡುತ್ತೇವೆ. ಸರಾಸರಿ ಅಮೆರಿಕನ್ನರು ವರ್ಷಕ್ಕೆ 75,000 ಗಳಿಸುತ್ತಾರೆ ಮತ್ತು ಸರಾಸರಿ ಗ್ರೀನ್ ಕಾರ್ಡ್ ಸ್ವೀಕರಿಸುವವರು 66,000 ಗಳಿಸುತ್ತಾರೆ, ಆದ್ದರಿಂದ ನಾವು ಕೆಳಮಟ್ಟದ ಕ್ವಾರ್ಟೈಲ್ ಅನ್ನು ತೆಗೆದುಕೊಳ್ಳುತ್ತಿದ್ದೇವೆ, ಉದಾಹರಣೆಗೆ, ನಾವು ಅದನ್ನು ಏಕೆ ಮಾಡುತ್ತಿದ್ದೇವೆ? ಅದಕ್ಕಾಗಿಯೇ ಡೊನಾಲ್ಡ್ ಟ್ರಂಪ್ ಅದನ್ನು ಬದಲಾಯಿಸಲಿದ್ದಾರೆ. ಅದು ಬರುತ್ತಿರುವ ಗೋಲ್ಡ್ ಕಾರ್ಡ್. ಮತ್ತು ನಾವು ಈ ದೇಶಕ್ಕೆ ಬರಲು ಉತ್ತಮ ಜನರನ್ನು ಆಯ್ಕೆ ಮಾಡಲು ಪ್ರಾರಂಭಿಸಲಿದ್ದೇವೆ. ಅದು ಬದಲಾಗುವ ಸಮಯ ಬಂದಿದೆ ಎಂದು ಅವರು ಹೇಳಿದರು.

## ಡಿ.2026ರ ವೇಳೆಗೆ ಸಿದ್ಧವಾಗಲಿದೆ ಕುಲಶೇಖರಪಟ್ಟಣಂ ಉಡಾವಣಾ ಸಂಕೀರ್ಣ: ಇಸ್ರೋ ಮುಖ್ಯಸ್ಥರು

**ಕುಲಶೇಖರಪಟ್ಟಣಂ:** ತಮಿಳುನಾಡಿನ ಟುಟಿಕೋರಿನ್ ಜಿಲ್ಲೆಯಲ್ಲಿ ದೇಶದ ಎರಡನೇ ಉಡಾವಣಾ ಸಂಕೀರ್ಣದ ನಿರ್ಮಾಣವು ಮುಂದಿನ 2026 ಡಿಸಂಬರ್ ವೇಳೆಗೆ ಪೂರ್ಣಗೊಳ್ಳುವ ನಿರೀಕ್ಷೆಯಿದೆ ಎಂದು ಇಸ್ರೋ ಅಧ್ಯಕ್ಷ ವಿ ನಾರಾಯಣನ್ ಹೇಳಿದ್ದಾರೆ.

ಇದರಿಂದ ಬಾಹ್ಯಾಕಾಶ ನಿಲ್ದಾಣದಿಂದ ವರ್ಷಕ್ಕೆ ಸುಮಾರು 25 ರಾಕೆಟ್‌ಗಳ ಉಪಗ್ರಹ ಉಡಾವಣೆ ಸಾಧ್ಯವಾಗಲಿದೆ ಎಂದು ಅವರು ತಿಳಿಸಿದ್ದಾರೆ. ಇಲ್ಲಿ ಉಡಾವಣಾ ವೇದಿಕೆಗೆ ಭೂಮಿ ಪೂಜೆಯಲ್ಲಿ ಭಾಗವಹಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 400 ಕಿ.ಮೀ ಎತ್ತರಕ್ಕೆ 500 ಕೆಜಿ ಪೇಲೋಡ್ ಅನ್ನು ಸಾಗಿಸಬಲ್ಲ ಸಣ್ಣ ಉಪಗ್ರಹ ಉಡಾವಣಾ ವಾಹನ (ಎಸ್‌ಎಸ್‌ಎಲ್‌ವಿ) ಬಳಸಿ ಉಪಗ್ರಹಗಳ ಉಡಾವಣೆಯನ್ನು ಇಲ್ಲಿಂದ ಕೈಗೆತ್ತಿಕೊಳ್ಳಲಾಗುವುದು ಎಂದು ಹೇಳಿದರು. ಈ ಸಂಕೀರ್ಣವು 2300 ಎಕರೆ ಭೂಮಿಯಲ್ಲಿ ನಿರ್ಮಾಣವಾಗುತ್ತಿದ್ದು, ಆಂಧ್ರಪ್ರದೇಶದ ಶ್ರೀಹರಿಕೋಟಾದಲ್ಲಿ ಎರಡನೇ ಅಂತಹ ಸೌಲಭ್ಯವಾಗಲಿದೆ. ಡಿಸೆಂಬರ್ 2026 ರ ವೇಳೆಗೆ




ಎಲ್ಲಾ ಕೆಲಸಗಳು ಮುಗಿಯುತ್ತವೆ, ಅದು ನಮ ಗುರಿ. ಮುಂದಿನ ವರ್ಷದ ನಾಲ್ಕನೇ ತ್ರೈಮಾಸಿಕದ ವೇಳೆಗೆ ನಾವು ರಾಕೆಟ್ ಉಡಾವಣೆಯನ್ನು ಯೋಜಿಸುತ್ತಿದ್ದೇವೆ.

ಪ್ರಧಾನಿ ಮೋದಿ ಅವರು ಸೂಕ್ತ ಸಮಯದಲ್ಲಿ ಸರಿಯಾದ ಉಡಾವಣಾ ದಿನಾಂಕವನ್ನು ಘೋಷಿಸುತ್ತಾರೆ ಎಂದು ಅವರು ಹೇಳಿದರು. ವಾರ್ಷಿಕವಾಗಿ 20-25 ಉಪಗ್ರಹ ಉಡಾವಣೆಗಳು ನಡೆಯಲಿವೆ ಎಂದು ಅವರು ಹೇಳಿದರು. ಪ್ರಧಾನಿ ಮೋದಿ, ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ, ಕರಾವಳಿ ಗ್ರಾಮವಾದ ಕುಲಶೇಖರಪಟ್ಟಣಂನಲ್ಲಿ ಫೆ.2024 ರಲ್ಲಿ ಸಣ್ಣ ಉಪಗ್ರಹ ಉಡಾವಣಾ ವಾಹನ ಸಂಕೀರ್ಣಕ್ಕೆ ಅಡಿಪಾಯ ಹಾಕಿದರು.

## ಚೀನಾ ಸೇನಾ ಪರೇಡ್‌ಗೆ ಪುಟಿನ್, ಕಿಮ್

**ಬೀಜಿಂಗ್:** ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಹಾಗೂ ಉತ್ತರ ಕೊರಿಯಾ ನಾಯಕ ಕಿಮ್ ಜಾಂಗ್ ಉನ್ ಅವರು, ಪಾಶ್ಚಾತ್ಯ ರಾಷ್ಟ್ರಗಳ ಒತ್ತಡದ ನಡುವೆಯೂ ಬೀಜಿಂಗ್‌ನಲ್ಲಿ ನಡೆಯುವ ಚೀನಾ ಸೇನಾ ಮೆರವಣಿಗೆಯಲ್ಲಿ ಅಧ್ಯಕ್ಷ ಷಿ ಜಿನ್ ಪಿಂಗ್ ಅವರೊಂದಿಗೆ ಭಾಗವಹಿಸಲಿದ್ದಾರೆ. ಇದರೊಂದಿಗೆ ಈ ಇಬ್ಬರೂ ನಾಯಕರು ಸಾರ್ವಜನಿಕವಾಗಿ ಒಟ್ಟಾಗಿ ಕಾಣಿಸಿಕೊಳ್ಳಲು ಅಣಿಯಾಗಿದ್ದಾರೆ.

ಮುಂದಿನ ವಾರ ನಡೆಯುವ ಮೆರವಣಿಗೆಯಲ್ಲಿ ಯುರೋಪಿಯನ್ ಒಕ್ಕೂಟದ ಸೊವಾಕಿಯಾ ಪ್ರಧಾನಿ ರಾಬರ್ಟ್ ಫಿಕೊ ಸೇರಿದಂತೆ 26 ದೇಶಗಳ ನಾಯಕರು ಪಾಲ್ಗೊಳ್ಳಲಿದ್ದಾರೆ. ಫಿಕೊ ಅವರನ್ನು ಹೊರತುಪಡಿಸಿ, ಪಾಶ್ಚಾತ್ಯ ರಾಷ್ಟ್ರಗಳ ಯಾವೊಬ್ಬ ನಾಯಕನೂ ಭಾಗಿಯಾಗುವುದಿಲ್ಲ ಎಂದು ಚೀನಾ ವಿದೇಶಾಂಗ ಸಚಿವಾಲಯ ತಿಳಿಸಿದೆ. ಸೆ. 3ರಂದು ನಡೆಯಲಿರುವ ವಿಜಯ ದಿನ' ಮೆರವಣಿಗೆಯಲ್ಲಿ ಚೀನಾದ ಮಿಲಿಟರಿ ಶಕ್ತಿ ಅನಾವರಣಗೊಳ್ಳಲಿದೆ. ಅದಷ್ಟೇ ಅಲ್ಲದೆ, ಈ ಮೂವರು ನಾಯಕರು ಒಂದಾಗುವುದು ಜಾಗತಿಕ ನಿರ್ಬಂಧಗಳಿಂದ



ಬಳಲುತ್ತಿರುವ ರಷ್ಯಾ ಮತ್ತು ಉತ್ತರ ಕೊರಿಯಾಗೆ ಒಗ್ಗಟ್ಟು ಪ್ರದರ್ಶನದ ವೇದಿಕೆಯಾಗಲಿದೆ. ಚೀನಾ ತನ್ನ ಕಾರ್ಯತಂತ್ರದ ಪಾಲುದಾರ ಎಂದು ಪರಿಗಣಿಸಿರುವ ರಷ್ಯಾ, 2022ರಲ್ಲಿ ಉಕ್ರೇನ್ ಮೇಲೆ ಆಕ್ರಮಣ ಆರಂಭಿಸಿದಾಗಿನಿಂದ ಪಾಶ್ಚಾತ್ಯ ರಾಷ್ಟ್ರಗಳಿಂದ ಹಲವು ನಿರ್ಬಂಧಗಳನ್ನು ಎದುರಿಸುತ್ತಿದೆ.

ಆ ದೇಶದ ಆರ್ಥಿಕತೆಯು ಹಿಂಜರಿಕೆಯತ್ತ ಕುಸಿಯುವ ಅಪಾಯದಲ್ಲಿದೆ. ಹಾಗೆಯೇ, ಪುಟಿನ್ ಅವರು ಅಂತರರಾಷ್ಟ್ರೀಯ ಕ್ರಿಮಿನಲ್ ನ್ಯಾಯಾಲಯದ ವಾಂಟೆಡ್ ಲಿಸ್ಟ್‌ನಲ್ಲಿದ್ದಾರೆ.

## ವೈಷ್ಣೋದೇವಿ ದೇಗುಲದ ಬಳಿ ಭೂ ಕುಸಿತ : 41ಮಂದಿ ಸಾವು

**ಶ್ರೀನಗರ:** ಜಮ್ಮು ಮತ್ತು ಕಾಶೀರದಲ್ಲಿ ನಿರಂತರ ಮಳೆಯಿಂದಾಗಿ ಭೂಕುಸಿತ ಉಂಟಾಗಿ ಹಲವೆಡೆ ಭಾರೀ ಹಾನಿ ಸಂಭವಿಸಿದ್ದು, ಕನಿಷ್ಟಪಕ್ಷ 41 ಮಂದಿ ಸಾವನ್ನಪ್ಪಿ, 20 ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ. ಅವಶೇಷಗಳಡಿ ಮತ್ತಷ್ಟು ಜನ ಸಿಲುಕಿರುವ ಶಂಕೆಯಿದ್ದು, ರಕ್ಷಣಾ ಕಾರ್ಯ ಮುಂದುವರಿದೆ. ವೈಷ್ಣೋದೇವಿ ದೇಗುಲಕ್ಕೆ ಹೋಗುವ ಮಾರ್ಗದ ಅರ್ಧಕುವರಿಯಲ್ಲಿರುವ ಇಂದಪ್ರಸ್ಥ ಭೋಜನಾಲಯದ ಬಳಿ ಭೂ ಕುಸಿತ ಉಂಟಾಗಿದ್ದರೆ, ದೋಡಾ ಜಿಲ್ಲೆಯಲ್ಲಿ ಮೇಘಸ್ಫೋಟ ಸಂಭವಿಸಿ ನಾಲ್ವರು ಮೃತರಾಗಿದ್ದಾರೆ.

ಕೇಂದ್ರಾಡಳಿತ ಪ್ರದೇಶದ ಹೆಚ್ಚಿನ ಪ್ರದೇಶಗಳಲ್ಲಿ ಭಾರೀ ಮಳೆಯಾಗುತ್ತಿದ್ದು, ಹಲವಾರು ಸ್ಥಳಗಳಲ್ಲಿ ಪ್ರವಾಹ ಉಂಟಾಗಿದೆ. ಕತ್ರಾದ ವೈಷ್ಣೋದೇವಿ ದೇವಾಲಯದ ಬಳಿ ಭಾರೀ ಮಳೆಯಿಂದಾಗಿ ಉಂಟಾದ ಭೂಕುಸಿತದಲ್ಲಿ 41 ಜನರು ಪ್ರಾಣ ಕಳೆದುಕೊಂಡಿದ್ದಾರೆ. ಕನಿಷ್ಠ 20 ಜನರು ಗಾಯಗೊಂಡಿದ್ದಾರೆ. ಅವರೆಲ್ಲರನ್ನೂ ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗೆ ದಾಖಲಿಸಲಾಗಿದೆ.



ನೂರಾರು ಮನೆಗಳು, ಸೇತುವೆಗಳು, ನೀರಿನಲ್ಲಿ ಕೊಚ್ಚಿಹೋಗಿವೆ. ಎಲ್ಲಾ ಜಲಾಶಯಗಳು ತುಂಬಿ ತುಳುಕುತ್ತಿದ್ದು ನದಿಗಳಿಗೆ ನೀರು ಬಿಡಲಾಗಿದೆ.

ನದಿಪಾತ್ರಗಳು ಮುಳುಗಿದ್ದು ಜನಜೀವನ ಅಸ್ತವ್ಯಸ್ತವಾಗಿದೆ. ಮೊಬೈಲ್ ಟವರ್‌ಗಳು ಮತ್ತು ವಿದ್ಯುತ್ ಕಂಬಗಳು ಮುರಿದು ಬಿದ್ದಿದ್ದರಿಂದ ಮೂಲಸೌಕರ್ಯ ತೀವ್ರವಾಗಿ ಹಾನಿಗೊಳಗಾಗಿದೆ.

ಪಂಜಾಬ್‌ನ ಪ್ರವಾಹ ಪೀಡಿತ ಗ್ರಾಮದಿಂದ 22 ಸಿಆರ್‌ಪಿಎಫ್ ಸಿಬ್ಬಂದಿ ಮತ್ತು ಮೂವರು ನಾಗರಿಕರನ್ನು ಸೇನಾ ಹೆಲಿಕಾಪ್ಟರ್‌ನಲ್ಲಿ ರಕ್ಷಣೆ ಮಾಡಲಾಗಿದೆ. ಸೇನಾ ಹೆಲಿಕಾಪ್ಟರ್ ತೆರಳುತ್ತಿದ್ದಂತೆ ಇತ್ತ ಯೋಧರು ಆಶ್ರಯ ಪಡೆದಿದ್ದ ಕಟ್ಟಡ ಕೆಲವೇ ಕ್ಷಣಗಳಲ್ಲಿ ಕುಸಿದುಬಿದ್ದಿದೆ.

**ಮುಂದಿನ ಸೂಚನೆ ಬರುವವರೆಗೂ ಯಾತ್ರೆಯನ್ನು ಸ್ಥಗಿತಗೊಳಿಸಲಾಗಿದೆ ಎಂದು ಶ್ರೀ ಮಾತಾ ವೈಷ್ಣೋದೇವಿ ದೇವಾಲಯ ಮಂಡಳಿಯು ಎಕ್ಸ್‌ನಲ್ಲಿ ತಿಳಿಸಿದೆ. ಹವಾಮಾನವನ್ನು ಗಮನದಲ್ಲಿಟ್ಟುಕೊಂಡು ಯಾತ್ರಿಕರು ತಮ್ಮ ಯೋಜನೆಗಳನ್ನು ಮರುನಿಗದಿಪಡಿಸುವಂತೆ ಮಂಡಳಿಯು ಮನವಿ ಮಾಡಿಕೊಂಡಿದೆ.**

ಗುರುದಾಸ್‌ಪುರದ ಕರ್ತಾರಪುರ ಕಾರಿಡಾರ್ ಮುಳುಗಡೆಯಾಗಿದೆ. ಹಿಮಾಚಲಪ್ರದೇಶದ ಮಂಡಿ ಜಿಲ್ಲೆಯಲ್ಲಿ ಬಿಯಾಸ್ ನದಿಯ ಪ್ರವಾಹದ ಆತಂಕ ತರಿಸಿದೆ. ಉತ್ತರಾಖಂಡ್‌ನಲ್ಲಿ ಜೀವಗಂಗೆ, ಯಮುನೆಯ ರುದ್ರತಾಂಡವ ಹೇಳತೀರದಾಗಿದೆ.

# ಕೊಲಿಜಿಯಂ ಭಿನ್ನಾಭಿಪ್ರಾಯ ಪರಿಶೀಲನೆ ಅಗತ್ಯ: ಎ.ಎಸ್.ಓಕಾ

### ● ಇಬ್ಬರು ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಗಳನ್ನು ಸುಪ್ರೀಂ ಕೋರ್ಟ್‌ಗೆ ಬಡ್ತಿ ನೀಡಿದ ವಿಚಾರ

**ನವದೆಹಲಿ:** ಕೊಲಿಜಿಯಂನ ಶಿಫಾರಸುಗಳಿಗೆ ನ್ಯಾಯಮೂರ್ತಿ ಬಿ ವಿ ನಾಗರತ್ನ ಅವರ ತೀವ್ರ ಭಿನ್ನಾಭಿಪ್ರಾಯದ ಹೊರತಾಗಿಯೂ, ಇಬ್ಬರು ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಗಳನ್ನು ಸುಪ್ರೀಂ ಕೋರ್ಟ್‌ಗೆ ಬಡ್ತಿ ನೀಡಿದ ಒಂದು ದಿನದ ನಂತರ, ಸುಪ್ರೀಂ ಕೋರ್ಟ್‌ನ ಮಾಜಿ ನ್ಯಾಯಾಧೀಶ ಎ.ಎಸ್ ಓಕಾ ಕೊಲಿಜಿಯಂನಲ್ಲಿನ ಯಾವುದೇ ಭಿನ್ನಾಭಿಪ್ರಾಯವನ್ನು ಪರಿಶೀಲಿಸಬೇಕಾಗಿದೆ ಎಂದು ಹೇಳಿದರು.

ಒರಿಸ್ಸಾ ಹೈಕೋರ್ಟ್‌ನ ಮಾಜಿ ಮುಖ್ಯ ನ್ಯಾಯಮೂರ್ತಿ ಎಸ್ ಮುರಲೀಧರ್ ಸಂಪಾದಿಸಿರುವ (ಇನ್) ಕಂಪ್ಲೀಟ್ ಜಸ್ಟೀಸ್ ದಿ ಸುಪ್ರೀಂ ಕೋರ್ಟ್ ಅಟ್ 75 ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಹಿರಿಯ ವಕೀಲೆ ಇಂದಿರಾ ಜೈಸಿಂಗ್ ಅವರ ಪ್ರಶ್ನೆಗೆ ನ್ಯಾಯಮೂರ್ತಿ ಓಕಾ ಪ್ರತಿಕ್ರಿಯಿಸುತ್ತಿದ್ದರು.

ನ್ಯಾಯಮೂರ್ತಿಗಳಾದ ಮುರಳೀಧರ್ ಮತ್ತು ಓಕಾ ಮತ್ತು ರಾಜಕೀಯ ವಿಜ್ಞಾನಿ ಗೋಪಾಲ್ ಗುರು ಅವರನ್ನೊಳಗೊಂಡ ಸಮಿತಿಯನ್ನು ಜೈಸಿಂಗ್, ಸುಪ್ರೀಂ ಕೋರ್ಟ್‌ನ ಏಕೈಕ ಮಹಿಳಾ ನ್ಯಾಯಾಧೀಶರಿಂದ ಭಿನ್ನಾಭಿಪ್ರಾಯವಿರುವ ಸಮಯದಲ್ಲಿ ಭಾರತದ ಭವಿಷ್ಯದ ಮುಖ್ಯ ನ್ಯಾಯಮೂರ್ತಿಗಳನ್ನು ಆಯ್ಕೆ ಮಾಡುವ ಮಾನದಂಡಗಳನ್ನು ತಿಳಿದುಕೊಳ್ಳಲು ಬಯಸುತ್ತಾ ಗೌಪ್ಯವಾಗಿ ಕಾರ್ಯನಿರ್ವಹಿಸುವ ಕೊಲಿಜಿಯಂನ ಕಾರ್ಯನಿರ್ವಹಣೆಯ ಬಗ್ಗೆ ಕೇಳಿದರು. ಈ ಪ್ರಶ್ನೆಯು ಕಳವಳಕಾರಿಯಾಗಿದೆ, ಆದರೆ ಪಾರದರ್ಶಕತೆ ಎಂದರೇನು ಎಂಬುದನ್ನು ನಾವು ವ್ಯಾಖ್ಯಾನಿಸಬೇಕು ಎಂದು ನಾನು ಹೇಳುತ್ತಿದ್ದೇನೆ.

ಒಬ್ಬ ನ್ಯಾಯಾಧೀಶರು ಭಿನ್ನಾಭಿಪ್ರಾಯ ವ್ಯಕ್ತಪಡಿಸಿದಾಗ, ಆ ಭಿನ್ನಾಭಿಪ್ರಾಯ ಏನೆಂದು ನಮಗೆ ತಿಳಿದಿರಬೇಕು ಎಂದು ನೀವು ಹೇಳುವುದು ಸರಿ ಅದರಲ್ಲಿ ಯಾವುದೇ ತಪ್ಪಿಲ್ಲ. ಆ ಭಿನ್ನಾಭಿಪ್ರಾಯವು ಸಾರ್ವಜನಿಕ ವಲಯದಲ್ಲಿ ಏಕೆ ಇಲ್ಲ ಎಂದು ನೀವು ಟೀಕಿಸುವುದರಲ್ಲಿ ಸಮರ್ಥನೆ ಇರಬಹುದು ಎಂದು ಓಕಾ ಹೇಳಿದರು.

ಕೊಲಿಜಿಯಂನ ಚರ್ಚೆಗಳು ಮತ್ತು ನಿಮಿಷಗಳನ್ನು ಸಾರ್ವಜನಿಕ ವಲಯದಲ್ಲಿ ಅಪ್‌ಲೋಡ್ ಮಾಡಿದರೆ, ಕೊಲಿಜಿಯಂ ಪರಿಗಣಿಸಲು ಒಪ್ಪಿಕೊಂಡಿರುವ ವಕೀಲರ ಗೌಪ್ಯತೆಯ ಮೇಲೆ ಅದು ಪರಿಣಾಮ ಬೀರಬಹುದು ಎಂದು ಓಕಾ ವಿವರಿಸಿದರು. ಕೊಲಿಜಿಯಂ 10 ಅಥವಾ 15 ವಕೀಲರನ್ನು ಪರಿಗಣಿಸಿದರೆ, ಅದರಲ್ಲಿ 10 ಪ್ರಕರಣಗಳನ್ನು ಪರಿಗಣಿಸಲಾಗುತ್ತದೆ ಮತ್ತು ಐದು ಶಿಫಾರಸು ಮಾಡದಿದ್ದರೆ, ಒಪ್ಪಿಗೆ ನೀಡಲು ಸ್ವಯಂಪ್ರೇರಿತರಾಗಿ ಬಂದ ವ್ಯಕ್ತಿಗಳ ಗೌಪ್ಯತೆಯ ಬಗ್ಗೆ ನಮಗೆ ಕಾಳಜಿ ಇಲ್ಲವೇ? ಅವರು ಹಿಂತಿರುಗಿ ಅಭ್ಯಾಸ ಮಾಡಬೇಕಾಗುತ್ತದೆ ಎಂದು ಅವರು ಗಮನಿಸಿದರು.

ಈ ವಿಷಯಗಳು ಸಾರ್ವಜನಿಕ ವಲಯದ ಭಾಗವಾದ ನಂತರ, ಈ ವ್ಯಕ್ತಿಗಳ ಕೊನೆಯ ಮೂರು ವರ್ಷಗಳ ಸಂಬಳವು ಸಾರ್ವಜನಿಕವಾಗುತ್ತದೆ ಎಂದು ಕರ್ನಾಟಕ ಹೈಕೋರ್ಟ್‌ನ ಮಾಜಿ ಮುಖ್ಯ ನ್ಯಾಯಾಧೀಶರು ಹೇಳಿದರು. ಆದ್ದರಿಂದ ನಾವು ಅದನ್ನು ಗೌಪ್ಯತೆಯೊಂದಿಗೆ ಸಮತೋಲನಗೊಳಿಸಬೇಕು ಎಂದು ಅವರು ಹೇಳಿದರು.

ಈ ವರ್ಗಾವಣೆ ವಾಡಿಕೆಯಲ್ಲ ಆದರೆ ವ್ಯಾಪಕ ಸಮಾಲೋಚನೆಗಳ ನಂತರ ಎಚ್ಚರಿಕೆಯಿಂದ ಪರಿಗಣಿಸಲಾದ ನಿರ್ಧಾರ ಎಂದು ಗಮನಿಸಿದರು.

ಭಿನ್ನಾಭಿಪ್ರಾಯದ ಹಿಂದಿನ ಕಾರಣವನ್ನು ತಿಳಿದುಕೊಳ್ಳಬೇಕು ಎಂದು ನ್ಯಾಯಮೂರ್ತಿ ಓಕಾ ಹೇಳಿದರು. ಮತ್ತು ಭಿನ್ನಾಭಿಪ್ರಾಯದ ಬಗ್ಗೆ, ನಾನು ಒಪ್ಪುತ್ತೇನೆ, ಆ ಭಿನ್ನಾಭಿಪ್ರಾಯ ಏಕೆ ಇದೆ ಎಂದು ನಾವು ತಿಳಿದುಕೊಳ್ಳಬೇಕು. ಅದರ ಬಗ್ಗೆ ಸಾಕಷ್ಟು ಸಾಧಕ-ಬಾಧಕಗಳಿವೆ ಏಕೆಂದರೆ ನಾವು ಅದರ ಬಗ್ಗೆ ಸಾಕಷ್ಟು ಯೋಚಿಸಬೇಕಾಗಿದೆ. ಸಾರ್ವಜನಿಕ ವಲಯದಲ್ಲಿ ಸಂಪೂರ್ಣ ನಿರ್ಣಯ ಇರುವುದರಿಂದ ಮಾತ್ರ ಅದು ಪಾರದರ್ಶಕತೆಯನ್ನು ತರುತ್ತದೆ ಎಂದು ಕೆಲವರು ನಂಬುತ್ತಾರೆ.

**ವಕೀಲರ ಗೌಪ್ಯತೆಯ ಮೇಲೆ ಪರಿಣಾಮ**



**ಪ್ರಾದೇಶಿಕ ಅಸಮತೋಲನದ ಬಗ್ಗೆ ಕಳವಳ**

**ಆಗಸ್ಟ್ 25 ರಂದು, ಸಿಜೆಐ ಬಿ ಆರ್ ಗವಾಯಿ ನೇತೃತ್ವದ ಐದು ಸದಸ್ಯರ ಕೊಲಿಜಿಯಂ ಬಾಂಬೆ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ಅಲೋಕ್ ಆರಾಧೆ ಮತ್ತು ನ್ಯಾಯಮೂರ್ತಿ ಪಾಂಚೋಲಿ ಅವರ ಹೆಸರುಗಳನ್ನು ಬಡ್ತಿಗೆ ಶಿಫಾರಸು ಮಾಡಿತು. ನೇಮಕವಾದರೆ, ನ್ಯಾಯಮೂರ್ತಿ ಜಯಮಲ್ಯ ಬಾಗ್ಚಿ ಅವರ ನಿವೃತ್ತಿಯ ನಂತರ ಪಂಚೋಲಿ ಅವರು ಅಕ್ಟೋಬರ್ 2031 ರಲ್ಲಿ ಸಿಜೆಐ ಆಗುವ ನಿರೀಕ್ಷೆಯಿದೆ. ಪಂಚೋಲಿ ಅವರ ಕಡಿಮೆ ಹಿರಿತನ, ಜುಲೈ 2023 ರಲ್ಲಿ ಗುಜರಾತ್‌ನಿಂದ ಪಾಟ್ನಾ ಹೈಕೋರ್ಟ್‌ಗೆ ಅವರ ವರ್ಗಾವಣೆಯ ಬಗ್ಗೆ ಪ್ರಶ್ನೆಗಳು ಮತ್ತು ಸುಪ್ರೀಂ ಕೋರ್ಟ್ ಪ್ರಾತಿನಿಧ್ಯದಲ್ಲಿ ಪ್ರಾದೇಶಿಕ ಅಸಮತೋಲನದ ಬಗ್ಗೆ ಕಳವಳಗಳನ್ನು ಉಲ್ಲೇಖಿಸಿ ನಾಗರತ್ನ ಅವರು ಶಿಫಾರಸನ್ನು ವಿರೋಧಿಸಿದರು ಎಂದು ಮೂಲಗಳು ತಿಳಿಸಿವೆ.**

## ಮಿನಿ ನ್ಯೂಸ್

### ಪ್ರೀತಿಸಲು ನಿರಾಕರಿಸಿದ ಬಾಲಕಿಯನ್ನು ಕೊಂದು ಮನೆಯಲ್ಲೇ ಶವ ಹೂಳಲು ಯತ್ನಿಸಿದ ಪಾಗಲ್

**ಬಾಗ್‌ಪತ್:** ಪ್ರೀತಿಸಲು ನಿರಾಕರಿಸಿದ ಬಾಲಕಿಯ ಮೇಲೆ ಯುವಕನೊಬ್ಬ ಸಲಿಕೆಯಿಂದ ಹಲ್ಲೆ ನಡೆಸಿ ಕೊಂದು, ಆಕೆಯ ಮನೆಯಲ್ಲೇ ಶವ ಹೂಳಲು ಯತ್ನಿಸಿರುವ ಘಟನೆ ಉತ್ತರ ಪ್ರದೇಶದ ಬಾಗ್‌ಪತ್ ಜಿಲ್ಲೆಯ ಬೌಧಾ ಗ್ರಾಮದಲ್ಲಿ ನಡೆದಿದೆ. ಸುಮಾರು 14 ವರ್ಷದ ಬಾಲಕಿಯ ಮನೆಗೆ ನುಗ್ಗಿ ಸಮುನ್ (19) ಎಂಬಾತ ಆಕೆಯನ್ನು ಸಲಿಕೆಯಿಂದ ಹೊಡೆದು ಕೊಂದಿದ್ದಾನೆ ಎಂದು ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎನ್ ಪಿ ಸಿಂಗ್ ತಿಳಿಸಿದ್ದಾರೆ.

ವಿಚಾರಣೆಯ ಸಮಯದಲ್ಲಿ, ಆರೋಪಿ ಸಮುನ್ ತಾನು ಹುಡುಗಿಯನ್ನು ಪ್ರೀತಿಸುತ್ತಿರುವುದಾಗಿ ಆಕೆ ಪ್ರತಿಕ್ರಿಯೆ ನೀಡಲಿಲ್ಲ, ಇದರಿಂದ ಬಾಲಕಿಯ ಮನೆಗೆ ನುಗ್ಗಿದ್ದ. ಈ ವೇಳೆ ಬಾಲಕಿಯ ಮೇಲೆ ಅತ್ಯಾಚಾರಕ್ಕೂ ಪ್ರಯತ್ನಿಸಿದ್ದು ಇದಕ್ಕೆ ಪ್ರತಿರೋಧ ವ್ಯಕ್ತವಾದ ನಂತರ ಕೊಲೆ ಮಾಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ನಂತರ ಆರೋಪಿ ಬಾಲಕಿಯ ಶವವನ್ನು ಮನೆಯಲ್ಲಿಯೇ ಹೂಳುತ್ತಿದ್ದಾಗ ಆಕೆಯ ಕುಟುಂಬ ಸದಸ್ಯರು ಬಂದಿದ್ದಾರೆ. ಛಪ್ರೌಲಿ ಠಾಣೆ ಪೊಲೀಸರು ಆರೋಪಿಯನ್ನು ಬಂಧಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ. ಶವವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಘಟನೆ ಗ್ರಾಮಸ್ಥರನ್ನು ಬೆಚ್ಚಿಬೀಳಿಸಿದೆ.

### ನೇಪಾಳದ ಮೂಲಕ ಬಿಹಾರ ಪ್ರವೇಶಿಸಿದ ಪಾಕ್ ಉಗ್ರರು, ರಾಜ್ಯಾದ್ಯಂತ ಹೈ ಅಲರ್ಟ್

**ನವದೆಹಲಿ:** ಪಾಕಿಸ್ತಾನ ಮೂಲದ ಭಯೋತ್ಪಾದಕರು ಬಿಹಾರ ರಾಜ್ಯಕ್ಕೆ ಪ್ರವೇಶಿಸಿದ್ದಾರೆ ಎಂಬ ಗುಪ್ತಚರದ ಮಾಹಿತಿಗಳು ಬಂದ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಹೈ ಅಲರ್ಟ್ ಘೋಷಿಸಲಾಗಿದೆ.

ಜೈಶ್-ಎ-ಮೊಹಮದ್ ಭಯೋತ್ಪಾದಕ ಸಂಘಟನೆಯ ಮೂವರು ಶಂಕಿತ ಕಾರ್ಯಕರ್ತರು ನೇಪಾಳ ಗಡಿ ಮೂಲಕ ಬಿಹಾರಕ್ಕೆ ನುಸುಳಿದ್ದಾರೆ. ಶಂಕಿತರನ್ನು ರಾವಲ್ಪಿಂಡಿಯ ಹಸ್ನೈನ್ ಅಲಿ, ಉಮರ್ಕೋಟ್‌ನ ಆದಿಲ್ ಹುಸೇನ್ ಮತ್ತು ಬಹವಾಲ್ಪುರದ ಮೊಹಮದ್ ಉಸಾನ್ ಎಂದು ಗುರುತಿಸಲಾಗಿದೆ.

ಆಗಸ್ಟ್ ಎರಡನೇ ವಾರದಲ್ಲಿ ಕಠಂಡು ತಲುಪಿ ಕಳೆದ ವಾರ ಬಿಹಾರ ಪ್ರವೇಶಿಸಿದ್ದಾರೆ ಎಂದು ಗುಪ್ತಚರ ಮೂಲಗಳು ತಿಳಿಸಿವೆ. ಪೊಲೀಸ್ ಪ್ರಧಾನ ಕಚೇರಿಯು ಶಂಕಿತರ ಪಾಸ್‌ಪೋರ್ಟ್‌ಗೆ ಸಂಬಂಧಿಸಿದ ವಿವರಗಳನ್ನು ಗಡಿ ಜಿಲ್ಲೆಗಳ ಪೊಲೀಸರೊಂದಿಗೆ ಹಂಚಿ ಕೊಂಡಿದೆ. ಭದ್ರತಾ ಸಂಸ್ಥೆಗಳಿಗೆ ಕಣ್ಗಾವಲು ಹೆಚ್ಚಿಸಲು ಮತ್ತು ಗುಪ್ತಚರ ಮಾಹಿತಿಯನ್ನು ಸಂಗ್ರಹಿಸಲು ಸೂಚಿಸಲಾಗಿದೆ. ಯಾವುದೇ ಅನುಮಾನಾಸ್ಪದ ಚಟುವಟಿಕೆಯ ಆಧಾರದ ಮೇಲೆ ಅಗತ್ಯ ಕ್ರಮ ಕೈಗೊಳ್ಳಲು ಜಿಲ್ಲಾ ಗುಪ್ತಚರ ಘಟಕಗಳಿಗೆ ಸೂಚಿಸಲಾಗಿದೆ.

### ಕಟ್ಟಡ ಕುಸಿತ ದುರಂತ : 15ಜನ ಸಾವು

**ಪಾಲ್ಘರ್:** ಮಹಾರಾಷ್ಟ್ರದ ಪಾಲ್ಘರ್ ಜಿಲ್ಲೆಯ ವಿರಾರ್‌ನಲ್ಲಿ ಕಟ್ಟಡ ಕುಸಿದು ಬಿದ್ದ ಘಟನೆಯಲ್ಲಿ ಸಾವನ್ನಪ್ಪಿದವರ ಸಂಖ್ಯೆ 15ಕ್ಕೆ ಏರಿದೆ. ಮುಂಬೈಗೆ ಹೊಂದಿಕೊಂಡಿರುವ ಪಾಲ್ಘರ್‌ನ ವಿರಾರ್ ಪ್ರದೇಶದ ವಿಜಯ್ ನಗರದಲ್ಲಿ ಸುಮಾರು 50 ಫ್ಲಾಟ್‌ಗಳನ್ನು ಹೊಂದಿರುವ ನಾಲ್ಕು ಅಂತಸ್ತಿನ ರಮಾಬಾಯಿ ಅಪಾರ್ಟ್‌ಮೆಂಟ್ ನಿನ್ನೆ ಬೆಳಗಿನ ಜಾವ 12.05 ಕ್ಕೆ ಕುಸಿದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ನಾಲ್ಕನೇ ಮಹಡಿಯಲ್ಲಿ ಒಂದು ವರ್ಷದ ಬಾಲಕಿಯ ಹುಟ್ಟುಹಬ್ಬದ ಪಾರ್ಟಿ ನಡೆಯುತ್ತಿದ್ದಾಗ, ಕಟ್ಟಡದ ಒಂದು ಭಾಗದ 12 ಫ್ಲಾಟ್‌ಗಳು ಕುಸಿದು, ನಿವಾಸಿಗಳು ಮತ್ತು ಅತಿಥಿಗಳು ಅವಶೇಷಗಳ ಅಡಿಯಲ್ಲಿ ಸಿಲುಕಿಕೊಂಡಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

ಪಾಲ್ಘರ್ ಜಿಲ್ಲಾಧಿಕಾರಿ ಡಾ. ರಾಣಿ ಜಾಖರ್ ಬೆಳಿಗ್ಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದು ಘಟನೆಯಲ್ಲಿ ಸಾವನ್ನಪ್ಪಿದವರ ಸಂಖ್ಯೆ 15 ಕ್ಕೆ ಏರಿದೆ ಎಂದು ದೃಢಪಡಿಸಿದರು. ಹುಟ್ಟುಹಬ್ಬವನ್ನು ಆಚರಿಸುತ್ತಿದ್ದ ಬಾಲಕಿಯೂ ಸಾವನ್ನಪ್ಪಿದವರಲ್ಲಿ ಸೇರಿದ್ದಾಳೆ. ರಕ್ಷಿಸಲ್ಪಟ್ಟ ಇತರ ಆರು ಜನರು ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆಪಡೆಯುತ್ತಿದ್ದಾರೆ ಎಂದು ವಸೈವಿರಾರ್ ಮುನ್ಸಿಪಲ್ ಕಾರ್ಪೊರೇಷನ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ಪಡೆ, ಸ್ಥಳೀಯ ಪೊಲೀಸರು ಮತ್ತು ಅಗ್ನಿಶಾಮಕ ಇಲಾಖೆ ಸೇರಿದಂತೆ ತುರ್ತು ತಂಡಗಳು ಅವಶೇಷಗಳಲ್ಲಿ ಶೋಧ ಕಾರ್ಯ ಮುಂದುವರೆಸಿವೆ.

### ಜಮ್ಮುವಿನಲ್ಲಿ 24 ಗಂಟೆಗಳಲ್ಲಿ ದಾಖಲೆಯ 380 ಮಿಮೀ ಮಳೆ

**ಶ್ರೀನಗರ:** ಜಮ್ಮು ಮತ್ತು ಕಾಶ್ಮೀರದ ಚಳಿಗಾಲದ ರಾಜಧಾನಿ ಜಮ್ಮುವಿನಲ್ಲಿ ಕಳೆದ 24 ಗಂಟೆಗಳಲ್ಲಿ ದಾಖಲೆಯ 380 ಮಿ.ಮೀ ಮಳೆಯಾಗಿದ್ದು, ಭಾರೀ ಮಳೆಯಿಂದಾಗಿ ಹಲವು ಕಡೆ ಪ್ರವಾಹದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಜಮ್ಮುವಿನಲ್ಲಿ ನಿನ್ನೆ ದಾಖಲೆಯ 380 ಮಿ.ಮೀ ಮಳೆಯಾಗಿದೆ ಎಂದು ಎಂಇಟಿ ಕಾಶ್ಮೀರ ನಿರ್ದೇಶಕ ಡಾ. ಮುಖ್ತಾರ್ ಅಹ್ಮದ್ ಅವರು ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ ತಿಳಿಸಿದ್ದಾರೆ.

1988 ರಲ್ಲಿ ಜಮ್ಮುವಿನಲ್ಲಿ ದಾಖಲಾಗಿದ್ದ 270 ಮಿ.ಮೀ ಮಳೆಯ ಹಿಂದಿನ ದಾಖಲೆಯನ್ನು ಇದು ಮುರಿದಿದೆ. ಇದು ಜಮ್ಮುವಿನಲ್ಲಿ 24 ಗಂಟೆಗಳಲ್ಲಿ ದಾಖಲಾದ ಅತಿ ಹೆಚ್ಚು ಮಳೆಯಾಗಿದೆ ಎಂದು ಅವರು ಹೇಳಿದ್ದಾರೆ. ಜಮ್ಮುವಿನಲ್ಲಿ ದಾಖಲೆಯ ಮಳೆಯ ಜೊತೆಗೆ, ಕತ್ರಾದಲ್ಲಿ 284 ಮಿ.ಮೀ ಮಳೆಯಾಗಿದೆ, ನಂತರ ರಿಯಾಸಿಯಲ್ಲಿ 282 ಮಿ.ಮೀ, ಸಾಂಬಾದಲ್ಲಿ 170 ಮಿ.ಮೀ, ದಾದಾದಲ್ಲಿ 130 ಮಿ.ಮೀ, ಕಥುವಾದಲ್ಲಿ 116.5 ಮಿ.ಮೀ, ಬನಿಹಾಲ್‌ನಲ್ಲಿ 83.8 ಮಿ.ಮೀ, ರಾಜೌರಿಯಲ್ಲಿ 57.4 ಮಿ.ಮೀ ಹಾಗೂ ಕಿಶ್ತ್ವಾರ್‌ನಲ್ಲಿ 49 ಮಿ.ಮೀ ಮಳೆಯಾಗಿದೆ. ಜಮ್ಮು ಮತ್ತು ಜಮ್ಮು ಪ್ರದೇಶದ ಇತರ ಭಾಗಗಳಲ್ಲಿ ಕಳೆದ ಕೆಲವು ದಿನಗಳಿಂದ ನಿರಂತರ ಮತ್ತು ಭಾರೀ ಮಳೆಯಾಗುತ್ತಿದೆ. ನಿರಂತರ ಭಾರೀ ಮಳೆಯಿಂದಾಗಿ ಜಮ್ಮುವಿನಲ್ಲಿ ಪ್ರವಾಹದಂತಹ ಪರಿಸ್ಥಿತಿ ಉಂಟಾಗಿದ್ದು, ತಗ್ಗು ಪ್ರದೇಶದ ಮನೆಗಳು ನೀರಿನಲ್ಲಿ ಮುಳುಗಿವೆ ಮತ್ತು ಜನರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗುತ್ತಿದೆ.

ಆಗಸ್ಟ್ 23 ರಂದು ಜಮ್ಮುವಿಗೆ ಆರೆಂಜ್ ಅಲರ್ಟ್ ನೀಡಲಾಗಿತ್ತು ಮತ್ತು ನಿರಂತರ ಮಳೆಯ ನಂತರ ಆಗಸ್ಟ್ 25 ರಂದು ರೆಡ್ ಅಲರ್ಟ್ ಘೋಷಿಸಲಾಗಿತ್ತು ಎಂದು ಮುಖ್ತಾರ್ ಹೇಳಿದ್ದಾರೆ.







# ಅನುಶ್ರೀ ಕಲ್ಯಾಣದಲ್ಲಿ ರಾರಾಜಿಸಿದ ಅಪ್ಪು ಫೋಟೋ

ಪುನೀತ್ ರಾಜಕುಮಾರ್ ಅವರ ಅಪ್ಪಟ ಅಭಿಮಾನಿಯಾಗಿರುವ ಅನುಶ್ರೀ ಅವರು ತಾವು ಮದುವೆಯಾಗುತ್ತಿರುವ ಮಂಟಪದಲ್ಲಿ ಅಪ್ಪು ಫೋಟೋವನ್ನು ರಾರಾಜಿಸುವಂತೆ ಮಾಡಿದ್ದಾರೆ.

ಕನ್ನಡದ ಖ್ಯಾತ ನಿರೂಪಕಿ ಅನುಶ್ರೀ ಆ.28 ಕೊಡಗು ಮೂಲದ ರೋಷನ್ ಜೊತೆ ವೈವಾಹಿಕ ಜೀವನಕ್ಕೆ ಕಾಲಿಟ್ಟಿದ್ದಾರೆ. ತಮ್ಮ ನಿರೂಪಣೆಯಿಂದ ಹೆಚ್ಚು ಜನಪ್ರಿಯತೆ ಗಳಿಸಿದ ಅನುಶ್ರೀ ತಮ್ಮ ಬಹುಕಾಲದ ಗೆಳೆಯ ರೋಷನ್ ಜೊತೆ ಹಸೆಮಣೆ ಏರಿದ್ದು, 10:56ರ ಶುಭ ಮೂಹೂರ್ತದಲ್ಲಿ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದಾರೆ. ಅಪ್ಪು ಅವರ ಅಪ್ಪಟ ಅಭಿಮಾನಿಯಾಗಿರುವ ಅನುಶ್ರೀ ಮದುವೆ ಮಂಟಪದಲ್ಲಿ ಅಪ್ಪು ಫೋಟೋವೊಂದನ್ನು ಇರಿಸಿ, ಸುತ್ತಲೂ ಹೂವುಗಳಿಂದ ಅಲಂಕಾರ ಮಾಡಿದ್ದಾರೆ. ಈ ಮೂಲಕ ಅಪ್ಪು ಮೇಲಿನ ಪ್ರೀತಿಯನ್ನು ತೋರ್ಪಡಿಸಿದ್ದಾರೆ. ಈ ಹಿಂದೆಯೂ ಅಪ್ಪು ಬಗ್ಗೆ ನಟಿ ಅನುಶ್ರೀ ಮಾತನಾಡಿದ್ದರು. ಅಪ್ಪು ಸರ್ ನನಗೆ ತುಂಬಾ ಹತ್ತಿರ. ಸಿನಿಮಾ ಇಷ್ಟಪಡಲು ಶುರುವಾಗಿದ್ದ ದಿನದಿಂದ ಅವರು ನನಗೆ ತುಂಬಾ ಹತ್ತಿರವಾಗಿದ್ದಾರೆ. ನಾನು ಇಷ್ಟಪಡುವ ಏಕೈಕ ನಟ ಅಂದ್ರೆ ಅಪ್ಪು ಸರ್. ಅವರನ್ನು ಭೇಟಿಯಾದ ಮೇಲೆ ಅವರ ಗುಣ, ವ್ಯಕ್ತಿತ್ವಕ್ಕೆ ನಾನು ಅಭಿಮಾನಿಯಾದೆ ಎಂದು ಹಲವು ಭಾರೀ ಭಾವುಕರಾಗಿದ್ದರು.

ನವಜೋಡಿಗೆ ಶುಭ ಹಾರೈಸಿದ ಗಣ್ಯರು

ಬೆಂಗಳೂರಿನ ಕಗ್ಗಲಿಪುರ ಬಳಿಯ ಹೊರವಲಯದ ರೆಸಾರ್ಟ್‌ನಲ್ಲಿ ಮದುವೆ ನೆರವೇರಿದ್ದು, ನಟ ಶರಣ್, ಹಿರಿಯ ನಟಿ ಪ್ರೇಮ, ಡಾಲಿ ಧನಂಜಯ್, ಚೈತ್ರಾ ಆಚಾರ್, ನಾಗಭೂಷಣ, ಗಾಯಕ ವಿಜಯಪ್ರಕಾಶ್, ನಟ ವಿಜಯ ರಾಘವೇಂದ್ರ, ಸೇರಿದಂತೆ ಕಿರುತೆರೆ ಕಲಾವಿದರು, ಚಿತ್ರೋದ್ಯಮದ ಗಣ್ಯರು ನವಜೋಡಿಗೆ ಶುಭ ಹಾರೈಸಿದ್ದಾರೆ.



ಸಿನಿ ವಾಹಿನಿ

# ಮತ್ತೊಂದು ಹೊಸ ಕಾರು ಖರೀದಿಸಿದ ನಟ ಅಜಿತ್‌ಕುಮಾರ್


ನಟ ಅಜಿತ್ ಕುಮಾರ್ ಸಿನಿಮಾ ನಟನಾಗಿರುವ ಜೊತೆಗೆ ಕಾರು ರೇಸರ್ ಸಹ. ಕಾರುಗಳ ಮೇಲೆ ವಿಪರೀತ ವ್ಯಾಮೋಹ ಹೊಂದಿರುವ ಅಜಿತ್ ಕುಮಾರ್ ಅವರು ಈಗಾಗಲೇ ವಿಶ್ವದ ಅತ್ಯುತ್ತಮ ಬ್ಯಾಂಡಿನ ಕಾರುಗಳನ್ನು ಖರೀದಿಸಿ ಸಂಗ್ರಹದಲ್ಲಿಟ್ಟುಕೊಂಡಿದ್ದಾರೆ. ಇದೀಗ ಅಜಿತ್ ಕುಮಾರ್ ಅವರು ಮತ್ತೊಂದು ಬಲು ಶಕ್ತಿಯುತ ಮತ್ತು ದುಬಾರಿ ಕಾರೊಂದನ್ನು ಖರೀದಿ ಮಾಡಿದ್ದಾರೆ.

ತಮಿಳಿನ ಸ್ಟಾರ್ ನಟ ಅಜಿತ್ ಕುಮಾರ್ ಅವರಿಗೆ ಸಿನಿಮಾ ಪ್ರವೃತ್ತಿಯಾಗಿದೆ, ವೃತ್ತಿ ರೇಸಿಂಗ್ ಆಗಿದೆ. ಕಳೆದ ಕೆಲ ವರ್ಷಗಳಲ್ಲಿ ಅಜಿತ್ ಅವರು ಸಿನಿಮಾ ಸೆಟ್‌ಗಿಂತಲೂ ಹೆಚ್ಚು ರೇಸಿಂಗ್ ಟ್ರ್ಯಾಕ್ ಮೇಲೆ ಹೆಚ್ಚು ಸಮಯ ಕಳೆದಿದ್ದಾರೆ. ರೇಸಿಂಗ್ ಅನ್ನೇ ವೃತ್ತಿಯಾಗಿರುವ ಸ್ವೀಕರಿಸಿರುವ ಅಜಿತ್ ಅವರು ಅಜಿತ್ ಕಾರ್ ರೇಸಿಂಗ್ ಹೆಸರಿನ ತಂಡವೊಂದನ್ನು ಕಟ್ಟಿಕೊಂಡು ವಿಶ್ವದ ನಾನಾ ದೇಶಗಳಲ್ಲಿ ಕಾರು ರೇಸಿಂಗ್‌ನಲ್ಲಿ ಭಾಗಿ ಆಗುತ್ತಿದ್ದಾರೆ. ಕಾರುಗಳ ಮೇಲೆ ಅಪಾರ ಪ್ರೀತಿಯುಳ್ಳ ಅಜಿತ್ ಅವರು ಹಲವು ಅತ್ಯುತ್ತಮ ಕಾರುಗಳನ್ನು ಖರೀದಿಸಿದ್ದಾರೆ. ಇದೀಗ ಹೊಸದೊಂದು ಕಾರನ್ನು ಅಜಿತ್ ಖರೀದಿ ಮಾಡಿದ್ದಾರೆ.

ಬಲು ದುಬಾರಿ ಕಾರುಗಳು

ಅಜಿತ್ ಬಳಿ ಈಗಾಗಲೇ ಸುಮಾರು ಹತ್ತಕ್ಕೂ ಹೆಚ್ಚು ವಿಶ್ವದ ಅತ್ಯುತ್ತಮ ಕಾರುಗಳಿವೆ. ಲ್ಯಾಂಬೊರ್ಗಿನಿ ಜಿಟಿ, ಮೆಕ್‌ಲ್ಯಾರನ್ ಸೆನ್ನಾ, ಫೆರಾರಿ ಎಸ್‌ಎಫ್90, ಪೋರ್ಶೆ ಗಿಟಿ3 ಆರ್‌ಎಸ್, ಬಿಎಂಡಬ್ಲ್ಯು 740 ಎಲ್‌ಐ, ಮರ್ಸಿಡೀಸ್ ಬೆಂಜ್ 350 ಜಿಎಲ್‌ಎಸ್, ಫೆರಾರಿ 458 ಇಟಾಲಿಯಾ, ಹೋಂಡಾ ಅಕಾರ್ಡ್ ವಿ6 ಸೇರಿದಂತೆ ಇನ್ನೂ ಕೆಲವು ವಿಶ್ವದ ಬಲು ವೇಗದ ಮತ್ತು ಅತ್ಯಾಧುನಿಕ ಐಶಾರಾಮಿ ಸೌಲಭ್ಯಗಳನ್ನು ಒಳಗೊಂಡ ಬಲು ದುಬಾರಿ ಕಾರುಗಳು ಇವೆ. ಇದೀಗ ಈ ಕಾರು ಸಂಗ್ರಹಕ್ಕೆ ಮತ್ತೊಂದು ಕಾರನ್ನು ಅಜಿತ್ ಸೇರ್ಪಡೆಗೊಳಿಸಿದ್ದಾರೆ.

ಅಜಿತ್ ಅವರ ಕಲೆಕ್ಷನ್‌ನಲ್ಲಿ ಫೋರ್ಡ್ ಸಂಸ್ಥೆಯ ಕಾರು ಇರಲಿಲ್ಲ. ಇದೀಗ ಫೋರ್ಡ್ ಕಂಪೆನಿಯ ಪಿಕಪ್ ಟ್ರಕ್ ಒಂದನ್ನು ಖರೀದಿ ಮಾಡಿದ್ದಾರೆ ಅಜಿತ್.






# ಹೀರೋಯಿನ್ ಆಗಿ ಎಂಟ್ರಿ ಕೊಡೋಕೆ ರೆಡಿ

ಸಿನಿಮಾ ನಟ-ನಟಿಯರ ಮಕ್ಕಳು ಅನೇಕರು ಸಿನಿಮಾ ರಂಗಕ್ಕೆ ಎಂಟ್ರಿ ಕೊಟ್ಟಿದ್ದಾರೆ. ಕೆಲವರು ಎಂಟ್ರಿ ಕೊಡೋಕೆ ತಯಾರಿ ಮಾಡಿಕೊಳ್ತಿದ್ದಾರೆ.

ಈ ನಿಟ್ಟಿನಲ್ಲಿ ಹಲವು ದಿನಗಳಿಂದ ಶೃತಿ ಮಗಳ ಸಿನಿಮಾ ಎಂಟ್ರಿಯ ಕುರಿತಾಗಿ ಸುದ್ದಿ ಕೇಳಿ ಬರ್ತಾ ಇತ್ತು. ಇದೀಗ ಆ ಸಮಯ ಹತ್ತಿರದಲ್ಲೇ ಇರುವ ಸೂಚನೆ ಕಂಡುಬರುತ್ತಿದೆ. ನಟಿ ಶೃತಿ ಮಗಳು ಗೌರಿ ಮೇಕೋವರ್ ಮಾಡಿಕೊಂಡಿದ್ದು ಹೀರೋಯಿನ್ ಆಗಿ ಎಂಟ್ರಿ ಕೊಡೋದಕ್ಕೆ ರೆಡಿಯಾಗಿದ್ದಾರೆ. ಗೌರಿ-ಗಣೇಶ ಹಬ್ಬಕ್ಕೆ ಶೃತಿ ಮಗಳು ಗೌರಿ ಅಲಿಯಾಸ್ ಮಿಲಿ ಹೊಸ ಫೋಟೋಶೂಟ್ ಮಾಡಿಸಿದ್ದಾರೆ.

ಶೃತಿ ಮಗಳು ಗೌರಿ ಕೂಡ ತಾಯಿಯಂತೆ ಸರಳ, ಗಂಭೀರ ಉಡುಗೆಯಲ್ಲಿ ಸದಾ ಮಿಂಚುತ್ತಾರೆ. ಇದೀಗ ಸಾಂಪ್ರದಾಯಿಕ ಉಡುಗೆಯಲ್ಲಿ ಫೋಟೋಶೂಟ್ ಮಾಡಿಸಿದ್ದು ಹೊಸ ನಾಯಕಿಯಂತೆ ಕಂಗೊಳಿಸುತ್ತಿದ್ದಾರೆ. ಎಸ್.ಮಹೇಂದರ್ ಹಾಗೂ ಶೃತಿ ಪುತ್ರಿಯಾಗಿರುವ ಗೌರಿ ತಮ್ಮ ಸಿನಿಮಾ ಕುಟುಂಬದ ಪೀಳಿಗೆಯ ಮುಂದಿನ ನಟಿ. ಶೀಘ್ರದಲ್ಲೇ ಶೃತಿ ಮಗಳು ಗೌರಿ ಚಿತ್ರರಂಗಕ್ಕೆ ನಾಯಕಿಯಾಗಿ ಎಂಟ್ರಿ ಕೊಡಲಿದ್ದಾರೆ.

# 1,000 ಡ್ಯಾನ್ಸರ್ಸ್ ಜೊತೆ ಮೈಸೂರಲ್ಲಿ ರಾಮ್ ಚರಣ್

ತೆಲುಗು ಸ್ಟಾರ್ ರಾಮ್ ಚರಣ್ ನಟಿಸುತ್ತಿರುವ ಬಹುನಿರೀಕ್ಷಿತ ಸಿನಿಮಾ ಪೆದ್ದಿ. ಈಗಾಗಲೇ ರಿಲೀಸ್ ಆಗಿರುವ ಟೀಸರ್ ಚಿತ್ರದ ಮೇಲಿನ ನಿರೀಕ್ಷೆ ಹೆಚಿಸಿದೆ. ಇದೀಗ ಚಿತ್ರತಂಡ ಗೌರಿ-ಗಣೇಶ ಹಬ್ಬದ ನಡುವೆಯೇ ಶೂಟಿಂಗ್ ನಲ್ಲಿ ತೊಡಗಿಸಿಕೊಂಡಿದೆ. ಮೈಸೂರಿನಲ್ಲಿ ರಾಮ್ ಚರಣ್ ನಾಯಕನಾಗಿ ಅಭಿನಯಿಸುತ್ತಿರುವ ಪೆದ್ದಿ ಚಿತ್ರೀಕರಣ ಭರದಿಂದ ಸಾಗುತ್ತಿದೆ. ಅದ್ದೂರಿ ಸೆಟ್ ಹಾಕಿ ಮಾಸ್ ಸಾಂಗ್ ವೊಂದನ್ನು ಶೂಟಿಂಗ್ ನಡೆಸಲಾಗಿದೆ. 1,000 ಡ್ಯಾನ್ಸರ್ಸ್ ಜೊತೆ ಗ್ಲೋಬಲ್ ಸ್ಟಾರ್ ರಾಮ್ ಚರಣ್ ಹಾಡಿಗೆ ಹೆಜ್ಜೆ ಹಾಕ್ತಿದ್ದು, ಖ್ಯಾತ ಡ್ಯಾನ್ಸ್ ಮಾಸ್ಟರ್ ಜಾನಿ ಈ ಹಾಡಿಗೆ ಕೊರಿಯೋಗ್ರಾಫ್ ಮಾಡುತ್ತಿದ್ದಾರೆ. ಬಹಳ ಅದ್ದೂರಿಯಾಗಿ ದೊಡ್ಡ ಬಜೆಟ್‌ನಲ್ಲಿ ಈ ಸಾಂಗ್ ಚಿತ್ರೀಕರಣ ನಡೆಸಲಾಗುತ್ತಿದೆ.

ಉಪ್ಪೇನ ನಿರ್ದೇಶಕ ಬುಚ್ಚಿಬಾಬು ಸನಾ ನಿರ್ದೇಶನ ಪೆದ್ದಿ ಸ್ಪೋರ್ಟ್ ಆಕ್ಷನ್ ಡ್ರಾಮಾ ಕಥಾಹಂದರ ಹೊಂದಿದೆ. ರಾಮ್ ಚರಣ್‌ಗೆ ಜಾನ್ವಿ ಕಪೂರ್ ನಾಯಕಿಯಾಗಿ ನಟಿಸಿದ್ದಾರೆ. ಕನ್ನಡದ ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್, ಜಗಪತಿ ಬಾಬು ಮತ್ತು ದಿವೇಂದು ಶರ್ಮಾ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

ಜಾನ್ವಿ ಕಪೂರ್ ನಾಯಕಿ



# ಸ್ಟಾರ್ಟಪ್ ಉದ್ಯಮಿ ಸಿನಿಮಾದ ಟೈಟಲ್ ಟೀಸರ್

ಗಣೇಶನ ಹೆಸರಿನಲ್ಲಿ ಸಿನಿಮಾಗಳು ಬರದೆ ಕೆಲವು ವರ್ಷ ಆಯಿತು. ನೀನು ಮತ್ತೆ ಯಾವಾಗ ಬರುತ್ತೀಯ ಎನ್ನುವ ಭಕ್ತರ ಪ್ರಶ್ನೆಗೆ ಉತ್ತರಿಸುವ ಗಣೇಶ 'ನಾನು ಹೈಟೆಕ್ ಆಗಿ ಅಪ್ಡೇಟ್ ಆಗಿದ್ದೀನಿ. ನಿಮ್ಮ ಬಳಿ ಒಬ್ಬನನ್ನು ಕಳುಹಿಸುತ್ತಿದ್ದೇನೆ. ಆದರೆ ನಿಮ್ಮ ಮೊಬೈಲ್ ಪಾಸ್ವರ್ಡ್‌ಗೆ ನೀವೇ ಜವಾಬ್ದಾರರು' ಎಂದು ಭಕ್ತರನ್ನು ಎಚ್ಚರಿಸುವ ಟೈಟಲ್ ಟೀಸರ್ ಇದೀಗ ವೈರಲ್ ಆಗಿದೆ.

ಅನಿಲ್ ಶೆಟ್ಟಿ ಅವರ ಹೋಂ ಬ್ಯಾನರ್ ಮಾಸ್ ಪ್ರೊಡಕ್ಷನ್ ಕಂಪನಿ ನಿರ್ಮಾಣ ಮಾಡುತ್ತಿರುವ ಸಿನಿಮಾ 'ಲಂಬೋಧರ 2.0'ದಲ್ಲಿ ಅನಿಲ್ ನಾಯಕ ನಟನಾಗಿ ಅಭಿನಯಿಸುತ್ತಿದ್ದು ಒಂದು ಒಳ್ಳೆ ಸಿನಿಮಾ ಮಾಡಲು ಸೃಜನಶೀಲ ತಾಂತ್ರಿಕ ತಂಡವನ್ನು ಕಟ್ಟುತ್ತಿದ್ದಾರೆ. ಬ್ಯಾಚುಲರ್ ಪಾರ್ಟಿ ಚಿತ್ರ ನಿರ್ದೇಶಕ ಅಭಿಜಿತ್ ಮಹೇಶ್ ಚಿತ್ರಕಥೆ ಮತ್ತು ಸಂಭಾಷಣೆ ಬರೆಯುತ್ತಿದ್ದು ಸದ್ಯದಲ್ಲೇ ಇಡೀ ಚಿತ್ರ ತಂಡ ಘೋಷಣೆಯಾಗಲಿದೆ. ಗಣೇಶ ಹಬ್ಬದ ದಿನದಂದು ಟೈಟಲ್ ಟೀಸರ್ ಬಿಡುಗಡೆ ಮಾಡಿ, ಹೊಸ ಅನುಭವ ನೀಡಿದ್ದಾರೆ. ನಿರ್ದೇಶಕರ ಈ ಟೈಟಲ್ ಟೀಸರ್‌ಗೆ ಸಾಕಷ್ಟು ಮೆಚ್ಚುಗೆ ವ್ಯಕ್ತವಾಗುತ್ತಿದೆ.

# ನಿಮ್ಮೊಂದಿಗೆ ನಾವಿದ್ದೇವೆ 84 ದಿನಗಳ ಬಳಿಕ ಆರ್‌ಸಿಬಿ ಭಾವುಕ ಪೋಸ್ಟ್


ಐಪಿಎಲ್ 2025ರ ಫೈನಲ್ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು 20 ಓವರ್‌ಗಳಲ್ಲಿ 190 ರನ್ ಕಲೆಹಾಕಿದ್ದರು. ಈ ಗುರಿಯನ್ನು ಬೆನ್ನತ್ತಿದ ಪಂಜಾಬ್ ಕಿಂಗ್ಸ್ 20 ಓವರ್‌ಗಳಲ್ಲಿ 184 ರನ್‌ಗಳಿಸಲಷ್ಟೇ ಶಕ್ತರಾಗಿದ್ದರು. ಈ ಮೂಲಕ 6 ರನ್‌ಗಳ ರೋಚಕ ಜಯದೊಂದಿಗೆ ಆರ್‌ಸಿಬಿ ಚೊಚ್ಚಲ ಬಾರಿ ಚಾಂಪಿಯನ್ ಪಟ್ಟ ಅಲಂಕರಿಸಿತ್ತು.

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್ -18ರ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು ಪಾಲಿಗೆ ಜೂನ್ 4 ಎಂಬುದು 'ಕಪ್'ಚುಕ್ಕೆ. ಬೆಂಗಳೂರಿನಲ್ಲಿ ನಡೆದ ಆರ್‌ಸಿಬಿ ಕಪ್ ಗೆದ್ದ ಸಂಭ್ರಮಾಚರಣೆ ವೇಳೆ ಉಂಟಾದ ಕಾಲ್ತುಳಿತದಿಂದಾಗಿ 11 ಮಂದಿ ಅಭಿಮಾನಿಗಳು ಅಸುನೀಗಿದ್ದರು. ಈ ದುರ್ಘಟನೆಯ ಬಳಿಕ ರಾಯಲ್ ಚಾಲೆಂಜರ್ಸ್ ಬೆಂಗಳೂರು ತನ್ನ ಸೋಷಿಯಲ್ ಮೀಡಿಯಾ ಖಾತೆಯಲ್ಲಿ ಯಾವುದೇ ಪೋಸ್ಟ್ ಹಂಚಿಕೊಂಡಿರಲಿಲ್ಲ. ಇದೀಗ ಬರೋಬ್ಬರಿ 84 ದಿನಗಳ ಬಳಿಕ ರಾಯಲ್ ಚಾಲೆಂಜರ್ಸ್ ಬೆಂಗಳೂರು ಸೋಷಿಯಲ್ ಮೀಡಿಯಾ ಖಾತೆಗಳಲ್ಲಿ ಪೋಸ್ಟ್ ಒಂದು ಕಾಣಿಸಿಕೊಂಡಿದೆ. ಅದು ಸಹ ಅಭಿಮಾನಿಗಳಿಗಾಗಿ ಹೊಸ ಭರವಸೆಯನ್ನು ನೀಡುವ ಮೂಲಕ ಎಂಬುದು ವಿಶೇಷ.

ನಿಮ್ಮೊಂದಿಗೆ ನಿಲ್ಲುವ ಭರವಸೆ

**ಆರ್‌ಸಿಬಿ ಪೋಸ್ಟ್ ಸಾರಾಂಶ ಹೀಗಿದೆ:**

ನಾವು ಪೋಸ್ಟ್ ಮಾಡಿ ಸುಮಾರು ಮೂರು ತಿಂಗಳಕಾಲ ಕಳೆದಿದೆ. ನಮ್ಮ ಮೌನ, ಖಾಲಿತನದಿಂದಷ್ಟೇ ಅಲ್ಲ, ದುಃಖದಿಂದ ತುಂಬಿದ ತೀವ್ರವಾದ ಮೌನ. ಈ ಮಾಧ್ಯಮದ ಮುಖಾಂತರ ನೀವೆಲ್ಲಾ ಸಂತೋಷದಿಂದ ಸಂಭ್ರಮಿಸುವ ವಿಷಯಗಳನ್ನು ಮತ್ತು ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದೆವು. ಆದರೆ ಜೂನ್ 4ರ ಘಟನೆ ಎಲ್ಲವನ್ನೂ ಬದಲಾಯಿಸಿತು.



ಆ ದಿನ ನಮ್ಮ ಹೃದಯವನ್ನು ಮುರಿಯಿತು. ನಂತರದ ಮೌನವು ಕೇವಲ ನಿಶ್ಯಬ್ದವಲ್ಲ, ಅದು ಶ್ರದ್ಧೆಯಿಂದ ತುಂಬಿದ ಶಾಂತ ಶ್ರದ್ಧಾಂಜಲಿ. ಈ ಮೌನದೊಳಗೆ ನೋವನ್ನು ಅನುಭವಿಸುತ್ತಾ ನಾವು ಆಳವಾಗಿ ಯೋಚಿಸಿದ್ದೆವು ಮತ್ತು ಅನೇಕ ವಿಷಯಗಳನ್ನು ಕಲಿತೆವು. ನೋವನ್ನೇ ಶ್ರದ್ಧೆಯಾಗಿ, ನಂಬಿಕೆಯಾಗಿ ರೂಪಿಸಬೇಕೆಂದು ತೀರ್ಮಾನಿಸಿದ್ದೆವು. ಅದರ ಫಲವೇ ಆರ್‌ಸಿಬಿ ಕೇರ್ಸ್. ನಮ್ಮ ಅಭಿಮಾನಿಗಳು ಮತ್ತು ಸಮುದಾಯಕ್ಕಾಗಿ ನಿಷ್ಠೆಯಿಂದ ರೂಪಿಸಿದ ಒಂದು ಯೋಜನೆ. ಇಂದು ನಾವು ಮರಳಿದ್ದೇವೆ. ನಿಮ್ಮೊಂದಿಗೆ ನಿಲ್ಲುವ ಭರವಸೆಯನ್ನು ನೀಡುತ್ತಾ, ಕರ್ನಾಟಕದ ಹೆಮ್ಮೆಯಾಗಿ ಮುಂದೆ ಸಾಗುತ್ತೇವೆ. ಇದು ನಮ್ಮ ಕಾಳಜಿ, ನಮ್ಮ ಪ್ರತಿಜ್ಞೆ.

ಈ ಪೋಸ್ಟ್ ಮೂಲಕ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ಅಭಿಮಾನಿಗಳಿಗಾಗಿ ವಿಶೇಷ ಕಾಳಜಿವಹಿಸಲು ನಿರ್ಧರಿಸಿದೆ. ಇದಕ್ಕಾಗಿ ಟ್ರಸ್ಟ್‌ವೊಂದನ್ನು ರೂಪಿಸುವ ಸಾಧ್ಯತೆಯಿದ್ದು, ಈ ಮೂಲಕ ಕಾಲ್ತುಳಿತದಿಂದ ಮೃತಪಟ್ಟಿರುವ ಅಭಿಮಾನಿಗಳ ಕುಟುಂಬಕ್ಕೆ ನೆರವಾಗುವ ಯೋಜನೆ ರೂಪಿಸಲಾಗಿದೆ ಎಂದು ತಿಳಿದು ಬಂದಿದೆ.

ಒಟ್ಟಿನಲ್ಲಿ ಕಳೆದ ಮೂರು ತಿಂಗಳುಗಳಿಂದ ಸದ್ದು ಸುದ್ದಿಯಿಲ್ಲದೇ ಮೌನವಾಗಿದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿಯ ಆರ್‌ಸಿಬಿ ಕೇರ್ಸ್ ಪೋಸ್ಟ್ ಅನ್ನು ಅಭಿಮಾನಿಗಳು ತುಂಬು ಹೃದಯದಿಂದ ಸ್ವಾಗತಿಸಿದ್ದಾರೆ. ಅಲ್ಲದೆ ಮುಂಬರುವ ದಿನಗಳಲ್ಲಿ ಆರ್‌ಸಿಬಿ ಸೋಷಿಯಲ್ ಮೀಡಿಯಾದ ಖಾತೆಗಳಲ್ಲಿ ಕ್ರಿಕೆಟ್ ಸಂಬಂಧಿಸಿದ ಎಲ್ಲಾ ಅಪ್‌ಡೇಟ್‌ಗಳು ಸಿಗುವ ನಿರೀಕ್ಷೆಯಿದೆ.

# ಟೀಮ್ ಇಂಡಿಯಾದ ಮೂವರು ಗೇಮ್ ಚೇಂಜರ್ಸ್

ಯುಎಇನಲ್ಲಿ ನಡೆಯಲಿರುವ ಈ ಬಾರಿಯ ಏಷ್ಯಾಕಪ್‌ನಲ್ಲಿ ಒಟ್ಟು 8 ತಂಡಗಳು ಕಣಕ್ಕಿಳಿಯಲಿವೆ. ಈ ತಂಡಗಳಲ್ಲಿ ಭಾರತ, ಪಾಕಿಸ್ತಾನ್, ಒಮಾನ್ ಮತ್ತು ಯುಎಇ ಗ್ರೂಪ್ ಎ ನಲ್ಲಿದ್ದರೆ, ಬಾಂಗ್ಲಾದೇಶ್, ಅಫ್ಘಾನಿಸ್ತಾನ್, ಹಾಂಗ್ ಕಾಂಗ್ ಹಾಗೂ ಶ್ರೀಲಂಕಾ ಬಿ ಗ್ರೂಪ್‌ನಲ್ಲಿದೆ.

ಹೀಗಾಗಿ ಮೊದಲ ಸುತ್ತಿನಲ್ಲೇ ಭಾರತ ಮತ್ತು ಪಾಕಿಸ್ತಾನ್ ತಂಡಗಳ ಮುಖಾಮುಖಿಯನ್ನು ಎದುರು ನೋಡಬಹುದು. ಏಷ್ಯನ್ ರಾಷ್ಟ್ರಗಳ ಕ್ರಿಕೆಟ್ ಕದನ ಏಷ್ಯಾಕಪ್ ಟೂರ್ನಿಯು ಸೆಪ್ಟೆಂಬರ್ 9 ರಿಂದ ಶುರುವಾಗಲಿದೆ.

ಯುಎಇನಲ್ಲಿ ನಡೆಯಲಿರುವ ಈ ಟೂರ್ನಿಯ ಮೊದಲ ಸುತ್ತಿನಲ್ಲಿ ಭಾರತ ತಂಡವು ಯುಎಇ, ಪಾಕಿಸ್ತಾನ್ ಹಾಗೂ ಒಮಾನ್ ತಂಡಗಳನ್ನು ಎದುರಿಸಲಿದೆ. ಈ ಪಂದ್ಯಗಳಲ್ಲಿ ಗೆದ್ದರೆ ಟೀಮ್ ಇಂಡಿಯಾ ಸೂಪರ್-4 ಹಂತಕ್ಕೇರಲಿದೆ. ಹೀಗೆ ಸೂಪರ್ ಫೋರ್ ಹಂತಕ್ಕೇರುವ ಮೂಲಕ ಭಾರತ ತಂಡಕ್ಕೆ ಕಪ್ ಗೆದ್ದುಕೊಡಬಲ್ಲ ಮೂವರು ಆಟಗಾರರನ್ನು ಹೆಸರಿಸಿದ್ದಾರೆ ಟೀಮ್ ಇಂಡಿಯಾದ ಮಾಜಿ ಆಟಗಾರ ವೀರೇಂದ್ರ ಸೆಹ್ವಾಗ್.

ಖಾಸಗಿ ಚಾನೆಲ್‌ನ ಸಂದರ್ಶನದಲ್ಲಿ ಕಾಣಿಸಿಕೊಂಡ ವೀರೇಂದ್ರ ಸೆಹ್ವಾಗ್ ಅವರಿಗೆ ಏಷ್ಯಾಕಪ್‌ನಲ್ಲಿ ಯಾರೆಲ್ಲಾ ಟೀಮ್ ಇಂಡಿಯಾ ಪರ ಗೇಮ್ ಚೇಂಜರ್ ಆಗಬಲ್ಲರು ಎಂದು ಪ್ರಶ್ನಿಸಲಾಗಿತ್ತು. ಈ ಪ್ರಶ್ನೆಗೆ ಉತ್ತರಿಸಿದ ಸೆಹ್ವಾಗ್, ಮೂವರು ಆಟಗಾರರ ಹೆಸರನ್ನು ಹೆಸರಿಸಿದ್ದಾರೆ. ಅವರೆಂದರೆ


ಅಗ್ರ ಕ್ರಮಾಂಕದಲ್ಲಿ ತಮ್ಮ ಸ್ಫೋಟಕ ಬ್ಯಾಟಿಂಗ್ ಮೂಲಕ ಹೆಸರು ಮಾಡಿರುವ ಉದಯೋನ್ಮುಖ ತಾರೆ ಅಭಿಷೇಕ್ ಶರ್ಮಾ ಇಡೀ ಪಂದ್ಯದ ಚಿತ್ರಣ ಬದಲಿಸಬಲ್ಲ ಆಟಗಾರ. ಆಕ್ರಮಣಕಾರಿ ಬ್ಯಾಟಿಂಗ್‌ಗೆ ಒತ್ತು ನೀಡುವ ಅಭಿಷೇಕ್ ಶರ್ಮಾ ಅವರ ಆಟದಿಂದ ಟೀಮ್ ಇಂಡಿಯಾ ಪಂದ್ಯವನ್ನು ಗೆಲ್ಲುವ ಸಾಧ್ಯತೆಗಳು ಹೆಚ್ಚಿವೆ.

ಹಾಗೆಯೇ ಚಾಂಪಿಯನ್ಸ್ ಟ್ರೋಫಿ ಟೂರ್ನಿಯಲ್ಲಿ ಸ್ಪಿನ್ ಮೋಡಿಯೊಂದಿಗೆ ಸಂಚಲನ ಸೃಷ್ಟಿಸಿರುವ ವರುಣ್ ಚಕ್ರವರ್ತಿ ಕೂಡ ಪ್ರಮುಖ ಪಾತ್ರವಹಿಸಲಿದ್ದಾರೆ. ವರುಣ್ ಅವರ ಬೌಲಿಂಗ್ ಟಿ20 ಸ್ವರೂಪದಲ್ಲಿ ಬಹಳ ಪರಿಣಾಮಕಾರಿ. ಹೀಗಾಗಿ ಅವರು ಸಹ ಭಾರತದ ಗೆಲುವುಗಳಲ್ಲಿ ನಿರ್ಣಾಯಕ ಪಾತ್ರವಹಿಸಲಿದ್ದಾರೆ.

ಇನ್ನು ಜಸ್‌ಪ್ರೀತ್ ಬುಮ್ರಾ ಬಗ್ಗೆ ಹೇಳಬೇಕಿಲ್ಲ. ಕಳೆದ ವರ್ಷದ ಟಿ20 ವಿಶ್ವಕಪ್‌ನಲ್ಲಿ ಭಾರತ ಪ್ರಶಸ್ತಿ ಗೆಲ್ಲುವಲ್ಲಿ ಬುಮ್ರಾ ಪ್ರಮುಖ ಪಾತ್ರ ವಹಿಸಿದ್ದರು. ಹೀಗಾಗಿ ಏಷ್ಯಾಕಪ್‌ನಲ್ಲೂ ಬುಮ್ರಾ ಕಡೆಯಿಂದ ಭರ್ಜರಿ ಪ್ರದರ್ಶನವನ್ನು ನಿರೀಕ್ಷಿಸಬಹುದು ಎಂದು ವೀರೇಂದ್ರ ಸೆಹ್ವಾಗ್ ಹೇಳಿದ್ದಾರೆ.

**ಭಾರತ ತಂಡ:** ಸಂಜು ಸ್ಯಾಮ್ಸನ್ , ಅಭಿಷೇಕ್ ಶರ್ಮಾ, ತಿಲಕ್ ವರ್ಮಾ, ಸೂರ್ಯಕುಮಾರ್ ಯಾದವ್ (ನಾಯಕ), ಶುಭ್‌ಮನ್ ಗಿಲ್ , ಹಾರ್ದಿಕ್ ಪಾಂಡ್ಯ, ಶಿವಂ ದುಬೆ, ಅಕ್ಷರ್ ಪಟೇಲ್, ಜಸ್ಪ್ರೀತ್ ಬುಮ್ರಾ, ಅರ್ಷದೀಪ್ ಸಿಂಗ್, ವರುಣ್ ಚಕ್ರವರ್ತಿ, ಜಿತೇಶ್ ಶರ್ಮಾ, ಕುಲ್ದೀಪ್ ಯಾದವ್, ಹರ್ಷಿತ್ ರಾಣಾ, ರಿಂಕು ಸಿಂಗ್.

ಗೆಲುವುಗಳಲ್ಲಿ ನಿರ್ಣಾಯಕ ಪಾತ್ರ





# ರಿಯಾನ್ ಪರಾಗ್‌ಗೆ ಕ್ಯಾಪ್ಟನ್ ಪಟ್ಟ

ದುಲೀಪ್ ಟ್ರೋಫಿ ಟೂರ್ನಿಯು ಆಗಸ್ಟ್ 28 ರಿಂದ ಸೆಪ್ಟೆಂಬರ್ 11 ರವರೆಗೆ ನಡೆಯಲಿದೆ. 6 ತಂಡಗಳು ಕಣಕ್ಕಿಳಿಯಲಿರುವ ಈ ಟೂರ್ನಿಯು ನಾಕೌಟ್ ಮಾದರಿಯಲ್ಲಿ ಜರುಗಲಿದೆ. ಅದರಂತೆ ಮೊದಲ ಸುತ್ತಿನಲ್ಲಿ ಕ್ವಾರ್ಟರ್ ಫೈನಲ್ ಪಂದ್ಯಗಳು ಜರುಗಲಿದ್ದು, ಇದಾದ ಬಳಿಕ ಸೆಮಿಫೈನಲ್ ಆಡಲಿದ್ದಾರೆ.

ದುಲೀಪ್ ಟ್ರೋಫಿ ಟೆಸ್ಟ್ ಟೂರ್ನಿಯು ಶುರು ಆಗಿದೆ. ಬೆಂಗಳೂರಿನ ಬಿಸಿಸಿಐ ಸೆಂಟರ್ ಆಫ್ ಎಕ್ಸಲೆನ್ಸ್ ಮೈದಾನದಲ್ಲಿ ನಡೆಯುತ್ತಿರುವ ಮೊದಲ ಪಂದ್ಯದಲ್ಲಿ ಉತ್ತರ ವಲಯ ಹಾಗೂ ಪೂರ್ವ ವಲಯ ತಂಡಗಳು ಮುಖಾಮುಖಿಯಾಗಿದೆ. ಆದರೆ ಈ ಪಂದ್ಯದಿಂದ ಪೂರ್ವ ವಲಯ ತಂಡದ ನಾಯಕ ಅಭಿಮನ್ಯು ಈಶ್ವರನ್ ಹೊರಗೆ ಉಳಿದಿದ್ದಾರೆ. ಇದಕ್ಕೂ ಮುನ್ನ ಪೂರ್ವ ವಲಯ ತಂಡದ ನಾಯಕರಾಗಿ ಇಶಾನ್ ಕಿಶನ್ ಆಯ್ಕೆಯಾಗಿದ್ದರು. ಆದರೆ ಗಾಯದ ಸಮಸ್ಯೆಯ ಕಾರಣ ಕಿಶನ್ ಟೂರ್ನಿಯಿಂದ ಹೊರಗುಳಿದಿದ್ದರು. ಹೀಗಾಗಿ ಅಭಿಮನ್ಯು ಈಶ್ವರನ್ ಅವರಿಗೆ ಕ್ಯಾಪ್ಟನ್ ನೀಡಲಾಗಿತ್ತು. ಆದರೆ ಗುರುವಾರ ಬೆಳಿಗ್ಗೆ ಟಾಸ್ ವೇಳೆ ರಿಯಾನ್ ಪರಾಗ್ ನಾಯಕರಾಗಿ ಕಾಣಿಸಿಕೊಂಡಿದ್ದಾರೆ.

ಅಭಿಮನ್ಯು ಈಶ್ವರನ್ ಹೊರಗುಳಿದಿದ್ದೇಕೆ ಅಭಿಮನ್ಯು ಈಶ್ವರನ್ ಅವರು ಜ್ವರದಿಂದ ಬಳಲುತ್ತಿದ್ದು, ಹೀಗಾಗಿ ಮೊದಲ ಪಂದ್ಯದಿಂದ ಹಿಂದೆ ಸರಿದಿದ್ದಾರೆ.

ಹೀಗಾಗಿ ಈ ಪಂದ್ಯದಲ್ಲಿ ಪೂರ್ವ ವಲಯ ತಂಡದ ನಾಯಕನಾಗಿ ರಿಯಾನ್ ಪರಾಗ್ ಕಾಣಿಸಿಕೊಂಡಿದ್ದಾರೆ. ಇನ್ನು ರಿಯಾನ್ ಪರಾಗ್ ಮುಂದಾಳತ್ವದಲ್ಲಿ ಟೀಮ್ ಇಂಡಿಯಾ ಆಟಗಾರರಾದ ಮೊಹಮ್ಮದ್ ಶಮಿ, ಮುಖೇಶ್ ಕುಮಾರ್ ಕಣಕ್ಕಿಳಿದಿದ್ದಾರೆ.

**ಶುಭ್‌ಮನ್ ಗಿಲ್ ಅಲಭ್ಯ:** ಈ ಬಾರಿಯ ದುಲೀಪ್ ಟ್ರೋಫಿಯಲ್ಲಿ ಭಾರತ ಟೆಸ್ಟ್ ತಂಡದ ನಾಯಕ ಶುಭ್‌ಮನ್ ಗಿಲ್ ಉತ್ತರ ವಲಯ ಟೀಮ್‌ನ ಕ್ಯಾಪ್ಟನ್ ಆಗಿ ಕಣಕ್ಕಿಳಿಯಬೇಕಿತ್ತು. ಆದರೆ ಅನಾರೋಗ್ಯದ ಕಾರಣ ಅವರು ಸಹ ಟೂರ್ನಿಯಿಂದ ಹೊರಗುಳಿದಿದ್ದಾರೆ. ಹೀಗಾಗಿ ಉತ್ತರ ವಲಯ ತಂಡವನ್ನು ಅಂಕಿತ್ ಕುಮಾರ್ ಮುನ್ನಡೆಸುತ್ತಿದ್ದಾರೆ.

**ಮ್ಯಾಚ್ ವಿವರ:** ಈ ಪಂದ್ಯದಲ್ಲಿ ಟಾಸ್ ಗೆದ್ದಿರುವ ಪೂರ್ವ ವಲಯ ತಂಡದ ನಾಯಕ ರಿಯಾನ್ ಪರಾಗ್ ಬೌಲಿಂಗ್ ಆಯ್ದುಕೊಂಡಿದ್ದಾರೆ. ಅದರಂತೆ ಉತ್ತರ ವಲಯ ತಂಡವು ಮೊದಲು ಬ್ಯಾಟಿಂಗ್ ಆರಂಭಿಸಿದೆ. ಅಲ್ಲದೆ 35 ಓವರ್‌ಗಳ ಮುಕ್ತಾಯದ ವೇಳೆಗೆ ಉತ್ತರ ವಲಯ ತಂಡವು 3 ವಿಕೆಟ್ ಕಳೆದುಕೊಂಡು 140 ರನ್ ಕಲೆಹಾಕಿದೆ.




ನಾಯಕ ಅಭಿಮನ್ಯು ಈಶ್ವರನ್ ಹೊರಕ್ಕೆ

# ಮೊದಲ ಪಂದ್ಯದಲ್ಲೇ ಆರ್ಯವೀರ್ ಸೆಹ್ವಾಗ್ ಆರ್ಭಟ

ಟೀಮ್ ಇಂಡಿಯಾದ ಮಾಜಿ ಡ್ಯಾಶಿಂಗ್ ಓಪನರ್ ವೀರೇಂದ್ರ ಸೆಹ್ವಾಗ್ ಅವರ ಸುಪುತ್ರ ಆರ್ಯವೀರ್ ಸೆಹ್ವಾಗ್ ಡೆಲ್ಲಿ ಪ್ರೀಮಿಯರ್ ಲೀಗ್‌ನಲ್ಲಿ ಪಾದಾರ್ಪಣೆ ಮಾಡಿದ್ದಾರೆ. ಸೆಂಟ್ರಲ್ ಡೆಲ್ಲಿ ಕಿಂಗ್ಸ್ ಪರ ಚೊಚ್ಚಲ ಪಂದ್ಯವಾಡಿರುವ ಆರ್ಯವೀರ್ ಬಿರುಸಿನ ಬ್ಯಾಟಿಂಗ್ ಪ್ರದರ್ಶಿಸಿದ್ದಾರೆ.

ದೆಹಲಿಯ ಅರುಣ್ ಜೇಟ್ಲಿ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಸೆಂಟ್ರಲ್ ಡೆಲ್ಲಿ ಕಿಂಗ್ಸ್ ಹಾಗೂ ಈಸ್ಟ್ ಡೆಲ್ಲಿ ರೈಡರ್ಸ್ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಟಾಸ್ ಗೆದ್ದ ಈಸ್ಟ್ ಡೆಲ್ಲಿ ರೈಡರ್ಸ್ ತಂಡದ ನಾಯಕ ಅನೂಜ್ ರಾವತ್ ಬೌಲಿಂಗ್ ಆಯ್ದುಕೊಂಡರು.

ಅದರಂತೆ ಸೆಂಟ್ರಲ್ ಡೆಲ್ಲಿ ಕಿಂಗ್ಸ್ ಪರ ಆರಂಭಿಕನಾಗಿ ಆರ್ಯವೀರ್ ಸೆಹ್ವಾಗ್ ಹಾಗೂ ಕೌಶಲ್ ಸುಮನ್ ಕಣಕ್ಕಿಳಿದಿದ್ದರು. 11 ಎಸೆತಗಳಲ್ಲಿ 9 ರನ್‌ಗಳಿಸಿ ಕೌಶಲ್ ಔಟಾದರೆ, ಮತ್ತೊಂದೆಡೆ ಆರ್ಯವೀರ್ ಅನುಭವಿ ಬೌಲರ್‌ಗಳ ಮುಂದೆ ಆರ್ಭಟಿಸಿದರು. ಅದರಲ್ಲೂ ಟೀಮ್ ಇಂಡಿಯಾ ವೇಗಿ ನವದೀಪ್ ಸೈನಿ ಎಸೆತದಲ್ಲಿ ಆಕರ್ಷಕ ಫೋರ್ ಬಾರಿಸಿ ಗಮನ ಸೆಳೆದರು.

ಚೊಚ್ಚಲ ಪಂದ್ಯದಲ್ಲೇ ಆಕ್ರಮಣಕಾರಿ ಬ್ಯಾಟಿಂಗ್‌ಗೆ ಒತ್ತು ನೀಡಿದ್ದ ಆರ್ಯವೀರ್ ಸೆಹ್ವಾಗ್ 16 ಎಸೆತಗಳನ್ನು ಎದುರಿಸಿ 4 ಫೋರ್‌ಗಳೊಂದಿಗೆ 22 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಇನ್ನು ಈ ಪಂದ್ಯದಲ್ಲಿ ಯುಗಲ್ ಸೈನಿ ಬಾರಿಸಿದ 52 ರನ್‌ಗಳ ನೆರವಿನೊಂದಿಗೆ ಸೆಂಟ್ರಲ್ ಡೆಲ್ಲಿ ಕಿಂಗ್ಸ್ ತಂಡವು 20 ಓವರ್‌ಗಳಲ್ಲಿ 6 ವಿಕೆಟ್ ಕಳೆದುಕೊಂಡು 155 ರನ್ ಕಲೆಹಾಕಿತು.

156 ರನ್‌ಗಳ ಗುರಿ ಬೆನ್ನತ್ತಿದ ಈಸ್ಟ್ ಡೆಲ್ಲಿ ರೈಡರ್ಸ್ ತಂಡವು ಮೋನಿ ಗ್ರೆವಾಲ್ ಅವರ ಮಾರಕ ದಾಳಿಗೆ ತತ್ತರಿಸಿತು. 4 ಓವರ್ ಎಸೆದ ಮೋನಿ ಗ್ರೆವಾಲ್ ಹ್ಯಾಟ್ರಿಕ್ ವಿಕೆಟ್‌ನೊಂದಿಗೆ ಕೇವಲ 23 ರನ್ ನೀಡಿ 5 ವಿಕೆಟ್ ಕಬಳಿಸಿದರು. ಪರಿಣಾಮ ಈಸ್ಟ್ ಡೆಲ್ಲಿ ರೈಡರ್ಸ್ ತಂಡವು 16 ಓವರ್‌ಗಳಲ್ಲಿ 93 ರನ್‌ಗಳಿಗೆ

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**